ಸಂಪುಟ: 04 ಸಂಚಿಕೆ: 192 ಪುಟಗಳು: 08 ಮಂಗಳವಾರ 24 ಸೆಪ್ಟೆಂಬರ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜೀವನ ಎಂಬುದು ಕಠಿಣ ಸತ್ಯ, ಅದನ್ನು ಎದುರಿಸಿ, ನಿಮ್ಮ ಮಾರ್ಗದಲ್ಲಿ ಮುಂದುವರೆಯಿರಿ ಅದು ಅಭೇದ್ಯವಾಗಿರಬಹುದು. ಆದರೆ ಆತ್ಮ ಅದಕ್ಕಿಂತ ಬಲಯುತವಾದುದು.

## ತಿಮ್ಮಪ್ಪನ ಸನ್ನಿಧಿ ಭಕ್ತರ ಮನ ಶುದ್ಧಿ






- ತಿರುಪತಿ ಲಡ್ಡು ವಿವಾದ
- ಪ್ರಸಾದದಲ್ಲಿ ಕಲಬೆರಕೆ, ಅಪವಿತ್ರಕ್ಕೆ ಡೋಂಟ್ ಕೇರ್
- ತಿರುಪತಿ ತಿಮ್ಮಪ್ಪನ ಲಡ್ಡು ಪ್ರಸಾದಕ್ಕೆ ಮುಗಿಬಿದ್ದ ಭಕ್ತರು

## ಭಾವನೆಗೆ ಧಕ್ಕೆಯಾಗದಂತೆ ಮಹಿಷಾ ದಸರಾ ಆಚರಿಸಲಿ: ಯದುವೀರ್

• ಉದಯವಾಹಿನಿ, ಮೈಸೂರು

ತಾಯಿ ಚಾಮುಂಡೇಶ್ವರಿ ದೇವಿಯಲ್ಲಿ ಮತ್ತು ಧರ್ಮದಲ್ಲಿ ನಂಬಿಕೆ ಇಟ್ಟಿರುವವರ ಭಾವನೆಗೆ ಧಕ್ಕೆಯಾಗದ ರೀತಿಯಲ್ಲಿ ಯಾವುದೇ ಆಚರಣೆ ಮಾಡಿಕೊಳ್ಳಲಿ. ಆದರೆ, ಮಹಿಷಾ ಪ್ರತಿಮೆಗೆ ಪುಷ್ಪಾರ್ಚನೆ ಮಾಡಲು ಅವಕಾಶ ಮಾಡಿಕೊಡಬೇಕೆಂಬ ಬೇಡಿಕೆ ವಿಚಾರದಲ್ಲಿ ಜಿಲ್ಲಾಡಳಿತ ಸೂಕ್ತ ಕ್ರಮಕೈಗೊಳ್ಳಲಿ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದರು.

ಮಹಿಷಾ ದಸರೆಯ ಬದಲಿಗೆ ಮಹಿಷಾ ಮಂಡಲೋತ್ಸವ ಆಚರಣೆ ಮಾಡುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಜವಾಬ್ದಾರಿಯುತ ಪ್ರತಿನಿಧಿಗಳಾದ ನಾವು ಅಧಿಕಾರಿಗಳಿಗೆ ಬೆಟ್ಟದಲ್ಲಿ ಏನು ಪರಂಪರೆ, ಸಂಪ್ರದಾಯ ಇದೆ, ನಮ್ಮ ನಂಬಿಕೆ ಏನಿದೆ ಎಂಬುದನ್ನು ತಿಳಿಸಿದ್ದೇವೆ. ಯಾರ ಮನಸ್ಸಿಗೂ ಘಾಸಿಯಾಗದ ರೀತಿಯಲ್ಲಿ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

## ಹಿಂದೂ ಹಬ್ಬಗಳ ರಕ್ಷಣೆಗೆ ತಲವಾರು ಹಿಡಿದ 50 ಯುವಕರು

• ಉದಯವಾಹಿನಿ, ಮಂಗಳೂರು

ರಾಜ್ಯ ಸರ್ಕಾರದಿಂದ ಹಿಂದೂ ಹಬ್ಬಗಳಿಗೆ ರಕ್ಷಣೆ ಇಲ್ಲ ಎಂಬುದು ಸಾಬೀತಾಗಿದೆ. ಹಾಗಾಗಿ ನಾವೇ ಶಸ್ತ್ರ ಹಿಡಿದು ಹಬ್ಬ ಆಚರಿಸಲು ನಿರ್ಧರಿಸಿದ್ದೇವೆ. ಮುಂಬರುವ ಗಣೇಶ ಚತುರ್ಥಿ ಸಂದರ್ಭದಲ್ಲಿ, ಆಯೋಜಕರು ವಿನಂತಿಸಿದರೆ ಮೆರವಣಿಗೆಯ ರಕ್ಷಣೆಗಾಗಿ 50 ಯುವಕರನ್ನು ತಲವಾರು ಸಹಿತ ಕಳುಹಿಸಲು ಸಿದ್ಧ' ಎಂದು ಶ್ರೀ ರಾಮಸೇನೆಯ ರಾಜ್ಯ ಘಟಕದ ಅಧ್ಯಕ್ಷ ಗಂಗಾಧರ ಕುಲಕರ್ಣಿ ತಿಳಿಸಿದರು. ಇಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ನಿಮಗಷ್ಟೇ ಕಲ್ಲು ಹಿಡಿಯಲು, ತಲವಾರು ಹಿಡಿಯಲು ಬರುವುದಲ್ಲ. ಹಿಂದೂ ಸಮಾಜಕ್ಕೂ ಗೊತ್ತಿದೆ ಎಂದು ಮುಸ್ಲಿಂ ಗುಂಡಾಗಳಿಗೆ ಹೇಳಬಯಸುತ್ತೇನೆ' ಎಂದರು.

ನಾಗಮಂಗಲ, ದಾವಣಗೆರೆಗಳಲ್ಲಿ ಗಣೇಶೋತ್ಸವ ಮೆರವಣಿಗೆ ಸಂದರ್ಭದಲ್ಲಿ ಗಲಾಟೆ ಮಾಡಲಾಗಿದೆ. ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಜಿಹಾದಿ ಶಕ್ತಿಗಳು ಪೆಟ್ರೋಲ್ ಬಾಂಬ್ ಎಸೆಯುವ ಮಟ್ಟಕ್ಕೆ ತಲುಪಿದ್ದಾರೆ. ರಾಜ್ಯ ಸರ್ಕಾರ ಸಂಪೂರ್ಣವಾಗಿ ಅವರ ಜೊತೆಗೆ ನಿಂತಿರುವುದೇ ಇದಕ್ಕೆ ಕಾರಣ. ಮುಸ್ಲಿಂ ಗೂಂಡಾಗಳು 'ನಮ್ಮದೇ ಸರ್ಕಾರ ಇದೆ' ಎಂದು ಬಹಿರಂಗವಾಗಿ ಹೇಳಿಕೆ ನೀಡುತ್ತಿದ್ದಾರೆ' ಎಂದರು.

## ನಂದಿನಿ ತುಪ್ಪಕ್ಕೆ ದೇಶದಾದ್ಯಂತ ಬೇಡಿಕೆ: ಬಾಲಚಂದ್ರ ಜಾರಕಿಹೊಳಿ

• ಉದಯವಾಹಿನಿ, ಬೆಳಗಾವಿ

ತಿರುಮಲ ತಿರುಪತಿ ದೇವಸ್ಥಾನದಲ್ಲಿ 'ಲಡ್ಡು' ತಯಾರಿಕೆಗೆ ಪ್ರಾಣಿಗಳ ಕೊಬ್ಬು ಬಳಸಲಾಗುತ್ತಿತ್ತು ಎಂದು ಆಂಧ್ರಪ್ರದೇಶ ಸಿ.ಎಂ ಎನ್.ಚಂದ್ರಬಾಬು ನಾಯ್ಡು ಆರೋಪಿಸಿದ ನಂತರ, ಕರ್ನಾಟಕ ಹಾಲು ಒಕ್ಕೂಟ (ಕೆಎಂಎಫ್) ತಯಾರಿಸಿದ ನಂದಿನಿ ತುಪ್ಪಕ್ಕೆ ದೇಶದಾದ್ಯಂತ ಜನರು ಮತ್ತು ದೇವಾಲಯಗಳಿಂದ ಭಾರಿ ಬೇಡಿಕೆ ಬಂದಿದೆ' ಎಂದು ಜಿಲ್ಲಾ ಹಾಲು ಒಕ್ಕೂಟದ (ಬೆಮುಲ್) ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಇಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ನಾನು ಕೆಎಂಎಫ್ ಅಧ್ಯಕ್ಷನಿದ್ದಾಗ, ತಿರುಮಲ ತಿರುಪತಿ ದೇವಸ್ಥಾನಕ್ಕೆ 'ಲಡ್ಡು' ತಯಾರಿಕೆಗೆ ತುಪ್ಪ ಕಳುಹಿಸುತ್ತಿದ್ದೆವು. ನಾವೇ ತಯಾರಿಸಿದ ತುಪ್ಪವನ್ನು ಪ್ರಸಾದಕ್ಕೆ ಬಳಸಲಾಗುತ್ತಿದೆ ಎಂಬ ಹೆಮ್ಮೆ ನಮಗೂ ಇತ್ತು. ನಾಲ್ಕು ವರ್ಷಗಳ ಹಿಂದೆ ದೇವಸ್ಥಾನದವರು ಟೆಂಡರ್ ವ್ಯವಸ್ಥೆ ಪರಿಚಯಿಸಿದರು. ಆಗ ಕಡಿಮೆ ಮೊತ್ತಕ್ಕೆ ತುಪ್ಪ ಪೂರೈಸುವ ಗುತ್ತಿಗೆಯನ್ನು ಖಾಸಗಿ ಏಜೆನ್ಸಿ ಪಡೆಯಿತು. ಆಗ ರಾಜಕೀಯ ಮುಖಂಡರೊಬ್ಬರು ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷರಾದರು. ಗುಣಮಟ್ಟದ ಕಾರಣಕ್ಕಾಗಿ ಕಡಿಮೆ ದರಕ್ಕೆ ತುಪ್ಪ ಪೂರೈಕೆಗೆ ನಾವು ನಿರಾಕರಿಸಿದೆವು' ಎಂದರು.

## ಮುಡಾ ಹಗರಣ: ವಾದ ಪ್ರತಿವಾದ ಆಲಿಸಿದ ಹೈಕೋರ್ಟ್


• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ನೀಡಿದ್ದಂತ ಅನುಮತಿ ಪ್ರಶ್ನಿಸಿ ಸಲ್ಲಿಸಿದ್ದಂತ ಅರ್ಜಿಯ ವಿಚಾರಣೆಯ ನಂತ್ರ, ಇಂದು ಮಧ್ಯಾಹ್ನ 12 ಗಂಟೆಗೆ ಹೈಕೋರ್ಟ್ ತೀರ್ಪು ಪ್ರಕಟಿಸಲಿದೆ. ಸಿಎಂ ಸಿದ್ಧರಾಮಯ್ಯ ವಿರುದ್ಧ ಮುಡಾ ಹಗರಣದ ಆರೋಪ ಕೇಳಿ ಬಂದಿತ್ತು. ಈ ಪ್ರಕರಣ ಸಂಬಂಧ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮತಿ ನೀಡಿದ್ದರು.

ರಾಜ್ಯಪಾಲರು ಮುಡಾ ಹಗರಣ ಸಂಬಂಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದನ್ನು ಪ್ರಶ್ನಿಸಿ ಸಿಎಂ ಸಿದ್ಧರಾಮಯ್ಯ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ವಾದ ಪ್ರತಿವಾದವನ್ನು ಆಲಿಸಿದ್ದಂತ ಹೈಕೋರ್ಟ್ ತೀರ್ಪು ಕಾಯ್ದಿರಿಸಿತ್ತು.

ಹೈಕೋರ್ಟ್ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರು ಸಿಎಂ ಸಿದ್ಧರಾಮಯ್ಯ ವಿರುದ್ಧದ ಮುಡಾ ಹಗರಣದ ಸಂಬಂಧ ತೀರ್ಪನ್ನು ಮಧ್ಯಾಹ್ನ 12 ಗಂಟೆಗೆ ಪ್ರಕಟಿಸಲಿದ್ದಾರೆ. ಈ ಮೂಲಕ ಮುಡಾ ಹಗರಣದ ಸಿಎಂ ಭವಿಷ್ಯ ಇಂದು ನಿರ್ಧಾರವಾಗಲಿದೆ.

### ಶ್ರೀಗಳ ಮೌನವ್ರತ




ತಿರುಪತಿ ಪ್ರಸಾದದ ವಿಷಯದಲ್ಲಿ ನಡೆದ ಅಪವಿತ್ರ ಶುದ್ಧಿಗಾಗಿ ಶೃಂಗೇರಿ ಮಹಾಸಂಸ್ಥಾನದ ಶ್ರೀ ಅಭಿನವ ಶಂಕರಭಾರತಿ ಮಹಾಸ್ವಾಮಿಗಳು ಉಪವಾಸ ಹಾಗೂ ಮೌನ ವ್ರತ ಮಾಡಲಿದ್ದಾರೆ. ತಿರುಪತಿ ತಿಮ್ಮಪ್ಪನ ಲಡ್ಡುವಿನಲ್ಲಿ ಪ್ರಾಣಿಗಳ ಕೊಬ್ಬಿನಾಂಶ ಹಾಗೂ ಮೀನಿನ ಎಣ್ಣೆ ಕಲಬೆರಕೆ ಅಪವಿತ್ರ ಶುದ್ಧಿಗಾಗಿ ಶ್ರೀಗಳು ಮೂರು ದಿನಗಳ ಕಾಲ ಉಪವಾಸ ಹಾಗೂ ಮೌನ ವ್ರತ ಕೈಗೊಳ್ಳಲಿದ್ದಾರೆ.
ಆಗಿರುವ ಅಪಚಾರಕ್ಕೆ ಸಾರ್ವಜನಿಕರು ಪ್ರಾಯಶ್ಚಿತ್ತ ಮಾಡಿಕೊಳ್ಳಲು ಶ್ರೀಗಳು ಕರೆ ನೀಡಿದ್ದಾರೆ. ಯಾವುದೇ ಪುರೋಹಿತರ ಅಗತ್ಯವಿಲ್ಲದೇ ಸಾರ್ವಜನಿಕರು ಮನೆಯಲ್ಲಿಯೇ ಮೂರು ರೀತಿಯ ಸರಳ ಪ್ರಾಯಶ್ಚಿತ್ತ ವಿಧಾನ ಮಾಡಿಕೊಳ್ಳುವ ವಿಧಾನವನ್ನು ಸೂಚಿಸಿದ್ದಾರೆ.

### ಷರತ್ತು ಮೀರಿ ತುಪ್ಪ ಸರಬರಾಜು

ಹಿಂದಿನ ಷರತ್ತುಗಳ ಪ್ರಕಾರ, ತುಪ್ಪ ಸರಬರಾಜು ಮಾಡುವವರು ಕನಿಷ್ಠ ಮೂರು ವರ್ಷಗಳ ಅನುಭವವನ್ನು ಹೊಂದಿರಬೇಕು. ಆದರೆ, ಜಗನ್ ರೆಡ್ಡಿ ಅಧಿಕಾರಕ್ಕೆ ಬಂದ ನಂತರ ಅದನ್ನು ಒಂದು ವರ್ಷಕ್ಕೆ ಇಳಿಸಲಾಯಿತು. ಪೂರೈಕೆದಾರರ ಅಗತ್ಯ ವಹಿವಾಟು ಕೂಡ ಹಿಂದಿನ 250 ಕೋಟಿಯಿಂದ 150 ಕೋಟಿಗೆ ಇಳಿಕೆಯಾಗಿದೆ. ತಾಳೆ ಎಣ್ಣೆಯೂ ಅದಕ್ಕಿಂತ ದುಬಾರಿಯಾಗಿರುವಾಗ 319 ರೂ. ಗೆ ಶುದ್ಧ ತುಪ್ಪವನ್ನು ಹೇಗೆ ಪೂರೈಸಲು ಸಾಧ್ಯ ಎಂದು ಚಂದ್ರಬಾಬು ನಾಯ್ಡು ಪ್ರಶ್ನೆ ಮಾಡಿದ್ದಾರೆ.
ಚಂದ್ರಬಾಬು ನಾಯ್ಡು ಅವರು, ಜಗನ್ ಅಧಿಕಾರ ಅವಧಿಯಲ್ಲಿ ತಿರುಪತಿ ಲಡ್ಡುನಲ್ಲಿ ಪ್ರಾಣಿಗಳ ಕೊಬ್ಬು ಬೆರಕೆಯಾಗುತ್ತಿತ್ತು ಎಂದು ಹೇಳಿಕೆ ನೀಡಿದ್ದರು.

• ಉದಯವಾಹಿನಿ, ಹೈದರಾಬಾದ್

ಲಡ್ಡು ಪ್ರಸಾದದಲ್ಲಿ ಪ್ರಾಣಿಗಳ ಕೊಬ್ಬು ಕಲಬೆರಕೆ ಗೊಂದಲ, ಅಪವಿತ್ರದ ಸುದ್ದಿಗಳಿಗೆ ತಲೆಕೆಡಿಸಿಕೊಳ್ಳದ ಭಕ್ತರು ಸೋಮವಾರ ತಿರುಪತಿ ತಿಮ್ಮಪ್ಪನ ದರ್ಶನ ಪಡೆದು ಲಡ್ಡುಗಾಗಿ ಮುಗಿಬಿದ್ದರು. ತಿರುಪತಿ ಲಡ್ಡು ಪ್ರಸಾದ ಅಪವಿತ್ರ ಭಾವನೆಯನ್ನು ಭಕ್ತರಿಂದ ತೊಡೆದುಹಾಕಲು, ಶ್ರೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಇಂದು ಶುದ್ಧೀಕರಣ ಮಾಡಲಾಯಿತು. ಜೊತೆಗೆ ಮಹಾಶಾಂತಿ ಹೋಮ ಕೂಡ ನೆರವೇರಿಸಲಾಯಿತು. ಬಳಿಕ ಭಕ್ತರಿಗೆ ದೇವರ ದರ್ಶನಕ್ಕೆ ಅನುವು ಮಾಡಿಕೊಡಲಾಯಿತು. ಪ್ರಸಾದದ ವಿಚಾರವಾಗಿ ಸಾಕಷ್ಟು ವಿವಾದ ಎದ್ದಿದ್ದರೂ ಅದ್ಯಾವುದಕ್ಕೂ ಭಕ್ತರು ತಲೆಕೆಡಿಸಿಕೊಳ್ಳದೇ ಅಪಾರ ಸಂಖ್ಯೆಯಲ್ಲಿ ದೇವಾಲಯಕ್ಕೆ ಭೇಟಿ ನೀಡಿದ್ದರು. ತಿರುಪತಿ ತಿಮ್ಮಪ್ಪನಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತಿ-ಭಾವ ಮೆರೆದರು. ತಿಮ್ಮಪ್ಪನ ದರ್ಶನ ಬಳಿಕ ಲಡ್ಡು ತೆಗೆದುಕೊಳ್ಳಲು ಭಕ್ತರ ಸರತಿ ಸಾಲಿನಲ್ಲಿ ನಿಂತಿತ್ತು. ದರ್ಶನದ ಮಾದರಿಯಲ್ಲೇ ಲಡ್ಡುಗಾಗಿ ಉದ್ದುದ್ದ ಕ್ಯೂ ನಿಂತಿದ್ದರು. ಪ್ರಸಾದ ಕಲಬೆರಕೆ, ಅಪವಿತ್ರದ ಸುದ್ದಿಗಳಿಗೆ ಜನ ಡೋಂಟ್ ಕೇರ್ ಎಂದಿರುವಂತೆ ಕಂಡುಬಂತು. ಎಂದಿನಂತೆ ಲಡ್ಡು ಖರೀದಿ ಭರಾಟೆ ಜೋರಾಗಿತ್ತು. ಅದರಲ್ಲೂ ಕೆಎಂಎಫ್ ನಂದಿನಿ ತುಪ್ಪ ಬಳಕೆ ಬಳಿಕ ಸ್ವಾದಿಷ್ಟ, ಗುಣಮಟ್ಟವನ್ನು ಲಡ್ಡು ಕಾಯ್ದುಕೊಂಡಿದೆ. ಲಡ್ಡು ಸ್ವೀಕರಿಸಿ ಭಕ್ತರು ಖುಷಿ ಹಂಚಿಕೊಂಡರು. ಕೆಲವರು ಅಲ್ಲೇ ಪರಸ್ಪರ ಲಡ್ಡು ತಿನ್ನಿಸಿ ಭಕ್ತಿ ಮೆರೆದರು. ತಿರುಪತಿ ವೆಂಕಟೇಶ್ವರ ದೇಗುಲದಲ್ಲಿ ಸೋಮವಾರದು ಶುದ್ಧೀಕರಣ ಮಾಡಲಾಗಿದೆ. ಲಾಡು ಸಿದ್ಧಪಡಿಸುವ ತುಪ್ಪದಲ್ಲಿ ಪ್ರಾಣಿಯ ಕೊಬ್ಬು ಪತ್ತೆಯಾಗಿತ್ತು. ಈ ಹಿನ್ನೆಲೆ ದೇವಾಲಯವನ್ನು ಸಂಪ್ರೋಕ್ಷಣಾ ಕಾರ್ಯದ ಭಾಗವಾಗಿ ಶಾಂತಿ ಹೋಮ ನಡೆಸಲು ತಿರುಪತಿ ದೇವಸ್ಥಾನಂ ತೀರ್ಮಾನಿಸಿತ್ತು. ತಿರುಪತಿಯಲ್ಲಿ ಶಾಂತಿ ಹೋಮ ನಡೆಸಲಾಗಿದ್ದು, ತಿಮ್ಮಪ್ಪನ ಗರ್ಭಗುಡಿ ದೇಗುಲ ಸುತ್ತ ಅರ್ಚಕರು ಪಂಚಗವ್ಯ ಪ್ರೋಕ್ಷಣೆ ಮಾಡಿದರು. ತಿರುಪತಿಯಲ್ಲಿ ಇರುವ ಅರ್ಚಕರ ಸಮೂಹವು ಮಹಾ ಶಾಂತಿ ಹೋಮವನ್ನು ದೇಗುಲದ ಪ್ರಾಂಗಣದಲ್ಲಿ ನೆರವೇರಿಸಿತು. ಹಿಂದೂಗಳ ಶ್ರದ್ಧಾ ಭಕ್ತಿ ತಾಣವಾದ ತಿರುಪತಿಗೆ ಅಂಟಿಕೊಂಡಿರುವ ಕಳಂಕ ನಿವಾರಣೆಗಾಗಿ ಭಗವಂತನಲ್ಲಿ ಪ್ರಾರ್ಥಿಸಲಾಯ್ತು. ಲಡ್ಡು ಪ್ರಸಾದದ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಹಾಗೂ ದೇಗುಲದ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ವಿಶೇಷ ಪೂಜೆಗಳು ನಡೆದವು.





ಲಾಡು ತಯಾರಿಕೆಗೆ ಬಳಸುತ್ತಿದ್ದ ಜಾಗವನ್ನು ಶುದ್ಧೀಕರಣ ಮಾಡಲಾಗಿದ್ದು, ಅನ್ನ ಪ್ರಸಾದ ಸಿದ್ಧಪಡಿಸಿದ ಸ್ಥಳ ಸೇರಿದಂತೆ ದೇವಾಲಯದ ಆವರಣವನ್ನು ಶುದ್ಧೀಕರಣ ಮಾಡಲಾಗಿದೆ. ಶಾಂತಿ ಹೋಮದ ನಂತರ ವಾಸ್ತುಹೋಮವನ್ನು ನಡೆಸಲಾಯಿತು. ದೇಶಾದ್ಯಂತ ವಿವಾದ ಬಿರುಗಾಳಿ ಎಬ್ಬಿಸಿದ್ದ ತಿರುಪತಿ ಲಾಡು ಪ್ರಸಾದದ ತಯಾರಿಕೆಯಲ್ಲಿ ಪ್ರಾಣಿಗಳ ಕೊಬ್ಬು ಬಳಕೆಯಿಂದ ಅಪವಿತ್ರಗೊಂಡಿರುವ ತಿರುಮಲ ದೇವಾಲಯವನ್ನು ಸೋಮವಾರದು ಶುದ್ಧೀಕರಣ ಮಾಡಲಾಗಿದೆ.

ಆಗಮ ಶಾಸ್ತ್ರದ ವಿದ್ವಾಂಸರು ಮತ್ತು ಇತರ ತಜ್ಞರನ್ನೊಳಗೊಂಡ ವಿಶೇಷ ಸಮಿತಿಯು ಶುದ್ಧೀಕರಣಗೊಳಿಸುವ ವಿಧಿವಿಧಾನವನ್ನು ನೇರವೇರಿಸಲಾಯಿತು. ನಾಲ್ಕು ಗಂಟೆಗಳ ಕಾಲ ಶಾಂತಿ ಹೋಮ, ಪಂಚಗವ್ಯ ಪ್ರೋಕ್ಷಣೆ ಶುದ್ಧೀಕರಣ ನಡೆಸಲಾಯಿತು. ತಿರುಪತಿ ದೇವಸ್ಥಾನ ಸಮಿತಿ ಆಶ್ರಯದಲ್ಲಿ ಬೆಳಿಗ್ಗೆ 6 ಗಂಟೆಯಿಂದ 10 ಗಂಟೆಯವರೆಗೆ ಶುದ್ಧೀಕರಣ ನಡೆಸಲಾಗಿದೆ. ಮಧ್ಯಾಹದವರೆಗೂ ಧಾರ್ಮಿಕ ಕಾರ್ಯಗಳು ನಡೆಯಲಿದ್ದು, ಪ್ರಮುಖರು ಭಾಗವಹಿಸಿದ್ದಾರೆ. ಈ ಆಚರಣೆಯಿಂದ ಕೆಟ್ಟದ್ದು ನಿವಾರಣೆಯಾಗಿ ಭಕ್ತರ ಯೋಗಕ್ಷೇಮ ಜೊತೆಗೆ ಲಾಡುವಿನ ಪಾವಿತ್ರ್ಯತೆಯನ್ನು ಪುನರ್ ಸ್ಥಾಪಿಸುತ್ತದೆ



"ಲಾಡು ಪ್ರಸಾದ ತಯಾರಿಕೆ ವೇಳೆ ತುಪ್ಪದಲ್ಲಿ ಪ್ರಾಣಿಗಳ ಕೊಬ್ಬು ಮಿಶ್ರಣ ಮಾಡಿರುವ ಕುರಿತು ಆಂಧ್ರ ಪ್ರದೇಶದ ಮುಖ್ಯಮಂತ್ರಿ ಚಂದ್ರ ಬಾಬು ನಾಯ್ಡು ಎಸ್‌ಐಟಿ ತನಿಖೆಗೆ ಆದೇಶಿಸಿದ್ದಾರೆ.ಐಜಿ ಶ್ರೇಣಿಯ ಅಧಿಕಾರಿ ನೇತೃತ್ವದಲ್ಲಿ ಎಸ್‌ಐಟಿ ರಚಿಸಲಾಗಿದ್ದು, ಎಸ್‌ಐಟಿ ವರದಿಗಳ ಆಧಾರದ ಮೇಲೆ ಕಳಪೆ ಗುಣಮಟ್ಟದ ತಿರುಪತಿ ಲಾಡು ಅಪವಿತ್ರಕ್ಕೆ ಕಾರಣರಾದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು

–ಜೆ. ಶ್ಯಾಮಲಾ ರಾವ್, ಟಿಟಿಡಿ ಕಾರ್ಯನಿರ್ವಾಹಕ



"ರಾಜಕೀಯ ಹಿನ್ನೆಲೆಯಲ್ಲಿ ತಿರುಪತಿ ಲಾಡುವಿನಂತಹ ಪ್ರಕರಣಗಳಿಂದ ತೊಂದರೆಯಾಗುತ್ತವೆ, ಮಠ, ದೇವಾಲಯಗಳು ಸ್ಥಳೀಯ ಜನರ ನೇತೃತ್ವದಲ್ಲಿ ನಡೆಯುವಂತಾಗಬೇಕು. ಇದಕ್ಕೆ ಸನಾತನ ಧರ್ಮ ಪರೀರಕ್ಷಣಾ ಸಂಬಂಧ ರೂಪಿಸುವ ಯೋಜನೆಗೆ ಬೆಂಬಲ ನೀಡುತ್ತೇವೆ. ಮಠಾಧೀಶರ ನೇತೃತ್ವದಲ್ಲಿ ನಡೆಯಬೇಕು. ಹೀಗಾಗಿ ಮುಜರಾಯಿ ಇಲಾಖೆಯಿಂದ ಮಠ ಮಾನ್ಯಗಳ ದೇವಾಲಯ, ಧಾರ್ಮಿಕ ಶ್ರದ್ಧಾ ಕೇಂದ್ರಗಳು ಮುಕ್ತವಾಗಬೇಕು

– ಸುಭುಧೇಂದ್ರ ತೀರ್ಥ, ಮಂತ್ರಾಲಯದ ಗುರುರಾಘವೇಂದ್ರ ಸ್ವಾಮಿ ಮಠದ ಪೀಠಾಧಿಪತಿ

ಎಂದು ಟಿಟಿಡಿ ಕಾರ್ಯನಿರ್ವಾಹಕ ಜೆ. ಶ್ಯಾಮಲಾ ರಾವ್ ತಿಳಿಸಿದರು. ಈ ಕುರಿತು ಮಾಹಿತಿ ನೀಡಿರುವ ತಿರುಮಲ ತಿರುಪತಿ ದೇವಸ್ಥಾನಂ ಟ್ರಸ್ಟ್‌ನ ಕಾರ್ಯ ನಿರ್ವಾಹಕ ಅಧಿಕಾರಿ ಶ್ಯಾಮಲಾ ರಾವ್, ಸುಮಾರು 4 ಗಂಟೆಗಳ ಕಾಲ ಹೋಮ – ಹವನ ನಡೆಯಿತು ಎಂದು ಮಾಹಿತಿ ನೀಡಿದ್ದಾರೆ. ಸೋಮವಾರ ಬೆಳಗ್ಗೆ 6ಗಂಟೆಗೆ ಈ ಧಾರ್ಮಿಕ ವಿಧಿ ವಿಧಾನಗಳು ಆರಂಭ ಆಗಿದ್ದವು. ಲಡ್ಡು ಪ್ರಸಾದ ತಯಾರಿಕೆ ಮಾಡುವ ಅಡುಗೆ ಮನೆಗೆ ವಿಶೇಷ ಪ್ರಾಧಾನ್ಯತೆ ನೀಡಲಾಗಿತ್ತು ಎಂದು ಅವರು ವಿವರಿಸಿದ್ದಾರೆ.

## ರಾಜ್ಯ ಸರ್ಕಾರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಕೆಎಸ್ ಈಶ್ವರಪ್ಪ

• ಉದಯವಾಹಿನಿ, ಶಿವಮೊಗ್ಗ

ಆತ್ಮಹತ್ಯೆಗೆ ಶರಣಾದ ಚಂದ್ರಶೇಖರ್ ಅವರ ಕುಟುಂಬಕ್ಕೆ 25 ಲಕ್ಷ ಪರಿಹಾರ ಕೊಡ್ತೀವಿ ಅಂತಾ ಸಿಎಂ ಸಿದ್ದರಾಮಯ್ಯ ಹೇಳಿದ್ರು. ಈಗ 25 ಲಕ್ಷದ ಚೆಕ್ ನಾಳೆ ಪಡೆಯಲು ಬೆಂಗಳೂರಿಗೆ ಬರೋಕೆ ಹೇಳಿದ್ದಾರೆ. ಇದು ತುಂಬಾ ಸಂತೋಷದ ವಿಚಾರ ಎಂದು ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಹೇಳಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಮನೆಗೆ ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಅವರು



"ಅವರಿಗೆ ಬರುವಂತಹ ಪೆನ್ಷನ್ ಕೊಡುವ ವಿಚಾರಕ್ಕೆ ಡಿಸಿ ಅವರು ಕವಿತಾ ಅವರಿಗೆ ಬರೋಕೆ ಹೇಳಿದ್ದಾರೆ. ನಮ್ಮ ಕಾರ್ಯಕರ್ತರ ಪಯತ್ನದಿಂದ ಪರಿಹಾರ ಸಿಕ್ಕಿದೆ. ಇದು ತುಂಬಾ ಸಂತೋಷದ ವಿಚಾರ

– ಕೆಎಸ್ ಈಶ್ವರಪ್ಪ, ಮಾಜಿ ಡಿಸಿಎಂ

ಇಂದು ಭೇಟಿ ನೀಡಿದರು. ಭೇಟಿ ಬಳಿಕ ಮಾತನಾಡಿದ ಅವರು, ಚಂದ್ರಶೇಖರ್ ಕುಟುಂಬಕ್ಕೆ 25 ಲಕ್ಷ ಪರಿಹಾರ ಕೊಡ್ತೀವಿ ಅಂತಾ ಸಿಎಂ ಹೇಳಿದ್ರು, ನಾವು ಕೊಡಲೇಬೇಕು ಎಂದು ಒತ್ತಡ ಹಾಕ್ತೀದ್ವಿ, ಇದೀಗ ನಿಗಮದ ಎಂಡಿ ಚೆಕ್ ತೆಗೆದುಕೊಳ್ಳೋಕೆ ನಾಳೆ ಬೆಂಗಳೂರಿಗೆ ಬರೋಕೆ ಹೇಳಿದ್ದಾರೆ ಎಂದು ಈಶ್ವರಪ್ಪ ಅವರು ಹೇಳಿದರು.

25 ಲಕ್ಷದ ಚೆಕ್ ಇಂದು ಪಡೆಯಲು ಬೆಂಗಳೂರಿಗೆ ಬರೋಕೆ ಹೇಳಿದ್ದಾರೆ. ಅಟ್ರಾಸಿಟಿ ಕೇಸ್ ದಾಖಲಾಗಿರುವ ಹಿನ್ನೆಲೆ ಜಿಲ್ಲಾಧಿಕಾರಿಗಳಿಂದ 8 ಲಕ್ಷ 25 ಸಾವಿರ ಕವಿತಾ ಅವರ ಅಕೌಂಟ್‌ಗೆ ಬಂದಿದೆ. ಕೆಲಸ ಕೊಡುವ ವಿಚಾರದ ಬಗ್ಗೆ ಎಂಡಿ ಅವರಿಗೆ ನಾನು ಕಾಲ್ ಮಾಡಿದ್ದೆ, ಚಂದ್ರಶೇಖರ್ ಮಗನಿಗೆ ಹೋಟೆಲ್ ಮ್ಯಾನೇಜ್ಮೆಂಟ್ ನಲ್ಲಿ ಕೆಲಸ ಕೊಡಿಸುತ್ತೇವೆ ಎಂದು ಎಂಡಿ ಹೇಳಿದ್ದಾರೆ.

## 25 ವರ್ಷಗಳ ಅಕ್ರಮ; ನ್ಯಾಯಮೂರ್ತಿಯಿಂದ ತನಿಖೆಯಾಗಲಿ

• ಉದಯವಾಹಿನಿ, ಮಂಗಳೂರು

ಅರ್ಕಾವತಿ ಡಿನೋಟಿಫಿಕೇಶನ್ ಕುರಿತು ಯಾರೋ ವಿಚಾರಣೆ ಮಾಡಿದರೆ ಸಾಲದು. 25 ವರ್ಷಗಳಲ್ಲಿ ಏನೇನು ಅಕ್ರಮಗಳಾಗಿವೆ ಎಂಬ ಬಗ್ಗೆ ಸುಪ್ರೀಂಕೋರ್ಟ್ ನ್ಯಾಯಮೂರ್ತಿಯವರ ನೇತೃತ್ವದಲ್ಲಿ ತನಿಖೆ ಆಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ಪ್ರತಿಕ್ರಿಯಿಸಿದ್ದಾರೆ. ಮಂಗಳೂರಿನಲ್ಲಿ ರವಿವಾರ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು ಸುಪ್ರೀಂಕೋರ್ಟ್ ನ್ಯಾಯಮೂರ್ತಿಯವರಿಂದ ಸಂಪೂರ್ಣ ತನಿಖೆ ನಡೆದರೆ ಯಾವುದೇ ಪಕ್ಷದವರಿರಲಿ, ಎಲ್ಲವೂ ಹೊರಗೆ ಬರಲಿದೆ. ಯಾರೆಲ್ಲ ಎಷ್ಟು ಶುಭ್ರರು ಎಂಬುದು ಬಯಲಿಗೆ ಬರಲಿದೆ ಎಂದು ಹೇಳಿದರು. ಹಿಂದಿನ ಸರಕಾರದಲ್ಲಿ ಏನೇನು ನಡೆದಿದೆ ಎಂಬುದನ್ನು ಬಿಜೆಪಿಯವರು ಕೆದಕಿಕೊಂಡು ಬರುತ್ತಿದ್ದಾರೆ. ಬೊಫೋರ್ಸ್ ಕೇಸ್ ಎಂದು 30 ವರ್ಷಗಳಿಂದ ಹೇಳಿಕೊಂಡು ಬಂದರು. ಕೆಲವು ರಾಜ್ಯಗಳಲ್ಲಿ ಮತ್ತು ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಕೆಲವು ಅಕ್ರಮಗಳನ್ನು ಸಕ್ರಮ ಮಾಡಿಕೊಂಡು ಬಂದಿದೆ. ಯಾವುದೇ ಸರಕಾರ ಇರಲಿ ಕೂಲಂಕಷ ತನಿಖೆಯಾಗಲು ಸುಪ್ರೀಂಕೋರ್ಟ್ ನ್ಯಾಯಾಧೀಶರನ್ನು ನೇಮಕ ಮಾಡಿ ತನಿಖೆ ನಡೆಸಬೇಕು ಎಂದರು.

ಶಾಸಕ ಮುನಿರತ್ನ ಬಂಧನ ಪ್ರಕರಣ ಬಗೆಗಿನ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಈ ಪ್ರಕರಣ ದ್ವೇಷ ರಾಜಕಾರಣವೋ, ಇನ್ನೊಂದೋ ಎಂಬುದು ಬದಿಗಿರಲಿ. ಇವೆಲ್ಲ ಸಾಂಕ್ರಾಮಿಕ ರೋಗದಂತೆ ಬಂದಿರುವುದು ನರೇಂದ್ರ ಮೋದಿ ಅವರಿಂದ. ಗುಜರಾತ್‌ನಲ್ಲಿ ಈ ಹಿಂದೆ ಇಂತಹ ಪ್ರಯೋಗ ನಡೆದಿತ್ತು ಎಂದರು.

## ಕಟೀಲ್ ರಾಜ್ಯ ರಾಜಕೀಯಕ್ಕೆ, ಬಿಜೆಪಿ ಭದ್ರಕೋಟೆ ಕರಾವಳಿಯಿಂದ ಹೊಸ ಸುದ್ದಿ

### ವಿಧಾನಪರಿಷತ್‌ನ ಸ್ಥಳೀಯ ಸಂಸ್ಥೆಗಳ ಕ್ಷೇತ್ರಕ್ಕೆ ಅಕ್ಟೋಬರ್ 21ಕ್ಕೆ ಚುನಾವಣಾ ದಿನಾಂಕ ನಿಗದಿ,ಕಟೀಲ್ ರಾಜ್ಯ ರಾಜಕೀಯಕ್ಕ ಎಂಟ್ರಿ

• ಉದಯವಾಹಿನಿ, ಬೆಂಗಳೂರು

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸತತವಾಗಿ ಮೂರು ಬಾರಿ ಸಂಸದರಾಗಿ ಆಯ್ಕೆಗೊಂಡಿದ್ದ ನಳಿನ್ ಕುಮಾರ್ ಕಟೀಲ್ ಅವರು ಸದ್ಯ ಮೂಲೆ ಗುಂಪಾಗಿದ್ದಾರೆ. ಕೋಮು ಸೂಕ್ಷ್ಮ ಜಿಲ್ಲೆ ದಕ್ಷಿಣ ಕನ್ನಡದಲ್ಲಿ ಸದಾ ವಿವಾದಾತ್ಮಕ ಹೇಳಿಕೆಗಳನ್ನು ನೀಡುವ ಮೂಲಕವೂ ಒಂದು ಕಾಲದಲ್ಲಿ ಕಮಲದ ಫೈರ್ ಬ್ರಾಂಡ್ ಎಂದೇ ಗುರುತಿಸಿಕೊಂಡಿದ್ದರು.ಇದೀಗ ಕಟೀಲ್ ರಾಜ್ಯ ರಾಜಕೀಯಕ್ಕ ಎಂಟ್ರಿಯಾಗಲಿದ್ದಾರೆ.

**ಕಮಲದ ಫೈರ್ ಬ್ರಾಂಡ್**

ಬಿಜೆಪಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ರಾಜೀನಾಮೆಯಿಂದ ತೆರವಾಗಿರುವ ವಿಧಾನಪರಿಷತ್‌ನ ಸ್ಥಳೀಯ ಸಂಸ್ಥೆಗಳ ಕ್ಷೇತ್ರ ಕ್ಕೆ ಅಕ್ಟೋಬರ್ 21 ಕ್ಕೆ ಚುನಾವಣಾ ದಿನಾಂಕ ನಿಗದಿಯಾದ ಬೆನ್ನಲ್ಲೇ ಟಿಕೆಟ್‌ಗಾಗಿ ಬಿಜೆಪಿ ಪಾಳಯದಲ್ಲಿ ಭಾರೀ ಪೈಪೋಟಿ ಶುರುವಾಗಿದೆ. ಇರುವ ಒಂದು ಸ್ಥಾನಕ್ಕೆ ಹಲವು ನಾಯಕರು ಆಕಾಂಕ್ಷಿಗಳಿದ್ದು, ನಳಿನ್‌ಕುಮಾರ್ ಕಟೀಲ್, ಉದಯಕುಮಾರ್ ಶೆಟ್ಟಿ, ಪ್ರಮೋದ್ ಮಧ್ವರಾಜ್, ಕೆ.ಸುರೇಶ್ ಕುಮಾರ್ ಮತ್ತು ಸತೀಶ್ ಕಂಪಲ ಅವರ ಹೆಸರುಗಳು ಮುನ್ನೆಲೆಗೆ ಬಂದಿವೆ. ಲೋಕಸಭೆ ಚುನಾವಣೆಯಲ್ಲಿ ಉಡುಪಿ-ಚಿಕ್ಕಮಗಳೂರು ಕ್ಷೇತ್ರದಿಂದ ಜಯಗಳಿಸಿದ ನಂತರ ಕೋಟಾ ಶ್ರೀನಿವಾಸ ಪೂಜಾರಿ ಅವರು ಸ್ಥಾನವನ್ನು ತೆರವು ಮಾಡಿದ ನಂತರ ಚುನಾವಣೆ ಅನಿವಾರ್ಯವಾಯಿತು.

ಇನ್ನೂ ನಳಿನ್ ಕುಮಾರ್ ಕಟೀಲ್ ಅವರಿಗೆ ಟಿಕೆಟ್ ಕೊಡಿಸಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಬಿ ಎಲ್ ಸಂತೋಷ್ ಅವರು ಒಲವು ತೋರಿದ್ದಾರೆ ಎನ್ನಲಾಗಿದೆ. 2024ರ ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಅವರಿಗೆ ಟಿಕೆಟ್ ನಿರಾಕರಿಸಲಾಗಿತ್ತು. ಹೀಗಾಗಿ ರಾಷ್ಟ್ರ ರಾಜಕಾರಣದಿಂದ ರಾಜ್ಯ ರಾಜಕಾರಣಕ್ಕೆ ಕರೆತರುವ ನಿಟ್ಟಿನಲ್ಲಿ ಬಿ ಎಲ್ ಸಂತೋಷ್ ಬಿಗ್ ಪ್ಲಾನ್ ನಡೆಸಿದ್ದಾರೆ ಎನ್ನಲಾಗಿದೆ.



### ಕಟೀಲ್ ಅವರ ಪರ ಬ್ಯಾಟಿಂಗ್

ದಕ್ಷಿಣ ಕನ್ನಡ ಜಿಲ್ಲಾ ಬಿಜೆಪಿ ಅಧ್ಯಕ್ಷ ಸತೀಶ್ ಕಂಪಲ, ಮಂಗಳೂರು ವಿಭಾಗೀಯ ಉಸ್ತುವಾರಿ ಉದಯ್ ಕುಮಾರ್ ಶೆಟ್ಟಿ, ಮಾಜಿ ಸಚಿವ ಪ್ರಮೋದ್ ಮಧ್ವರಾಜ್, ಉಡುಪಿ ಜಿಲ್ಲಾ ಮಾಜಿ ಅಧ್ಯಕ್ಷ ಕುಯಿಲಾಡಿ ಸುರೇಶ್ ನಾಯಕ್ ಸೇರಿ ದಂತೆ ಹಲವು ಸ್ಪರ್ಧಿಗಳು ಒಂದೇ ಸ್ಥಾನದ ಟಿಕೆಟ್‌ಗೆ ಲಾಬಿ ನಡೆಸಿದ್ದು, ಬಿ ಎಲ್ ಸಂತೋಷ್ ಅವರು ನಳಿನ್ ಕುಮಾರ್ ಕಟೀಲ್ ಅವರ ಪರ ಬ್ಯಾಟಿಂಗ್ ಮಾಡುತ್ತಿದ್ದಾರೆ.

ರಾಜ್ಯ ಘಟಕವು ಹೊಸ ಮುಖಗಳಿಗೆ ಒಲವು ತೋರಿದ್ದರೂ, ಕಟೀಲು ಈಗಾಗಲೇ ಮೂರು ಬಾರಿ ಸಂಸದರಾಗಿ ಸೇವೆ ಸಲ್ಲಿಸಿರುವುದರಿಂದ ಕರಾವಳಿ ಕರ್ನಾಟಕದ ನಿಷ್ಠಾವಂತ ನಾಯಕರಿಗೆ ಈ ಸ್ಥಾನ ನೀಡಬೇಕು ಎಂಬುದು ರಾಜ್ಯ ನಾಯಕರ ಅಭಿಪ್ರಾಯವಾಗಿದೆ. ಈ ಹಿಂದೆ ತಮ್ಮ ಸಮುದಾಯದ ನಾಯಕ ಕೋಟಾ ಶ್ರೀನಿವಾಸ ಪೂಜಾರಿಯವರು ಈ ಸ್ಥಾನವನ್ನು ಹೊಂದಿದ್ದರಿಂದ ಕೆಲವು ವರ್ಗದ ಬಿಲ್ಲವ ಮುಖಂಡರು ಸಹ ತಮ್ಮ ಸಮುದಾಯದ ನಾಯಕ ಸತೀಶ್ ಕಂಪಾಲಾ ಅವರ ಪರವಾಗಿ ಲಾಬಿ ನಡೆಸುತ್ತಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

2023ರ ವಿಧಾನಸಭೆ ಚುನಾವಣೆಯಲ್ಲಿ ಸೋತರೂ ಎಂಎಲ್‌ಸಿ ಚುನಾವಣೆಗೆ ಸ್ಪರ್ಧಿಸಲು ಹಿರಿಯ ನಾಯಕ ಸಿಟಿ ರವಿ ಅವರಿಗೆ ಪಕ್ಷ ಟಿಕೆಟ್ ನೀಡಿದೆ. ಹೀಗಾಗಿ ಕಟೀಲ್ ಕಣಕ್ಕಿಳಿಯುವುದರಲ್ಲಿ ಯಾವುದೇ ತಪ್ಪಿಲ್ಲ. ಮೇಲಾಗಿ ಕಟೀಲು ನಿಷ್ಠಾವಂತ ನಾಯಕರಾಗಿದ್ದು, ಪಕ್ಷದ ಸೂಚನೆಗೆ ಮಣಿದು ಬ್ರಿಜೇಶ್ ಚೌಟ ಅವರಿಗೆ ದಕ್ಷಿಣ ಕನ್ನಡ ಲೋಕಸಭಾ ಸ್ಥಾನವನ್ನು ಬಿಟ್ಟುಕೊಟ್ಟಿದ್ದಾರೆ ಎಂದು ಹಿರಿಯ ನಾಯಕರೊಬ್ಬರು ಕಟೀಲ್ ಪರ ಕೇಂದ್ರದ ನಾಯಕತ್ವಕ್ಕೆ ತಿಳಿಸಿದ್ದಾರೆ.

ರಾಜ್ಯ ಬಿಜೆಪಿ ಕೋರ್ ಕಮಿಟಿ ಸೋಮವಾರ ಸಭೆ ಸೇರಲಿದ್ದು, ಅಂತಿಮ ನಿರ್ಧಾರ ಕೈಗೊಳ್ಳಲು ಪಕ್ಷದ ವರಿಷ್ಠರಿಗೆ ಶಿಫಾರಸು ಮಾಡಲಿದೆ ಎಂದು ಮೂಲಗಳು ತಿಳಿಸಿವೆ. ನಾಮಪತ್ರ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಸ್ಥಳೀಯ ಸಂಸ್ಥೆಗಳು, ಸಂಸದರು, ಶಾಸಕರು ಮತ್ತು ಎಂಎಲ್‌ಸಿಗಳು ಮಾತ್ರ ಮತದಾರರಾಗಿರುವುದರಿಂದ, ಈ ಕ್ಷೇತ್ರದಲ್ಲಿ ಕೇಸರಿ ಪಕ್ಷವು ಬಹುಮತ ಪಡೆದಿರುವುದರಿಂದ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೆಲ್ಲುವ ಸಾಧ್ಯತೆ ಹೆಚ್ಚಿದೆ.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,615 /Gram(24ct) ₹6,980/Gram(22ct) | ಬೆಳ್ಳಿ: ₹93.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

### ತನುವನೆ ತಾನೆಂಬ ತನು ತನ್ನದೆಂದೆಂಬ

ತನುಮುಖ್ಯಜಗವಿದು ನಿಜವೆಂಬ
ಇನಿತಳವಟ್ಟು ವಿವೇಕವನುಳಿದಚೇ
ತನಭಾವವದು ತಾನೆ ಭ್ರಮೆಯಕ್ಕು.
ನಿಜಗುಣರ ಪರಮಾನುಭವ ಬೋಧೆಯ ನುಡಿ. ಶರೀರವೇ ತಾನು, ಈ ಶರೀರ ತನ್ನದು, ಶರೀರವನ್ನೇ ಮುಖ್ಯವಾಗಿ ಪರಿಗಣಿಸಿ ವ್ಯವಹರಿಸುವ ಈ ಜಗತ್ತೇ ಸತ್ಯ ಎಂಬ ತಿಳುವಳಿಕೆ ಹಾಗೂ ಇದಕ್ಕನುಗುಣವಾಗಿ ನಡತೆ ಅಜ್ಞಾನ ಎನಿಸುವುದು. ಇಲ್ಲಿ ಇರುವುದು ಜಡಭಾವ. ಚೇತನಭಾವವಿರೋಧಿ. ಚೇತನಭಾವ ಬಂದೊಡನೆ ಈ ಜಡಭಾವ ನಾಶವಾಗುವುದು. ಆದ್ದರಿಂದ ಈ ಜಡಭಾವ ಭ್ರಮೆ ಎನಿಸುವುದು.

## ದಾಸರ ಪದಗಳ ಗಾಯನ

• **ಉದಯವಾಹಿನಿ, ಬೆಂಗಳೂರು**

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಸೆಪ್ಟೆಂಬರ್ 26, ಗುರುವಾರ ಸಂಜೆ 7-30ಕ್ಕೆ ವಿದುಷಿ ಶ್ರೀಮತಿ ವಿಜಯಾ ಭಟ್ ಮತ್ತು ಅವರ ಶಿಷ್ಯೆ ಕು|| ಅಭಿಜ್ಞ ಕಶ್ಯಪ್ ಇವರಿಂದ ದಾಸರ ಪದಗಳ ಗಾಯನ ಕಾರ್ಯಕ್ರಮ ಏರ್ಪಡಿಸಿದ್ದು, ಇವರ ಗಾಯನಕ್ಕೆ ಪಿಟೀಲು ವಾದನದಲ್ಲಿ ವಿದುಷಿ ಭಾರ್ಗವಿ ಮತ್ತು ಮೃದಂಗ ವಾದನದಲ್ಲಿ ವಿದ್ವಾನ್ ನಟರಾಜ್ ಸಾಥ್ ನೀಡಲಿದ್ದಾರೆ ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 5ನೇ ಬಡಾವಣೆ, ಜಯನಗರ, ಬೆಂಗಳೂರು-41


ಉದಯವಾಹಿನಿ ಚಿತ್ರ

## ಸಾಲ ಮಾಡಿ ಬೈಕ್ ಖರೀದಿ: ಪ್ರಶ್ನಿಸಿದಕ್ಕೆ ಯುವಕ ಆತ್ಮಹತ್ಯೆ

• **ಉದಯವಾಹಿನಿ, ದೊಡ್ಡಬಳ್ಳಾಪುರ**

ತಾಲ್ಲೂಕಿನ ಮಾಡೇಶ್ವರ ಗ್ರಾಮದ ಹೊರವಲಯದಲ್ಲಿ ಸಾಲ ಮಾಡಿ ಬೈಕ್ ಖರೀದಿಸಿದನ್ನು ಪೋಷಕರು ಪ್ರಶ್ನೆ ಮಾಡಿದ್ದಕ್ಕೆ ಯುವಕನೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಿಖಿಲ್(25) ಆತ್ಮಹತ್ಯೆ ಮಾಡಿಕೊಂಡ ಯುವಕ.ಖಾಸಗಿ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿದ್ದ ಯುವಕ ಈಚೆಗೆ ಕೆಲಸ ಬಿಟ್ಟು ಹಸು ಮೇಯಿಸುತ್ತ ಗ್ರಾಮದಲ್ಲೇ ಉಳಿದಿದ್ದ. ಇದರ ನಡುವೆ ಸಾಲ ಮಾಡಿ ದ್ವಿಚಕ್ರ ವಾಹನ ಖರೀದಿಸಿದ್ದ. ಪೋಷಕರು ಈ ಬಗ್ಗೆ ಪ್ರಶ್ನೆ ಮಾಡಿದಕ್ಕೆ ಬೇಸತ್ತು ಹಸು ಮೇಯಿಸಲು ತೆರಳಿದ್ದ ವೇಳೆ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.ಸ್ಥಳಕ್ಕೆ ದೊಡ್ಡಬೆಳವಂಗಲ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಎಂ.ಬಿ.ನವೀನ್‌ಕುಮಾರ್ ಭೇಟಿ ನೀಡಿ, ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ತಡರಾತ್ರಿ 3 ಬೈಕ್‌ಗಳಿಗೆ ಬೆಂಕಿ ಹಚ್ಚಿ ಹುಚ್ಚಾಟ ಮೆರೆದ ಕಿಡಿಗೇಡಿಗಳು!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ಪುಂಡರ ಹಾವಳಿ ಮಿತಿಮೀರಿದೆ. ಪೊಲೀಸರು ಎಷ್ಟೇ ಕಠಿಣವಾದ ಅಂತಹ ಕ್ರಮ ಕೈಗೊಂಡರು ಸಹ ಇಂತಹ ಪುಂಡರು ಆಗಾಗ ಬಾಲ ಬಿಚ್ಚುತ್ತಿರುತ್ತಾರೆ. ಇದೀಗ ಮೂರು ಬೈಕ್ ಗಳಿಗೆ ಪೆಟ್ರೋಲ್ ಹಾಕಿ ಸುಟ್ಟು ಹುಚ್ಚಾಟ ಮೆರೆದಿರುವ ಘಟನೆ ಬೆಂಗಳೂರಿನ ಎಚ್ ಎಮ್ ಟಿ ಲೇಔಟ್ ನಲ್ಲಿ ನಡೆದಿದೆ. ಹೌದು ಬೆಂಗಳೂರು ನಗರದಲ್ಲಿ ಪುಂಡರ ಹಾವಳಿ ಮತ್ತೆ ಮುಂದುವರೆದಿದ್ದು, ಯಾರು ಇಲ್ಲದ ವೇಳೆಯಲ್ಲಿ ಮೂರು ದ್ವಿಚಕ್ರ ವಾಹನಗಳಿಗೆ ಬೆಂಕಿ ಹಚ್ಚಿ ಹುಚಾಟ ಮೆರೆದಿದ್ದಾರೆ. ಉತ್ತರ ಭಾರತದ ವಿದ್ಯಾರ್ಥಿಗಳ ಬೈಕ್ ಗಳೇ ಈ ಒಂದು ಪುಂಡರಿಗೆ ಮೇನ್ ಟಾರ್ಗೆಟ್ ಆಗಿವೆ. ಬೆಂಗಳೂರಿನ ಎಚ್ ಎಮ್ ಟಿ ಲೇಔಟ್ ನಲ್ಲಿ ಈ ಒಂದು ಘಟನೆ ಸಂಭವಿಸಿದೆ. ಕಿಡಿಗೇಡಿಗಳು ಬುಲೆಟ್ ಬೈಕ್ ನಿಂದ ಪೆಟ್ರೋಲ್ ಕದ್ದು ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ಬುಲೆಟ್ ಬೈಕ್ ಸೇರಿದಂತೆ ಮೂರು ವಾಹನಗಳಿಗೆ ಬೆಂಕಿ ಹಚ್ಚಿ ಪುಂಡರು ಪರಾರಿಯಾಗಿದ್ದಾರೆ. ಸೆಪ್ಟೆಂಬರ್ 18ರಂದು ತಡರಾತ್ರಿ ನಡೆದಿದ್ದ ಘಟನೆ ತಡವಾಗಿ ಬಳಕೆಗೆ ಬಂದಿದೆ. ಕಿಡಿಗೇಡಿಗಳು ಬೈಕ್ ಗಳಿಗೆ ಬೆಂಕಿ ಹಚ್ಚುತ್ತಿರುವ ಕೃತ್ಯ ಸಿಸಿಟಿವಿ ದೃಶ್ಯದಲ್ಲಿ ಸೆರೆಯಾಗಿದೆ. ಪೀಣ್ಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದರ್ಶನ್ ಜಾಮೀನು ಅರ್ಜಿ ವಿಚಾರಣೆ ಸೆ. 27ಕ್ಕೆ ಮುಂದೂಡಿದ ಕೋರ್ಟ್

• **ಉದಯವಾಹಿನಿ, ಬೆಂಗಳೂರು**

ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಟ ದರ್ಶನ್ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಸೆಪ್ಟೆಂಬರ್ 27ಕ್ಕೆ ಕ್ಕೆ ಮುಂದೂಡಿ ಕೋರ್ಟ್ ಆದೇಶ ನೀಡಿದೆ.

ಹೌದು ಇಂದು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ನಟ ದರ್ಶನ್ ಅವರು ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಧೀಶರು ವಿಚಾರಣೆಯನ್ನು ಸಪ್ಟೆಂಬರ್ 27ಕ್ಕೆ ಮುಂದೂಡಿ ಜಡ್ಜ್ ಆದೇಶ ನೀಡಿದರು.ಅಲ್ಲದೆ ಇದೇ ವೇಳೆ ಪ್ರಕರಣದ 01 ಆರೋಪಿ ಆಗಿರುವಂತಹ ಪವಿತ್ರಗೌಡ ಜಾಮೀನು ಅರ್ಜಿ ಸಹ ಸೆಪ್ಟೆಂಬರ್ 25ಕ್ಕೆ ಮುಂದೂಡಿ ನ್ಯಾಯಾಧೀಶರು ಆದೇಶ ಹೊರಡಿಸಿದ್ದಾರೆ.

## ಬಿಜೆಪಿ ಶಾಸಕ ಮುನಿರತ್ನಗೆ ಕೈದಿ ನಂಬರ್ ನೀಡಿದ ಅಧಿಕಾರಿಗಳು

• **ಉದಯವಾಹಿನಿ, ಬೆಂಗಳೂರು**

ಮಹಿಳೆ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ರಾಜರಾಜೇಶ್ವರಿ ನಗರ ಬಿಜೆಪಿ ಶಾಸಕ ಮುನಿರತ್ನಗೆ ಜೈಲಾಧಿಕಾರಿಗಳು ಕೈದಿ ನಂಬರ್ ನೀಡಿದ್ದಾರೆ. ಹೌದು ಮುನಿರತ್ನಗೆ ಜೈಲಾಧಿಕಾರಿಗಳು ವಿಚಾರಣಾಧೀನ ಕೈದಿ ನಂಬರ್-9273 ನೀಡಿದ್ದಾರೆ.

ಮುನಿರತ್ನ ನನ್ನ ಮೇಲೆ ಅತ್ಯಾಚಾರ ಎಸಗಿದ್ದಾನೆ ಎಂದು ಇತ್ತೀಚೆಗೆ ಮಹಿಳೆ ಒಬ್ಬರು ರಾಮನಗರ ಜಿಲ್ಲೆಯ ಕಗ್ಗಲಿಪುರ ಪೊಲೀಸ್ ಠಾಣೆಗೆ ಆಗಮಿಸಿ ದೂರು ನೀಡಿದ್ದರು. ದೂರಿನ ಹಿನ್ನೆಲೆಯಲ್ಲಿ, ಅವರನ್ನು ಬಂಧಿಸಲಗಿದೆ.ಇದಕ್ಕೂ ಮೊದಲು ಅಟ್ರಾಸಿಟಿ ಪ್ರಕರಣದಲ್ಲಿ ಮುನಿರತ್ನ ಅವರು ಪರಪ್ಪನ ಅಗ್ರಹಾರ ಜೈಲಿನಿಂದ ಬಿಡುಗಡೆಯಾಗಿದ್ದರು. ವೇಳೆ ಬಿಡುಗಡೆಯಾದ ತಕ್ಷಣ ಮತ್ತೆ ರಾಮನಗರ ಪೊಲೀಸರು ಮುನಿರತ್ನ ಅವರನ್ನು ಬಂಧಿಸಿದ್ದಾರೆ. ಬಳಿಕ ರಾಜ್ಯ ಸರ್ಕಾರ ಮುನಿರತ್ನ ಪ್ರಕರಣವನ್ನು ಎಸ್‌ಐಟಿಇ ತನಿಖೆಗೆ ವಹಿಸಿ ಆದೇಶ ಹೊರಡಿಸಿತ್ತು. ಇದೀಗ ಇಂದು ಅವರು ಸಲ್ಲಿಸಿದ್ದ ಜಾಮೀನು ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ವಿಚಾರಣೆ 25ಕ್ಕೆ ಮುಂದೂಡಿದೆ.

# ಸಿಎಂ ಹೆಸರಲ್ಲಿ ಆಪತ್ಕಾಲಯಾನ ನೂತನ ಯೋಜನೆ

## ಅತ್ಯಾಧುನಿಕ 65 ಆಂಬ್ಯುಲೆನ್ಸ್ ಲೋಕಾರ್ಪಣೆ: ಸಂಚಾರ ನಿಯಮ ಪಾಲಿಸದವರ ಲೈಸೆನ್ಸ್ ರದ್ದು ಮಾಡಿ ಎಂದ ಸಿಎಂ

• **ಉದಯವಾಹಿನಿ, ಬೆಂಗಳೂರು**

ರಸ್ತೆ ಅಪಾಘಾತಕ್ಕೀಡಾದವರಿಗೆ ಗೋಲ್ಡನ್ Hour ಒಳಗಾಗಿ ಚಿಕಿತ್ಸೆ ದೊರಕಿಸಿಕೊಡುವ ನಿಟ್ಟಿನಲ್ಲಿ 65 ನೂತನ ಅಂಬ್ಯುಲೆನ್ಸ್ ಗಳ ಸೇವೆಗೆ (ಸೋಮವಾರ) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿದರು.ಸಾರಿಗೆ ಇಲಾಖೆ ಸಹಕಾರದೊಂದಿಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ರೋಡ್ ಸುರಕ್ಷತೆ ನಿಧಿಯಡಿ ಯೋಜನೆ ಜಾರಿಗೆ ತರುವಲ್ಲಿ ಯಶಸ್ವಿಯಾಗಿದ್ದು, ಮೊದಲ ಹಂತದಲ್ಲಿ 65 ಅಂಬ್ಯುಲೆನ್ಸ್‌ಗಳನ್ನ ಸರ್ಕಾರಿ ಆಸ್ಪತ್ರೆಗಳಿಗೆ ಒದಗಿಸಿಕೊಟ್ಟಿದ್ದಾರೆ.

ಅಪಘಾತಕ್ಕೀಡಾದವರಿಗೆ ಆಪತ್ಬಾಂಧವನ ರೀತಿಯಲ್ಲಿ ಕಾರ್ಯ ನಿರ್ವಹಿಸಲಿರುವ ಈ ಅಂಬ್ಯುಲೆನ್ಸ್ ಗಳಲ್ಲಿ 26 ಅಡ್ವಾನ್ಸ್ ಲೈಫ್ ಸಪೋರ್ಟ್ ತಂತ್ರಜ್ಞಾನವನ್ನ ಅಳವಡಿಸಲಾಗಿದೆ. 39 BLS ಅಂಬ್ಯುಲೆನ್ಸ್ ಗಳಿವೆ. ರಸ್ತೆ ಸಂಚಾರದಲ್ಲಿ ಹೆಚ್ಚು ಅಪಘಾತ ಸಂಭವಿಸುವ 65 ಬ್ಲಾಕ್ ಸ್ಪಾಟ್ ಗಳನ್ನ ಗುರುತಿಸಿದ್ದು, ಅಂಥಹ ಸ್ಥಳಗಳ ಹತ್ತಿರದಲ್ಲಿರುವ ತಾಲ್ಲೂಕು ಹಾಗೂ ಜಿಲ್ಲಾಸ್ಪತ್ರೆಗಳಿಗೆ ಈ ಅಂಬ್ಯುಲೆನ್ಸ್ ಗಳನ್ನ ನೀಡಲಾಗಿದೆ.

ಅಂಬ್ಯುಲೆನ್ಸ್ ಗಳಿಗೆ ಸಿಎಂ ಚಾಲನೆ ನೀಡಿದ ಬಳಿಕ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್ ರಾಜ್ಯದಲ್ಲಿ ಪ್ರತಿ ವರ್ಷ 40 ಸಾವಿರ ಅಪಘಾತ ಪ್ರಕರಣಗಳು ನಡೆಯುತ್ತಿವೆ. ಸರಾಸರಿ 10 ಸಾವಿರ ಜನರು ಸಾವನ್ನಪ್ಪುತ್ತಿದ್ದಾರೆ. ಹೀಗಾಗಿ ಅಪಘಾತಕ್ಕೆ ಒಳಗಾಗುವ ಜನರ ರಕ್ಷಣೆಗೆ ಪ್ರತ್ಯೇಕವಾಗಿ ಮುಖ್ಯಮಂತ್ರಿಗಳ ಹೆಸರಿನಲ್ಲೇ ಆಪತ್ಕಾಲಯಾನ ಅಂಬ್ಯುಲೆನ್ಸ್ ಗಳ ಸೇವೆಯನ್ನ ಒದಗಿಸುತ್ತಿದ್ದೇವೆ ಎಂದರು. ಮುಂಬರುವ ವರ್ಷದಲ್ಲಿ ರಾಜ್ಯದ ಎಲ್ಲಾ ತಾಲ್ಲೂಕು ಆಸ್ಪತ್ರೆಗಳಿಗು ಈ ಯೋಜನೆ ವಿಸ್ತರಿಸುವ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಮ್ಮ ಸರ್ಕಾರ ಬದ್ಧವಾಗಿದೆ ಎಂದರು.

ಈ ವೇಳೆ ಸಿಎಂ ಸಿದ್ದರಾಮಯ್ಯ ಅವರು ಮಾತನಾಡಿ, ನಮ್ಮ ಸರ್ಕಾರ ರಸ್ತೆ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಅಪಘಾತಗಳ ಪ್ರಕರಣಗಳಲ್ಲಿ ಸಾವುಗಳನ್ನ ತಡೆಯುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನ ಹಾಕಿಕೊಳ್ಳುತ್ತಿದೆ. ಆರೋಗ್ಯ ಇಲಾಖೆಯಿಂದ ಇಂದು 65 ಅಂಬ್ಯುಲೆನ್ಸ್ ಗಳನ್ನ ಜನಸೇವೆಗಾಗಿ ಮುಡಿಪಾಗಿಟ್ಟಿದ್ದೇವೆ. ರಾಜ್ಯದಾದ್ಯಂತ ಈ ಯೋಜನೆ ವಿಸ್ತರಿಸಲು ಬೇಕಾಗುವ ಹಣಕಾಸನ್ನ ಒದಗಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಆದರೆ ಸರ್ಕಾರದ ಜೊತೆ ಸಾರ್ವಜನಿಕರು ಸಹಕರಿಸಬೇಕು.

ಯೋಜನೆಗೆ ರಸ್ತೆ ಸುರಕ್ಷತಾ ನಿಧಿಯಡಿ ನೆರವು ಒದಗಿಸಿರುವ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಇನ್ನೂ ಹೆಚ್ಚಿನ ಅಂಬ್ಯುಲೆನ್ಸ್ ಗಳನ್ನ ಒದಗಿಸುವ ನಿಟ್ಟಿನಲ್ಲಿ ಸಾರಿಗೆ ಇಲಾಖೆಯಿಂದ ಅಗತ್ಯ ಸಹಕಾರ ನೀಡುವುದಾಗಿ ಇದೇ ವೇಳೆ ಘೋಷಿಸಿದರು. ರಸ್ತೆ ಸಂಚಾರದ ಅಪಘಾತಗಳಲ್ಲಿ ಗಾಯಾಳುಗಳು ಹಾಗೂ ಸಾವು ನೋವುಗಳನ್ನ ತಡೆಯುವ ನಿಟ್ಟಿನಲ್ಲಿ ರಸ್ತೆ ಸುರಕ್ಷತಾ ಪ್ರಾಧಿಕಾರ ರಚನೆಯಾಗಿದೆ.

ಅಪಘಾತ ಪ್ರಕರಣಗಳಿಗಾಗಿಯೇ ಪ್ರತ್ಯೇಕ ಅಂಬ್ಯುಲೆನ್ಸ್ ಗಳನ್ನ ಆರೋಗ್ಯ ಇಲಾಖೆ ಒದಗಿಸಿರುವುದು ಅತ್ಯಂತ ಉತ್ತಮ ನಿರ್ಧಾರವಾಗಿದ್ದು, ರಾಜ್ಯದಾದ್ಯಂತ ಯೋಜನೆ ವಿಸ್ತರಿಸಲು ಸಾರಿಗೆ ಇಲಾಖೆ ಸಂಪೂರ್ಣ ಸಹಕಾರ ನೀಡಲಿದೆ ಎಂದರು.


ಉದಯವಾಹಿನಿ ಚಿತ್ರ

**26 ಅಡ್ವಾನ್ಸ್ ಲೈಫ್ ಸಪೋರ್ಟ್ ತಂತ್ರಜ್ಞಾನ**

**ರಸ್ತೆ ಸುರಕ್ಷತಾ ನಿಯಮಗಳನ್ನ ಜನರು ಪಾಲಿಸಬೇಕು. ವೇಗವಾಗಿ ಚಲಿಸಿದರೆ ಅಪಘಾತ ಆಗಲಿದೆ ಎನ್ನುವುದು ಗೊತ್ತಿದ್ದರು ಕೆಲವರು ವೇಗವಾಗಿ ವಾಹನ ಚಲಾಯಿಸುತ್ತಾರೆ. ಇವನ್ನೆಲ್ಲ ಬಿಡಿ ಎಂದು ನಾಡಿನ ಜನರಿಗೆ ಕಿವಿಮಾತು ಹೇಳಿದರು. ಅಲ್ಲದೇ ಕುಡಿದು ವಾಹನ ಚಲಾಯಿಸುವವರು, ಅತಿ ವೇಗವಾಗಿ ಡ್ರೈವಿಂಗ್ ಮಾಡುವವರ ಲೈಸೆನ್ಸ್ ಕ್ಯಾನ್ಸಲ್ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಿ ಎಂದು ಇದೇ ವೇಳೆ ಸಾರಿಗೆ ಸಚಿವರಿಗೆ ಸಿಎಂ ಸೂಚನೆ ನೀಡಿದರು.**

### ಅಂಬ್ಯುಲೆನ್ಸ್ ಗಳು ಹೇಗೆ ಕಾರ್ಯನಿರ್ವಹಿಸಲಿವೆ

- **ಹೆಚ್ಚು ಅಪಘಾತ ಸಂಭವಿಸುವ ಸ್ಥಳಗಳ ಸನಿಹದ ಆಸ್ಪತ್ರೆಗಳಲ್ಲಿ ತಂಗಲಿವೆ.**
- **65 ಹಾಟ್ ಸ್ಪಾಟ್ ಗಳನ್ನ ಗುರುತಿಸಲಾಗಿದ್ದು, ಆ ಸ್ಥಳಗಳ ಹತ್ತಿರದ ತಾಲ್ಲೂಕು ಆಸ್ಪತ್ರೆ ಹಾಗೂ ಜಿಲ್ಲಾಸ್ಪತ್ರೆಗಳಿಗೆ ಅಂಬ್ಯುಲೆನ್ಸ್ ಗಳನ್ನ ನೀಡಲಾಗಿದೆ.**
- **ತುರ್ತು ಪರಿಸ್ಥಿತಿ ಸಂದರ್ಭದಲ್ಲಿ (ALS) ಅಡ್ವಾನ್ಸ್ ಲೈಫ್ ಸಪೋರ್ಟ್ ಅಂಬ್ಯುಲೆನ್ಸ್ ಸೇವೆ ಲಭ್ಯವಾಗಲಿದೆ.**
- **ಜಿಲ್ಲಾಸ್ಪತ್ರೆಗಳ ಮಟ್ಟದಲ್ಲಿ ಚಿಕಿತ್ಸೆ ಅಗತ್ಯವಾದಲ್ಲಿ ಆರೋಗ್ಯ ಇಲಾಖೆಯ ಸ್ಟಾಫ್ ನರ್ಸ್ ಅನ್ನ ಅಂಬ್ಯುಲೆನ್ಸ್ ಗಳಿಗೆ ಡೆಪ್ಯೂಟ್ ಮಾಡಲಾಗುವುದು.**
- **ವೆಂಟೀಲೇಟರ್ ಸಹಾಯದೊಂದಿಗೆ ಜಿಲ್ಲಾಸ್ಪತ್ರೆಗಳಿಗೆ ರೋಗಿಗಳನ್ನ ಕರೆದೊಯ್ದು ಚಿಕಿತ್ಸೆ ಕೊಡಿಸುವ ಸೌಲಭ್ಯ ಒದಗಿಸಲಾಗಿದೆ..**
- **ಅಂಬ್ಯುಲೆನ್ಸ್ ಗಳು ಸುಸಜ್ಜಿತ ಉಪಕರಣಗಳು ಮತ್ತು ಔಷಧಿ ಹಾಗೂ ಉಪಭೋಗ್ಯ ವಸ್ತುಗಳನ್ನು ಹೊಂದಿರಲಿವೆ. ಈ ಪ್ರಕ್ರಿಯೆಯು ಅಪಘಾತಕ್ಕೆ ಒಳಗಾದ ವ್ಯಕ್ತಿಯ ಜೀವ ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸಲಿವೆ. ಅಲ್ಲದೇ ಸ್ಥಳಾಂತರಕ್ಕೆ ರೋಗಿಗಳ ಸ್ವಂತ ಹಣದ ವ್ಯಯವನ್ನು ತಪ್ಪಿಸಲಿದೆ.**

## ಮುನಿರತ್ನ ಬೆಂಬಲಿಗರಿಂದ ಜೀವ ಬೆದರಿಕೆ: ಆರೋಪ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಗುತ್ತಿಗೆದಾರನಿಗೆ ಜೀವ ಬೆದರಿಕೆ ಜಾತಿನಿಂದನೆ ಪ್ರಕರಣದಲ್ಲಿ ಜೈಲು ಸೇರಿ ಬಿಡುಗಡೆಯಾಗಿದ್ದ ಬಿಜೆಪಿ ಶಾಸಕ ಮುನಿರತ್ನ, ಮಹಿಳೆ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮತ್ತೆ ಜೈಲು ಸೇರಿದ್ದಾರೆ. ಇದೀಗ ಮುನಿರತ್ನ ವಿರುದ್ಧ ಸಾಕ್ಷಿ ಹೇಳದಂತೆ ಅವರ ಬೆಂಬಲಿಗರು ಜೀವ ಬೆದರಿಕೆ ಹಾಕಿದರೆ ಎಂಬ ಆರೋಪದ ವಿಚಾರವಾಗಿ ಇಂದು ಮಾಜಿ ಕಾರ್ಪೊರೇಟರ್ ವೇಲುನಾಯಕ್ ಸಿಎಂ ಸಿದ್ದರಾಮಯ್ಯ ಅವರಿಗೆ ದೂರು ಸಲ್ಲಿಸಿದ್ದಾರೆ.

ಹೌದು ಅತ್ಯಾಚಾರ ಆರೋಪ ಮಾಡಿರುವ ಸಂತ್ರಸ್ತೆ ಪುತ್ರನಿಗೆ ಮುನಿರತ್ನ ಬೆಂಬಲಿಗರು ಬೆದರಿಕೆ ಹಾಕಿದ್ದಾರೆ ಎನ್ನಲಾಗಿತ್ತು. ಮುನಿರತ್ನ ನಾಯ್ಡು ಬೆಂಬಲಿಗರಿಂದ ಜೀವ ಬೆದರಿಕೆ ಹಿನ್ನೆಲೆ ಮಾಜಿ ಕಾರ್ಪೊರೇಟರ್ ವೇಲು ನಾಯಕ್ ಹಾಗೂ ದಲಿತ ಸಂಘಟನೆ ಮುಖಂಡರು ಸಿಎಂ ಸಿದ್ದರಾಮಯ್ಯರನ್ನು ಭೇಟಿ ಮಾಡಿದ್ದಾರೆ.ದೂರು ನೀಡಿದ್ದವರಿಗೆ ಹಾಗೂ ನಮಗೆ ಜೀವ ಬೆದರಿಕೆ ಕರೆ ಬರುತ್ತಿವೆ. ನಿತ್ಯವೂ ಒಂದಿಲ್ಲೊಂದು ರೀತಿಯಲ್ಲಿ ನಮಗೆ ತೊಂದರೆ ಕೊಡುತ್ತಿದ್ದಾರೆ.

ಮುನಿರತ್ನ ಆಪ್ತ ಹೆಬ್ಬಗೋಡಿ ಠಾಣೆ ಐ.ಎನ್.ರೆಡ್ಡಿ ಸಸ್ಪೆಂಡ್ ಮಾಡುವಂತೆಯೂ ಸಿಎಂಗೆ ಮನವಿ ಮಾಡಲಾಗಿದೆ.

ಮುನಿರತ್ನ ನಾಯ್ಡು ಆಪ್ತೆ ಸುನಂದಮ್ಮ ನಿನ್ನೆ ಸಾಕ್ಷಿ ಹೇಳುವವರ ಮನೆಗೆ ನುಗ್ಗಿ ಸುನಂದಮ್ಮ ಬೆದರಿಕೆ ಹಾಕಿದ್ದಾರೆ. ಬೆದರಿಕೆ ಹಾಕಿದ್ದ ಬಗ್ಗೆ ಸಿಸಿಟಿವಿ ದೃಶ್ಯ ಸಮೇತ ದೂರು ಕೊಟ್ಟಿದ್ದೇವೆ.

ಅತ್ಯಾಚಾರ ಆರೋಪ ಎದುರಿಸುತ್ತಿರುವ ಶಾಸಕ ಮುನಿರತ್ನ ವಿರುದ್ಧ ಇದೀಗ ಮತ್ತೊಂದು ಗಂಭೀರ ಆರೋಪವೇ ಕೇಳಿ ಬಂದಿದೆ. ಮುನಿರತ್ನ ವಿರುದ್ಧ ಅತ್ಯಾಚಾರ ಆರೋಪ ಮಾಡಿರುವ ಸಂತ್ರಸ್ತೆಯ ಪುತ್ರನಿಗೇ ಬೆಂಬಲಿಗರು ಬೆದರಿಕೆ ಹಾಕಿದ್ದಾರೆ ಎಂದು ತಿಳಿಸಿದರು.

## ದುರ್ನಾತಕ್ಕೆ ಊಟ ಸೇರುತ್ತಿಲ್ಲ, ನಿದ್ದೆ ಬರುತ್ತಿಲ್ಲ

• **ಉದಯವಾಹಿನಿ, (ದೇವನಹಳ್ಳಿ)**

ಚರಂಡಿ ವ್ಯವಸ್ಥೆ ಇಲ್ಲದೆ ಸಣ್ಣ ಕಾಲುವೆಯಲ್ಲಿ ಹರಿಯುತ್ತಿರುವ ಕೊಳಚೆ ನೀರು. ಗಬ್ಬುನಾತದಿಂದ ನೆಮ್ಮದಿಯಿಂದ ಊಟ-ನಿದ್ದೆ ಮಾಡದ ಜನ. ಇಲ್ಲಿ ಸ್ವಚ್ಛತೆ ಎಂಬುದು ಮರಿಚೀಕೆ...-ಇದು ಯಾವುದೇ ಕುಗ್ರಾಮವಲ್ಲ, ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ 20 ಕಿ.ಮೀ ಅಂತರದಲ್ಲಿರುವ ವಿಜಯಪುರದ 20ನೇ ವಾರ್ಡ್‌ನ ಇಂದಿರಾನಗರ.

ಇಲ್ಲಿ 100ಕ್ಕೂ ಹೆಚ್ಚು ಕುಟುಂಬ ವಾಸ ಇರುವ ಈ ಬಡಾವಣೆ ಇದುವರೆಗೆ ಚರಂಡಿ ವ್ಯವಸ್ಥೆಯನ್ನೇ ಕಂಡಿಲ್ಲ. ಜನರೇ ಮಣ್ಣು ಅಗೆದು ನಿರ್ಮಿಸಿಕೊಂಡಿರುವ ಕಾಲುವೆಯಲ್ಲಿ ಕೊಳಚೆ ನೀರು ಹರಿಯುತ್ತಿದೆ. ಈ ಜಾಗದಲ್ಲಿ ಗಿಡಗಂಟಿ ಬೆಳೆದು ನೀರು ಸರಾಗವಾಗಿ ಹರಿಯದೆ ಇಡೀ ಪ್ರದೇಶವೇ ಗಬ್ಬು ನಾರುತ್ತಿದೆ.ಪರಿಶಿಷ್ಟರೇ ಹೆಚ್ಚಾಗಿ ವಾಸಿಸುತ್ತಿರುವ ಕಾಲೊನಿಯಲ್ಲಿ ಸ್ವಚ್ಛತೆ ಮತ್ತು ಸೌಲಭ್ಯ ಮರಿಚೀಕೆಯಾಗಿದೆ.


ಉದಯವಾಹಿನಿ ಚಿತ್ರ

25 ವರ್ಷದ ಹಿಂದೆ ನಿರ್ಮಿಸಿರು ಕಚ್ಚಾ ಚರಂಡಿ ಈಚೆಗೆ ಸಂಪೂರ್ಣ ಹದಗೆಟ್ಟಿದೆ. ಸಣ್ಣ ಚರಂಡಿಯಲ್ಲಿ ಕೊಳಚೆ ನೀರು ಹರಿಯದೆ, ಮನೆಗಳ ಮುಂದೆ ಸಂಗ್ರಹವಾಗಿದೆ. ಇದರಿಂದ ಮನೆಯಲ್ಲಿ ಕುಳಿತು ನೆಮ್ಮದಿಯಿಂದ ಊಟ ಮಾಡಲು ಆಗುತ್ತಿಲ್ಲ. ರಾತ್ರಿ ವೇಳೆ ಸೊಳ್ಳೆಕಾಟದಿಂದ ನಿದ್ದೆ ಬರುತ್ತಿಲ್ಲ ಎಂಬುದು ಸ್ಥಳೀಯರ ಅಳಲು.

**ಚರಂಡಿಯಿಂದ ಮನೆಗೆ ನುಗ್ಗುವ ಇಲಿಗಳು:** ಮನೆಗಳ ಮುಂಭಾಗದ ಚರಂಡಿಯಿಂದ ಇಲಿಗಳು ಬಿಲಗಳು ಮಾಡಿಕೊಂಡು ಮನೆಗಳೆಲ್ಲಾ ಓಡಾಡುತ್ತಿವೆ. ಇದರಿಂದ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದೇವೆ. ಪುರಸಭೆಯ ಪೌರಕಾರ್ಮಿಕರು ಆರು ತಿಂಗಳಿಗೊಮ್ಮೆ ಬರುತ್ತಾರೆ. ಚರಂಡಿಯಲ್ಲಿ ಬಿದ್ದಿರುವ ಕಸ ತೆಗೆದು ಒಂದು ಕಡೆ ಗುಡ್ಡೆ ಹಾಕಿ ಹೋಗುತ್ತಾರೆ. ಅದನ್ನು ತೆರವುಗೊಳಿಸಲು ಒಂದು ತಿಂಗಳು ಕಾಯಬೇಕು. ಅವರು ತೆರವುಗೊಳಿಸುವಷ್ಟರಲ್ಲಿ ಕಸ ಮತ್ತೆ ಚರಂಡಿ ಪಾಲಾಗುತ್ತದೆ.

ಇಂದಿರಾನಗರದಲ್ಲಿ ಚರಂಡಿ ನಿರ್ಮಾಣಕ್ಕೆ ಹಲವು ಬಾರಿ ಪುರಸಭೆಗೆ ಮನವಿ ಸಲ್ಲಿಸಲಾಗಿದೆ. ಆಗ ಮಾತ್ರ ಚರಂಡಿ ಸ್ವಚ್ಛಗೊಳಿಸುತ್ತಾರೆ. ಮತ್ತೆ ದೂರು ಸಲ್ಲಿಸಿರುವವರೆಗೂ ಇತ್ತ ತಲೆ ಹಾಕುವುದಿಲ್ಲ. ಪಟ್ಟಣದಲ್ಲಿ ಯಾವ ವಾರ್ಡ್‌ಗಳಲ್ಲಿಯೂ ಈ ದುಸ್ಥಿತಿ ಇಲ್ಲ. ಪರಿಶಿಷ್ಟರು ವಾಸ ಮಾಡುವ ಪ್ರದೇಶದಲ್ಲಿ ಮಾತ್ರವೇ ಇಂತಹ ಪರಿಸ್ಥಿತಿ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.ಪರಿಶಿಷ್ಟರ ಕಲ್ಯಾಣಕ್ಕಾಗಿ ಸರ್ಕಾರ ಕೋಟ್ಯಂತರ ರೂಪಾಯಿ ಅನುದಾನ ಮೀಸಲಿಡುತ್ತಿದೆ. ಆದರೆ ನಮ್ಮ ಸಬಲೀಕರಣ ಸರಿಯಾಗಿ ಆಗುತ್ತಿಲ್ಲ ಎನ್ನುವುದಕ್ಕೆ ಈ ಇಂದಿರಾನಗರವೇ ಸಾಕ್ಷಿ ಎನ್ನುತ್ತಾರೆ ಸ್ಥಳೀಯರು.

## ವಿಜಯದಶಮಿಗೆ ಕಾವೇರಿ 5ನೇ ಹಂತ ಯೋಜನೆ ಉದ್ಘಾಟನೆ

• **ಉದಯವಾಹಿನಿ, ಬೆಂಗಳೂರು**

ಬಿಬಿಎಂಪಿ ವ್ಯಾಪ್ತಿಯ 110 ಹಳ್ಳಿ ಗಳಿಗೆ ಕುಡಿಯುವ ನೀರು ಪೂರೈಸುವ ಕಾವೇರಿ 5ನೇ ಹಂತದ ಯೋಜನೆಯನ್ನು 'ವಿಜಯ ದಶಮಿ' ವೇಳೆಗೆ ಉದ್ಘಾಟಿಸಲು ಸಿದ್ಧತೆ ನಡೆಯುತ್ತಿದೆ' ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು. ಕನಕಪುರ ತಾಲ್ಲೂಕಿನ ಹಾರೋಹಳ್ಳಿಯಲ್ಲಿರುವ ಕಾವೇರಿ 5ನೇ ಹಂತದ ಜಲರೇಚಕ ಯಂತ್ರಗಾರ ವೀಕ್ಷಿಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಉದ್ಘಾಟನೆಗೂ ಮುನ್ನ, ಯೋಜನೆಯ ವಿವಿಧ ಹಂತದ ಕಾಮಗಾರಿಗಳನ್ನು ಖುದ್ದಾಗಿ ಪರಿಶೀಲಿಸುತ್ತಿದ್ದೇನೆ. ಕೊಳವೆ ಮಾರ್ಗಗಳ ಕಾಮಗಾರಿ ಜೊತೆಗೆ, ಹಾರೋಹಳ್ಳಿ ಜಲರೇಚಕ ಯಂತ್ರ ಗಾರಕ್ಕೆ ಭೇಟಿ ನೀಡಿದ್ದೇನೆ. ಟಿ.ಕೆ.ಹಳ್ಳಿಯ ಜಲಶುದ್ಧೀಕರಣ ಘಟಕ ಮತ್ತು ಜಲರೇಚಕ ಯಂತ್ರಗಾರವನ್ನೂ ಪರಿಶೀಲಿಸುತ್ತೇನೆ' ಎಂದು ತಿಳಿಸಿದರು.

ಯೋಜನೆಯ ಅನುಷ್ಠಾನದ ವೇಳೆ ಕೆಲವೊಂದು ಕಡೆ ಸಮಸ್ಯೆಗಳು ಎದುರಾಗಿದ್ದವು. ಎಲ್ಲಾವನ್ನೂ ಹಂತ ಹಂತವಾಗಿ ಬಗೆಹರಿಸಿದ್ದೇವೆ. ಕೆಂಗೇರಿ ಯಲ್ಲಿ ಜಮೀನಿನ ಸಮಸ್ಯೆ ಇತ್ತು. ಮುಖ್ಯಮಂತ್ರಿಯವರು, ಶಾಸಕ ಎಸ್.ಟಿ. ಸೋಮಶೇಖರ್ ಜೊತೆ ಸೇರಿ ಭೂ ಮಾಲೀಕರೊಂದಿಗೆ ಚರ್ಚಿಸಿ, ಅವರಿಗೆ ಅಭಿವೃದ್ಧಿ ಹಕ್ಕು ವರ್ಗಾವಣೆ(ಟಿಡಿಆರ್) ಮಾಡಿ, ಸಮಸ್ಯೆಯನ್ನು ಬಗೆಹರಿಸಿದ್ದೇವೆ. ಅಲ್ಲಿ ಶೀಘ್ರ ಕಾಮಗಾರಿ ಪೂರ್ಣಗೊಳ್ಳಲಿದೆ' ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಪ್ರಸ್ತುತ ಬೆಂಗಳೂರು ನಗರಕ್ಕೆ 1400 ಎಂಎಲ್‌ಡಿ ನೀರು ಪೂರೈಕೆಯಾಗುತ್ತಿದೆ. ಕಾವೇರಿ 5ನೇ ಹಂತ ಉದ್ಘಾಟನೆಯಾದ ನಂತರ 750 ಎಂಎಲ್‌ಡಿ ನೀರು ಹೊಸದಾಗಿ ಸೇರಿಕೊಳ್ಳುತ್ತಿದೆ.

ಯಶ ವಂತಪುರ, ಬೆಂಗಳೂರು ದಕ್ಷಿಣ, ಬ್ಯಾಟರಾಯನಪುರ, ಟಿ.ದಾಸರಹಳ್ಳಿ, ಮಹದೇವಪುರ, ಆರ್.ಆರ್.ನಗರ ಮತ್ತು ಬೊಮ್ಮನಹಳ್ಳಿ ವಲಯದ 110 ಹಳ್ಳಿಗಳಿಗೆ ನೀರು ಪೂರೈಸಲಾಗುತ್ತಿದೆ' ಎಂದು ಮಾಹಿತಿ ನೀಡಿದರು. ಟ್ಯಾಂಕರ್ ಬಂದ್ ಮಾಡಿ, ಮನೆ ಮನೆಗೂ ನೀರು ಕೊಡಬೇಕು ಎಂಬುದು ನಮ್ಮ ಸರ್ಕಾರದ ಸಂಕಲ್ಪ. ಕನಿಷ್ಠ 10 ವರ್ಷ ಬೆಂಗಳೂರು ನಗರಕ್ಕೆ ಯಾವುದೇ ತೊಂದರೆ ಇರಬಾರದೆಂದು ಈ ಯೋಜನೆ ರೂಪಿಸಿದ್ದೇವೆ' ಎಂದು ತಿಳಿಸಿದರು. ಆರಂಭದಲ್ಲಿ, ಕೆಂಗೇರಿ-ಉತ್ತರಹಳ್ಳಿ ಮುಖ್ಯ ರಸ್ತೆಯ ಕೃಷ್ಣಪ್ರಿಯ ಕಲ್ಯಾಣ ಮಂಟಪದ ಬಳಿ ನಡೆಯುತ್ತಿರುವ ಬೃಹತ್ ಕೊಳವೆ ಮಾರ್ಗದ ಕಾಮಗಾರಿಯನ್ನು ಡಿಸಿಎಂ ಪರಿಶೀಲಿಸಿದರು.

ಈ ವೇಳೆ ಯಶವಂತಪುರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್, ಜಲಮಂಡಳಿ ಅಧ್ಯಕ್ಷ ಡಾ.ರಾಮ್‌ಪ್ರಸಾತ್ ಮನೋಹರ್, ಜಲಮಂಡಳಿ ಎಂಜಿನಿಯರ್ ಗಳು ಹಾಜರಿದ್ದರು.

ಕಾರ್ಮಿಕರು ಜೆಸಿಬಿಯಿಂದ ಆಳವಾದ ಕಂದಗಳನ್ನು ತೆಗೆದು ಬೃಹತ್ ಗಾತ್ರದ ಕೊಳವೆಗಳನ್ನು ಜೋಡಿಸುವುದನ್ನು ವೀಕ್ಷಿಸಿದರು. ಜಲಮಂಡಳಿ ಎಂಜಿನಿಯರ್‌ಗಳು ಕಾಮಗಾರಿ ಪ್ರಗತಿಯನ್ನು ಶಿವಕುಮಾರ್ ಅವರಿಗೆ ವಿವರಿಸಿದರು. ನಂತರ ಹಾರೋಹಳ್ಳಿಗೆ ತೆರಳಿದ ಶಿವಕುಮಾರ್ ಅವರು, ಜಲರೇಚಕ ಯಂತ್ರಾಗಾರಕ್ಕೆ ಭೇಟಿ ನೀಡಿ, ಯಂತ್ರಗಳ ಕಾರ್ಯವೈಖರಿ ಯನ್ನು ಪರಿಶೀಲಿಸಿದರು. ಕಾಮಗಾರಿಗಳ ಪ್ರಗತಿ ಪರಿಶೀಲನೆಗೆ ತೆರಳುವ ಮುನ್ನ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಕಾವೇರಿ ಭವನದ ಜಲಮಂಡಳಿ ಕೇಂದ್ರ ಕಚೇರಿಯಲ್ಲಿ ಪ್ರತಿಷ್ಠಾಪಿಸಿದ್ದ ಗಣಪತಿ ಮೂರ್ತಿಗೆ ಪೂಜೆ ಸಲ್ಲಿಸಿದರು.

## ಬೀದಿಗಳಲ್ಲಿ ರಿಯಾಯಿತಿಗೆ ಈರುಳ್ಳಿ ಮಾರಾಟ

• **ಉದಯವಾಹಿನಿ, ಬೆಂಗಳೂರು**

ರಾಜಧಾನಿ ಬೆಂಗಳೂರಿನಲ್ಲಿ ತರಕಾರಿ ಬೆಲೆ ಏರಿಕೆ ಆಗಿದ್ದರ ಮಧ್ಯೆ, ಈರುಳ್ಳಿ ಪ್ರಿಯರಿಗೆ ಇಲ್ಲೊಂದು ಸಿಹಿ ಸುದ್ದಿ ಇದೆ. ಈರುಳ್ಳಿ ಕೆ.ಜಿ. ಚಿಲ್ಲರೆ ಬೆಲೆ 55 ರಿಂದ 65 ರೂಪಾಯಿವರೆಗೆ ಇದೆ. ಫ್ರೆಶೋದಲ್ಲಿ ಕೆ.ಜಿ. ಈರುಳ್ಳಿಗೆ 79 ರೂಪಾಯಿ ಇದೆ.ಇದೆಲ್ಲ ಗಮನಿಸಿರುವ ಕೇಂದ್ರ ಸರ್ಕಾರ ಸಾರ್ವಜನಿಕರಿಗೆ ಅನುಕೂಲವಾಗ ಲೆಂದು ಇಂದಿನಿಂದ ರಿಯಾಯಿತಿ ದರದಲ್ಲಿ ಈರುಳ್ಳಿ ಮಾರಾಟ ಮಾಡುತ್ತಿದೆ.



ಉದಯವಾಹಿನಿ ಚಿತ್ರ

ಹೌದು, ಬೆಂಗಳೂರಿನಿಂದ ಮೊಬೈಲ್ ವ್ಯಾನ್ ಮೂಲಕ ಕೇಂದ್ರ ಸರ್ಕಾರ ರಿಯಾಯಿತಿ ದರಕ್ಕೆ ಈರುಳ್ಳಿ ಮಾರಾಟ ಮಾಡಲಿದೆ ಎಂದರೆ ನೀವು ನಂಬಲೇಬೇಕು. ಕೇಂದ್ರ ಆಹಾರ, ಸಾರ್ವಜನಿಕ ವಿತರಣಾ ಸಚಿವಾಲಯ ಅಡಿಯಲ್ಲಿ ಭಾರತೀಯ ರಾಷ್ಟ್ರೀಯ ಸಹಕಾರಿ ಗ್ರಾಹಕರ ಒಕ್ಕೂಟ ಕಾರ್ಯ ನಿರ್ವಹಿಸುತ್ತಿದೆ. ಇದರ ಒಂದು ಶಾಖೆ ಬೆಂಗಳೂರಿನಲ್ಲಿದೆ.

ಈ ಶಾಖೆಯು ಕೇಂದ್ರ ಸರ್ಕಾರದ ನಿರ್ದೇಶನದ ಅನುಸಾರ ರಿಯಾಯಿತಿ ದರದಲ್ಲಿ ಬೆಲೆ ಸ್ಥಿರೀಕರಣ ನಿಧಿ ಅಡಿಯಲ್ಲಿ ಈರುಳ್ಳಿ ಮಾರಾಟವನ್ನು ಬೆಂಗಳೂರಿನಲ್ಲಿ ಇಂದಿನಿಂದ ಆರಂಭಿಸಿದೆ. ಗ್ರಾಹಕರಿಗೆ ಅನುಕೂಲ ಆಗುವಂತೆ 35 ರೂಪಾಯಿಗೆ ಒಂದು ಕಿಲೋ ಈರುಳ್ಳಿಯನ್ನು ಈ ಮೊಬೈಲ್ ವ್ಯಾನ್‌ಗಳಲ್ಲಿ ಮಾರಾಟ ಮಾಡಲಾಗುವುದು. ಮುಕ್ತ ಮಾರುಕಟ್ಟೆಯಲ್ಲಿ ಈರುಳ್ಳಿ ದರ ಏರಿಕೆಯ ವರದಿಗಳ ಹಿನ್ನಲೆಯಲ್ಲಿ, ಸಾರ್ವಜನಿಕರಿಗೆ ಕೈಗೆಟುಕುವ ದರದಲ್ಲಿ ಈರುಳ್ಳಿ ಸಿಗುತ್ತದೆ ಎಂದು ಖಚಿತಪಡಿಸಿಕೊಳ್ಳಲು ಸರ್ಕಾರ ಈ ರೀತಿಯ ಕ್ರಮಕ್ಕೆ ಮುಂದಾಗಿದೆ. ಈ ಯೋಜನೆಯಡಿ ಮಹಾರಾಷ್ಟ್ರ ಮಧ್ಯ ಪ್ರದೇಶದಿಂದ ಖರೀದಿಸಿದ ಈರುಳ್ಳಿ ಸೋಮವಾರದಿಂದ ಬೆಂಗಳೂರು ನಗರದಲ್ಲಿ ಮಾರಾಟವಾಗಲಿದೆ. ಬೆಂಗಳೂರಿನ ಎಲ್ಲಾ 28 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ರಿಯಾಯಿತಿ ದರದಲ್ಲಿ ಈರುಳ್ಳಿಯನ್ನು ಸಾರ್ವಜನಿಕರು ಖರೀದಿಸಬಹುದಾಗಿದೆ. NCCF ನಿಂದ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನಾಲ್ಕು ಸಂಚಾರಿ ಈರುಳ್ಳಿ ವ್ಯಾನ್‌ಗಳನ್ನು ಮಂಜೂರು ಮಾಡಲಾಗಿದೆ. ಈರುಳ್ಳಿಯನ್ನು ವಿತರಿಸಲು ಒಟ್ಟು 112 ಮೊಬೈಲ್ ವ್ಯಾನ್‌ಗಳನ್ನು ಬಳಸಲಾಗುವುದು. ಈರುಳ್ಳಿ ದರಗಳು ಸಹಜ ಸ್ಥಿತಿಗೆ ಬರುವವರೆಗೂ ಮಾರಾಟ ಮುಂದುವರಿಯಲಿದೆ ಎಂದು ಶಾಖಾ ವ್ಯವಸ್ಥಾಪಕ ರವಿಚಂದ್ರ ಮಾಹಿತಿ ನೀಡಿದರು. ಸದ್ಯ ಗುರುವಾರದವರೆಗೆ ವೇಳೆಗೆ 112 ಮೊಬೈಲ್ ವ್ಯಾನ್ ಈರುಳ್ಳಿ ಮಾರಾಟ ಮಾಡಲಿದ್ದು, ನಂತರ ಈ ವಾಹನಗಳ ಸಂಖ್ಯೆಗೆ 50 ಹೊಸ ವ್ಯಾನ್‌ಗಳನ್ನು ಸೇರ್ಪಡೆ ಮಾಡಲಾಗುವುದು. ಈರುಳ್ಳಿ ದರ ಕಡಿಮೆ ಆಗುವವರೆಗೂ ಈ ವ್ಯಾನ್‌ಗಳು ನಿಮ್ಮ ಏರಿಯಾಗಳಲ್ಲಿ ಸಂಚರಿಸಲಿವೆ ಎಂದು ಅಧಿಕಾರಿಗಳು ಮಾಹಿತಿ ಕೊಟ್ಟಿದ್ದಾರೆ.

**ಮೊಬೈಲ್ ವ್ಯಾನ್ ಮೂಲಕ ಈರುಳ್ಳಿ ಮಾರಾಟ ಇಂದು ಮಧ್ಯಾಹ್ನ 12.30ಕ್ಕೆ ನಗರ ನಂದಿನಿ ಬಡಾವಣೆ, ಎಚ್‌ಡಿಎಫ್‌ಸಿ ಬ್ಯಾಂಕ್ ಲಿಮಿಟೆಡ್, ನಂ.27, 1 ಮುಖ್ಯ ರಸ್ತೆ, ಬೆಂಗಳೂರು, ಇಲ್ಲಿ ಮಾರಾಟಕ್ಕೆ ಚಾಲನೆ ನೀಡಲಾಗಿದೆ. ಗ್ರಾಹಕರು ಕಡಿಮೆ ಬೆಲೆಯ ಗುಣಮಟ್ಟದ ಈರುಳ್ಳಿಯನ್ನು ಖರೀದಿಸಿ ಈ ಉಪಕ್ರಮದ ಪ್ರಯೋಜನ ಪಡೆದುಕೊಳ್ಳಬೇಕೆಂದು ಅಧಿಕಾರಿಗಳು ಮನವಿ ಮಾಡಿದ್ದಾರೆ.**

# ಮೂರು ವಿಧಾನ ಸಭಾ ಕ್ಷೇತ್ರಗಳ ಉಪಚುನಾವಣೆ

## ಹೈಕಮಾಂಡ್‌ಗೆ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ರವಾನೆ , ಮುರುಗೇಶ್ ನಿರಾಣಿ ಅವರನ್ನು ಕಣಕ್ಕಿಳಿಸುವ ಬಗ್ಗೆ ಚರ್ಚೆ

• **ಉದಯವಾಹಿನಿ, ಬೆಂಗಳೂರು**

ಮುಂಬರುವ ಮೂರು ವಿಧಾನ ಸಭಾ ಕ್ಷೇತ್ರಗಳ ಉಪಚುನಾವಣೆ ಸ್ಥಳೀಯ ಸಂಸ್ಥೆಗಳ ಉಪಚುನಾವಣೆಗೆ ಬಿಜೆಪಿ ಸಂಭಾವನೀಯ ಅಭ್ಯರ್ಥಿಗಳ ಪಟ್ಟಿಯನ್ನು ವರಿಷ್ಠರಿಗೆ ಕಳುಹಿಸಿದೆ.
ಪಕ್ಷದ ಕಚೇರಿಯಲ್ಲಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ನಡೆದ ಕೋರ್ ಕಮಿಟಿ ಸಭೆಯಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ರಾಜ್ಯದ ಮಾಜಿ ಮುಖ್ಯಮಂತ್ರಿ ಮತ್ತು ಕೇಂದ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ನಿಕಟ ಪೂರ್ವ ರಾಜ್ಯ ಅಧ್ಯಕ್ಷ ನಳಿನ್‌ಕುಮಾರ್ ಕಟೀಲ್, ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ್, ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ, ಪುದುಚೇರಿ ರಾಜ್ಯ ಉಸ್ತುವಾರಿ ನಿರ್ಮಲ್ ಕುಮಾರ್ ಸುರಾಣ ಭಾಗವಹಿಸಿದ್ದರು.

ಸಭೆಯಲ್ಲಿ ಉಪಚುನಾವಣೆಗೆ ಅಭ್ಯರ್ಥಿಗಳ ಪಟ್ಟಿಯನ್ನು ಪಕ್ಷದ ಕೇಂದ್ರ ಚುನಾವಣಾ ಸಮಿತಿಗೆ ಕಳುಹಿಸಿಕೊಡಲು ತೀರ್ಮಾನಿಸಲಾಗಿದ್ದು, ಅಂತಿಮವಾಗಿ ವರಿಷ್ಠರ ನಿರ್ಧಾರಕ್ಕೆ ಬದ್ದರಾಗಬೇಕೆಂಬ ಒಮತದ ನಿರ್ಣಯವನ್ನು ತೆಗೆದುಕೊಳ್ಳಲಾಗಿದೆ. ರಾಮನಗರ ಜಿಲ್ಲೆ ಚನ್ನಪಟ್ಟಣ ಕ್ಷೇತ್ರವನ್ನು ಎನ್‌ಡಿಎ ಮೈತ್ರಿ ಪಕ್ಷವಾದ ಜೆಡಿಎಸ್‌ಗೆ ಬಿಟ್ಟುಕೊಡುವುದು ಇಲ್ಲವೇ ಈ ಕ್ಷೇತ್ರಕ್ಕೆ ಸಿ.ಪಿ.ಯೋಗೇಶ್ವರ್ ಅವರನ್ನು ಅಭ್ಯರ್ಥಿ ಮಾಡಬೇಕೆಂಬ ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ. ಅದೇ ರೀತಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ರಾಜೀನಾಮೆಯಿಂದ ತೆರವಾಗಿರುವ ಹಾವೇರಿ ಜಿಲ್ಲೆ ಶಿಗ್ಗಾವಿಗೆ ಅವರ ಪುತ್ರ ಭರತ್ ಬೊಮ್ಮಾಯಿ ಇಲ್ಲವೇ ಮಾಜಿ ಸಚಿವ ಮುರುಗೇಶ್ ನಿರಾಣಿ ಅವರನ್ನು ಕಣಕ್ಕಿಳಿಸುವ ಬಗ್ಗೆ ಚರ್ಚೆ ನಡೆದಿದೆ. ಬಳ್ಳಾರಿ ಜಿಲ್ಲೆ ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ ಮಾಜಿ ಸಚಿವ ಬಿ.ಶ್ರೀರಾಮುಲು, ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ರಾಜೀನಾಮೆಯಿಂದ ತೆರವಾಗಿರುವ ದಕ್ಷಿಣ ಕನ್ನಡ ಜಿಲ್ಲೆಯ ಸ್ಥಳೀಯ ಸಂಸ್ಥೆಗೆ ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ನಳೀನ್‌ಕುಮಾರ್ ಕಟೀಲ್, ಮಾಜಿ ಸಚಿವ ಪ್ರಮೋದ್ ಮಧ್ವರಾಜ್ ಹೆಸರು ಮುನ್ನಲೆಗೆ ಬಂದಿದೆ.



ಉದಯವಾಹಿನಿ ಚಿತ್ರ

**ಶ್ರೀರಾಮುಲು ಕಣಕ್ಕಿಳಿಯಲು ನಿರಾಕರಿಸಿದರೆ ಸ್ಥಳೀಯ ಅಭ್ಯರ್ಥಿಗೆ ಟಿಕೆಟ್ ನೀಡುವ ಬಗ್ಗೆಯೂ ಕೋರ್ ಕಮಿಟಿಯಲ್ಲಿ ಚರ್ಚೆ ನಡೆಯಲಿದೆ. ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ಅವರ ರಾಜೀನಾಮೆಯಿಂದ ತೆರವಾಗಿದ್ದ ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ನಳೀನ್‌ಕುಮಾರ್ ಕಟೀಲ್ ಪ್ರಮೋದ್ ಮಧ್ವರಾಜ್ ಆಕಾಂಕ್ಷಿಗಳಾಗಿದ್ದಾರೆ.**

ಪ್ರತಿಷ್ಠೆಯ ಕಣವಾಗಿರುವ ರಾಮನಗರ ಜಿಲ್ಲೆ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರವನ್ನು ಜೆಡಿಎಸ್‌ಗೆ ಬಿಟ್ಟುಕೊಡುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆದಿದೆ. ಕಾಂಗ್ರೆಸ್ ಎದುರು ಜೆಡಿಎಸ್ ಸಮರ್ಥ ಅಭ್ಯರ್ಥಿಯನ್ನು ಕಣಕ್ಕಿಳಿಸದಿದ್ದರೆ ಎನ್‌ಡಿಎ ಅಭ್ಯರ್ಥಿಯಾಗಿ ಮಾಜಿ ಸಚಿವ, ಹಾಲಿ ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್‌ಗೆ ಟಿಕೆಟ್ ನೀಡಬೇಕೆಂಬ ಅಭಿಪ್ರಾಯ ವ್ಯಕ್ತವಾಗಿದೆ. ಶಿಗ್ಗಾವಿ ಕ್ಷೇತ್ರಕ್ಕೆ ಬೊಮಾಯಿ ಅವರ ಅಭಿಪ್ರಾಯ ಪಡೆದುಕೊಂಡೇ ಅಭ್ಯರ್ಥಿ ಪಟ್ಟಿಯನ್ನು ಅಖೈರು ಮಾಡಬೇಕೆಂಬ ಸಲಹೆ ಕೇಳಿಬಂದಿದೆ. ಈ ಕ್ಷೇತ್ರದ ಮೇಲೆ ಬೊಮಾಯಿ ಅವರ ಪುತ್ರ ಭರತ್ ಬೊಮಾಯಿ ಕಣ್ಣಿಟ್ಟಿದ್ದು, ಈಗಾಗಲೇ ಕ್ಷೇತ್ರದಲ್ಲಿ ಒಂದು ಸುತ್ತಿನ ಕೆಲಸವನ್ನು ಆರಂಭಿಸಿದ್ದಾರೆ.

**ಇನ್ನು ಕೋರ್ ಕಮಿಟಿ ಸಭೆಯಲ್ಲಿ ಸದಸ್ಯತ್ವ ನೋಂದಣಿ, ಪಕ್ಷದ ಸಂಘಟನೆ ಕುರಿತು ಸುಧೀರ್ಘ ಚರ್ಚೆ ನಡೆದಿದೆ ಎಂದು ಮೂಲಗಳು ತಿಳಿಸಿವೆ. ರಾಜ್ಯಾದ್ಯಂತ ಬರುವ ದಿನಗಳಲ್ಲಿ ಇನ್ನಷ್ಟು ನೋಂದಣಿಯನ್ನು ಪರಿಣಾಮಕಾರಿಯಾಗಿ ಮಾಡಬೇಕು. ಇದರಲ್ಲಿ ಹಾಲಿ ಶಾಸಕರು, ಮಾಜಿ ಸಚಿವರು, ಮಾಜಿ ಶಾಸಕರು ಸೇರಿದಂತೆ ಪದಾಧಿಕಾರಿಗಳು ಕಡ್ಡಾಯವಾಗಿ ಪಾಲ್ಗೊಂಡು ನಿರೀಕ್ಷಿತ ಗುರಿ ತಲುಪಲು ಎಲ್ಲಾರೂ ಕೈಜೋಡಿಸುವಂತೆ ಸಭೆ ಸೂಚಿಸಿದೆ.**


ಕುಟುಂಬ ರಾಜಕಾರಣವನ್ನು ಪ್ರಬಲವಾಗಿ ವಿರೋಧಿಸುವ ಬಿಜೆಪಿ, ಬೊಮಾಯಿ ಪುತ್ರನಿಗೆ ಟಿಕೆಟ್ ಬೇಡ ಎಂಬ ನಿಲುವಿಗೆ ಬಂದರೆ ಮಾಜಿ ಸಚಿವ ಮುರುಗೇಶ್ ನಿರಾಣಿ ಅಭ್ಯರ್ಥಿಯಾಗುವ ಸಂಭವವನ್ನು ತಳ್ಳಿ ಹಾಕುವಂತಿಲ್ಲ. ಬಳ್ಳಾರಿ ಜಿಲ್ಲೆ ಸಂಡೂರು ವಿಧಾನಸಭಾ ಕ್ಷೇತ್ರಕ್ಕೆ ಮಾಜಿ ಸಚಿವ ಬಿ.ಶ್ರೀರಾಮುಲು ಹೆಸರು ಕೇಳಿಬಂದಿದೆ ಆದರೂ ಈಗಾಗಲೇ ಒಂದು ಬಾರಿ ವಿಧಾನಸಭೆ ಮತ್ತೊಂದು ಬಾರಿ ಲೋಕಸಭೆ ಚುನಾವಣೆಯಲ್ಲಿ ಸೋತು ಸುಣ್ಣವಾಗಿರುವ ಅವರು ಸ್ಪರ್ಧೆಗೆ ಹಿಂದೇಟು ಹಾಕುತ್ತಿದ್ದಾರೆ ಎನ್ನಲಾಗಿದೆ.

ಅಂತರಾಳದಿಂದ... EDITORIAL

# ಬಿಪಿಎಲ್ ಕಾರ್ಡ್ ಬಡವರ ಅಕ್ಷಯ ಪಾತ್ರೆಯಾಗಲಿ

ಬಿಪಿಎಲ್ ಕಾರ್ಡ್‌ಗಳನ್ನು ಸರಕಾರ ಹಂಚಿರುವುದು ಬಡವರಿಗಾಗಿ ಅಲ್ಲ ಬಡವರಿಗಿಂತಲೂ ಕೆಳಹಂತದವರಿಗೆ ಈ ಕಾರ್ಡ್‌ಗಳ ಉದ್ದೇಶ, ಮನುಷ್ಯನ ಬದುಕುವ ಕನಿಷ್ಠ ಹಕ್ಕುಗಳನ್ನು ರಕ್ಷಿಸುವುದು. ಮುಖ್ಯವಾಗಿ, ಆಹಾರವಿಲ್ಲದೆ ಸಾಯದಂತೆ ನೋಡಿಕೊಳ್ಳುವುದಷ್ಟೇ ಇದರ ಗುರಿ ಎನ್ನುವುದು ಮೇಲ್ನೋಟಕ್ಕೆ ಸ್ಪಷ್ಟವಾಗುತ್ತದೆ. ವಿಪರ್ಯಾಸವೆಂದರೆ, ಸರಕಾರ ತನ್ನ ಹಲವು ಯೋಜನೆಗಳನ್ನು ಬಡವರಿಗಾಗಿ ಘೋಷಿಸಿದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳು ಬಡವರಿಗಾಗಿ ಜಾರಿಗೊಳಿಸಿರುವ ಹಲವು ಸೌಲಭ್ಯಗಳನ್ನು ಪಡೆಯಬೇಕಾದರೆ ಬಿಪಿಎಲ್ ಕಾರ್ಡ್‌ಗಳು ಅತ್ಯಗತ್ಯ ಎಂದು ನಿಯಮಗಳು ಹೇಳುತ್ತಿವೆ. ಭಾರತದಲ್ಲಿ ಬಡತನದ ಸಮಸ್ಯೆಯನ್ನು ನಿವಾರಿಸಲು ಸುರೇಶ್ ತೆಂಡುಲ್ಕರ್ ಸಮಿತಿಯನ್ನು 2004ರಲ್ಲಿ ನೇಮಿಸಲಾಯಿತು. ಸುಮಾರು ಒಂದು ವರ್ಷದ ಸಮೀಕ್ಷೆಯ ಬಳಿಕ ಈ ಸಮಿತಿ ಬಡವನೆಂದು ಘೋಷಿಸಲು ಇರುವ ಮಾನದಂಡವನ್ನು ಬದಲಿಸಿತು. ಪರಿಣಾಮವಾಗಿ, ನಗರ ಪ್ರದೇಶಗಳಲ್ಲಿ ದಿನಕ್ಕೆ 32 ರೂಪಾಯಿ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ದಿನಕ್ಕೆ 28 ರೂಪಾಯಿಗಳಿಗಿಂತ ಕಡಿಮೆ ಆದಾಯ ಹೊಂದಿರುವವರನ್ನು ಕಡು ಬಡವರು ಎಂದು ಘೋಷಿಸಲಾಯಿತು. ಇದರ ಆಧಾರದಲ್ಲೇ 2012ರಲ್ಲಿ ಯೋಜನಾ ಆಯೋಗದ ಮುಖ್ಯಸ್ಥ ಮೊಂಟೆಕ್ ಅಹ್ಲುವಾಲಿಯಾ ಅವರು 2004-05ರಲ್ಲಿ ಶೇ. 37ರಷ್ಟಿದ್ದ ಭಾರತದ ಬಡತನದ ಪ್ರಮಾಣವು 2011-12ರ ಹೊತ್ತಿಗೆ ಶೇ. 22ಕ್ಕೆ ಇಳಿದಿದೆ ಎಂದು ಪ್ರಕಟಿಸಿದ್ದರು. ತಂಡುಲ್ಕರ್ ಸಮಿತಿಯ ಮಾನದಂಡ ಈ ಹಿಂದೆಯೂ ತೀವ್ರ ಟೀಕೆಗೆ ಒಳಗಾಗಿತ್ತು 2012ರಲ್ಲಿ ಯುಪಿಎ ಸರಕಾರ ಬಡವರ ಸಂಖ್ಯೆ ಇಳಿಕೆಯಾಗಿದೆ ಎಂದು ಹೇಳಿದಾಗ ಅದರ ವಿರುದ್ಧ ವಿರೋಧ ಪಕ್ಷಗಳು ತೀವ್ರ ಟೀಕೆಗಳನ್ನು ಮಾಡಿದ್ದವು. ತಂಡುಲ್ಕರ್ ಸಮಿತಿಯ ಮಾನದಂಡವನ್ನು ತಿರಸ್ಕರಿಸಬೇಕು ಎನ್ನುವ ವ್ಯಾಪಕ ಒತ್ತಡಗಳು ಕೇಳಿ ಬಂದವು. ಆ ಒತ್ತಡಕ್ಕೆ ಮಣಿದು ಆರ್‌ಬಿಐ ಮಾಜಿ ಗವರ್ನರ್ ರಂಗರಾಜನ್ ಅವರ ನೇತೃತ್ವದಲ್ಲಿ ಹೊಸ ಸಮಿತಿಯನ್ನು ನೇಮಿಸಲಾಯಿತು. ಬಿಪಿಎಲ್‌ಗೆ ಹೊಸ ಮಾನದಂಡವನ್ನು ನಿರ್ಣಯಿಸಿತು. ರಂಗರಾಜನ್ ಸಮಿತಿಯ ಪ್ರಕಾರ ಗ್ರಾಮೀಣ ಪ್ರದೇಶದಲ್ಲಿ ದಿನಕ್ಕೆ 32 ರೂಪಾಯಿ ಖರ್ಚು ಮಾಡುವವರು ಹಾಗೂ ಪಟ್ಟಣ, ನಗರಗಳಲ್ಲಿ 47 ರೂಪಾಯಿಗಳಿಗಿಂತ ಹೆಚ್ಚು ಖರ್ಚು ಮಾಡುವವರು ಬಡವರಲ್ಲ. ಆದರೆ ಸಮಿತಿಯ ಈ ನಿರ್ಣಯವೂ ಸಾಕಷ್ಟು ಟೀಕೆಗಳಿಗೆ ಕಾರಣವಾದವು. ಒಂದೆಡೆ ಕೇಂದ್ರ ಸರಕಾರ ಬಡವರ ಸಂಖ್ಯೆ ಇಳಿಕೆಯಾಗಿದೆ ಎಂದು ಹೇಳುತ್ತಿರುವಾಗ, ಕರ್ನಾಟಕದಲ್ಲಿ ಮಾತ್ರ ಯಾಕೆ ಬಿಪಿಎಲ್ ಕಾರ್ಡ್ದಾರರ ಸಂಖ್ಯೆ ಹೆಚ್ಚಿದೆ ಎಂದು ಇದೀಗ ರಾಜ್ಯ ಸರಕಾರ ತಲೆಕಡಿಸಿಕೊಳ್ಳುತ್ತದೆ. ಆದುದರಿಂದಲೇ ಅದು ರಾಜ್ಯದಲ್ಲಿ ಅಕ್ರಮ ಬಿಪಿಎಲ್ ಕಾರ್ಡ್ ಗಳನ್ನು ರದ್ದುಗೊಳಿಸಲು ಕಠಿಣ ಕ್ರಮಗಳನ್ನು ಕೈಗೊಳ್ಳಲು ಮುಂದಾಗಿದೆ. ರಾಜ್ಯದಲ್ಲಿ ಅಕ್ರಮ ಬಿಪಿಎಲ್ ಕಾರ್ಡ್‌ಗಳು ಇಲ್ಲ ಎಂದಲ್ಲ ಅವುಗಳು ರದ್ದಾಗದೇ ಇದ್ದರೆ ಸವಲತ್ತುಗಳು ಅರ್ಹರಿಗೆ ಪರಿಣಾಮಕಾರಿಯಾಗಿ ತಲುಪುವುದು ಅಸಾಧ್ಯ. ರಾಜ್ಯದಲ್ಲಿ ಶೇ. 72ರಷ್ಟು ಮಂದಿಯ ಕೈಯಲ್ಲಿ ಬಿಪಿಎಲ್ ಕಾರ್ಡ್ ಗಳಿವೆ ಎಂದು ಮೂಲಗಳು ತಿಳಿಸುತ್ತವೆ. ಹಿಂದಿನ ಸರಕಾರದ ಅವಧಿಯಲ್ಲಿ ಹೊಸದಾಗಿ ಪಡಿತರ ಚೀಟಿ ಪಡೆಯಲು ಸಲ್ಲಿಕೆಯಾಗಿದ್ದ 2.95 ಲಕ್ಷ ಅರ್ಜಿಗಳನ್ನು ಪರಿಷ್ಕರಿಸಿದಾಗ 238 ಲಕ್ಷ ಅರ್ಜಿಗಳು ಬಿಪಿಎಲ್ ವ್ಯಾಪಿಗೆ ಬಂದಿವೆ. 2011ರ ಜನಗಣತಿ ಪ್ರಕಾರ ರಾಜ್ಯದಲ್ಲಿ 6.10 ಕೋಟಿ ಜನರಿದ್ದು 442 ಕೋಟಿ ಜನರು ಬಿಪಿಎಲ್ ಕಾರ್ಡ್ ಸವಲತ್ತುಗಳನ್ನು ತನ್ನದಾಗಿಸಿಕೊಳ್ಳುತ್ತಿದ್ದಾರೆ ಎಂದು ವರದಿ ಹೇಳುತ್ತದೆ. ಅಂದರೆ ರಾಜ್ಯದಲ್ಲಿ ಶೇ. 72ರಷ್ಟು ಜನರು ಬಡತನ ರೇಖೆಗಿಂತ ಕೆಳಗಿದ್ದಾರೆ ಎನ್ನುವುದನ್ನು ಇದು ತೋರಿಸುತ್ತದೆ. ನೀತಿ ಆಯೋಗದ ಪ್ರಕಾರ ರಾಜ್ಯದಲ್ಲಿ ಶೇ. 13.15ರಷ್ಟು ಜನ ಮಾತ್ರ ಬಡತನ ರೇಖೆಗಿಂತ ಕೆಳಗಿದ್ದಾರೆ. ಇದರ ಆಧಾರದಲ್ಲಿ ರಾಜ್ಯದಲ್ಲಿ ಅಕ್ರಮ ಬಿಪಿಎಲ್ ಕಾರ್ಡ್ ಗಳಿವೆ ಎಂದು ಸರಕಾರ ನಿರ್ಧರಿಸಿದ್ದು ಜನರ ಕಾರ್ಡ್‌ಗಳನ್ನು ಕಿತ್ತುಹಾಕಲು ಈಗಾಗಲೇ ಕ್ರಮ ತೆಗೆದುಕೊಂಡಿದೆ. ಈಗಾಗಲೇ, ಬಿಪಿಎಲ್ ಕಾರ್ಡ್‌ಗಳಿಂದ ಸವಲತ್ತುಗಳನ್ನು ಪಡೆಯುತ್ತಿರುವ ಹಲವು ಬಡವರು ಇದೀಗ ಕಾರ್ಡ್‌ಗಳು ರದ್ದಾಗುವ ಆತಂಕದಲ್ಲಿದ್ದಾರೆ. ವಾರ್ಷಿಕವಾಗಿ 120 ಲಕ್ಷ ರೂ.ಗಳ ಒಳಗೆ ಆದಾಯವಿರುವವರು ಬಿಪಿಎಲ್ ಕಾರ್ಡ್‌ಗಳನ್ನು ಪಡೆಯುವ ಅರ್ಹತೆಯನ್ನು ಹೊಂದಿರುತ್ತಾರೆ. ಇಷ್ಟೇ ಅಲ್ಲ ಖಾಸಗಿ ವಾಹನ ಹೊಂದಿರುವುದು ಸೇರಿದಂತೆ ಹಲವು ನಿಯಮಗಳು ಬಿಪಿಎಲ್ ಕಾರ್ಡ್ ಗಳನ್ನು ಹೊಂದಲು ತಡೆಯಾಗಿದೆ. ಅನೇಕ ಸಂದರ್ಭದಲ್ಲಿ ಖಾಸಗಿ ವಾಹನದ ಮೂಲಕವೇ ವಾರ್ಷಿಕವಾಗಿ 120 ಲಕ್ಷ ರೂಪಾಯಿ ಆದಾಯವನ್ನು ತನ್ನದಾಗಿಸಿಕೊಳ್ಳುತ್ತಿರುವವರು, ಬಿಪಿಎಲ್ ಕಾರ್ಡ್‌ಗಾಗಿ ತನ್ನ ಬದುಕಿನ ಆಧಾರಸ್ತಂಭವಾಗಿರುವ ವಾಹನವನ್ನು ತ್ಯಜಿಸಬೇಕಾಗಿದೆ. ಬಿಪಿಎಲ್ ಕಾರ್ಡ್‌ಗಳನ್ನು ತ್ಯಜಿಸುವುದು ಎಂದರೆ, ಬರೇ ಅಕ್ಕಿ ಗೋಧಿಗಳನ್ನು ಮಾತ್ರವಲ್ಲ ಸರಕಾರ ಜಾರಿಗೊಳಿಸಿರುವ ಆಯುಷ್ಮಾನ್ ಯೋಜನೆ ಸೇರಿದಂತೆ ಹಲವು ನೆರವುಗಳನ್ನು ಕಳೆದುಕೊಳ್ಳಬೇಕಾಗುತ್ತದೆ. ನಿಯಮಗಳಂತೆಯೇ ಕಾರ್ಡ್ಗಳನ್ನು ರದ್ದುಗೊಳಿಸುತ್ತಾ ಹೋದರೆ, ಸರಕಾರ ಬಡವರಿಗಾಗಿ ಜಾರಿಗೊಳಿಸಿರುವ ಹಲವು ಯೋಜನೆಗಳು ಬಡವರಿಗೆ ತಲುಪುವುದೇ ಅಸಾಧ್ಯವಾಗಿ ಬಿಡುತ್ತದೆ. ಬಿಪಿಎಲ್ ಕಾರ್ಡ್ ಗಳು ಬಡವರಿಗಲ್ಲ ಎಂದಾದರೆ, ಕನಿಷ್ಠ ಎಪಿಎಲ್ ಕಾರ್ಡ್ ಗಳಿಗಾದರೂ ಬಡವರಿಗೆ ಸಿಗುವ ಸೌಲಭ್ಯಗಳನ್ನು ಒದಗಿಸುವ ಭರವಸೆಯನ್ನು ಸರಕಾರ ನೀಡಬೇಕಾಗಿದೆ. ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್ ಗಳ ನಡುವಿರುವ ಅಂತರವನ್ನು ತೆಳುಗೊಳಿಸಿ, ಬಿಪಿಎಲ್ ಮಾನದಂಡಗಳಿಂದ ಹೊರಗಿರುವ ಅರ್ಹ ಬಡವರಿಗೆ ಬಿಪಿಎಲ್‌ನ ಶೇ. 90ರಷ್ಟು ಸೌಲಭ್ಯಗಳಾದರೂ ದೊರಕುವಂತೆ ಸರಕಾರ ಮಾಡಬೇಕು.

**ಅಂದರೆ ಸರಕಾರ ಈ ದೇಶದಲ್ಲಿ ಬಡವರಿಗಿಂತಲೂ ಕೆಳಮಟ್ಟದವರಿಗಾಗಿ ಯೋಜನೆಗಳನ್ನು ಘೋಷಿಸಿದೆಯೇ ಹೊರತು, ಬಡವರಿಗಾಗಿ ಅಲ್ಲ ಪರಿಣಾಮವಾಗಿ ದೇಶದ ಬಡವರು ಸರಕಾರದ ಯೋಜನೆಗಳನ್ನು ತನ್ನದಾಗಿಸಿಕೊಳ್ಳಲು ವಿಫಲರಾಗುತ್ತಿದ್ದಾರೆ. ಬಡತನವನ್ನು ಅಳಿಸುವುದಕ್ಕೆ ತನ್ನಿಂದ ಸಾಧ್ಯವಿಲ್ಲ ಎಂದು ಅರಿತಿರುವ ಸರಕಾರ ಬಡತನವನ್ನು ಇಲ್ಲವಾಗಿಸಲು ಹೊಸ ತಂತ್ರವನ್ನು ಅನುಸರಿಸುತ್ತಾ ಬಂದಿದೆ. ಪರಿಣಾಮವಾಗಿ, ಬಡತನವನ್ನು ಅಳೆಯುವ ಮಾನದಂಡಗಳೇ ಬದಲಾಯಿತು. ತಾನೇ ನಿರ್ಧರಿಸಿದ ಮಾನದಂಡಗಳನ್ನು ಮುಂದಿಟ್ಟುಕೊಂಡು ದೇಶದಲ್ಲಿ ಬಡವರ ಸಂಖ್ಯೆ ಇಳಿಮುಖವಾಗಿದೆ ಎಂದು ಘೋಷಿಸ ತೊಡಗಿತು. ಇತ್ತೀಚೆಗೆ ನೀತಿ ಅಯೋಗ ಇದರ ಆಧಾರದಲ್ಲೇ ದೇಶದಲ್ಲಿ ಬಡತನದ ಮಟ್ಟ ಶೇ. 5ಕ್ಕೆ ಇಳಿದಿದೆ ಎಂದು ಹೇಳಿತು.**



## ರಾಮಾಯಣ

### ಬಾಲಕಾಂಡ

• ಹಿಂದಿನ ಸಂಚಿಕೆಯಿಂದ 1ನೆಯ ಅಧ್ಯಾಯ

ಬೇಹುಗಾರರ ಕೃತ್ಯಗಳನ್ನೂ ತಿಳಿಯುವಂಥವರೂ ಸಮಸ್ತವಾದ ವ್ಯವಹಾರಗಳಲ್ಲಿಯೂ ಕೌಶಲ್ಯವುಳ್ಳವರೂ ನೀತಿಶಾಸ್ತ್ರಮಂಡಿತ್ಯವುಳ್ಳವರೂ ವಿಶ್ವಾಸಕ್ಕೆ ಪೂರ್ಣಯೋಗ್ಯರೂ ತಮ್ಮ ಮಕ್ಕಳಾದರೂ ಅಪರಾಧಮಾಡಿದಲ್ಲಿ ಕಾಲೋಚಿತವಾಗಿ ಶಿಕ್ಷಿಸುವವರೂ ಭಂಡಾರ ಚದುರಂಗಬಲಗಳನ್ನು ಕೂಡಿಸುವುದರಲ್ಲಿ ಅತಿಚತುರರೂ ಯಾವಾಗಲೂ ಉತ್ಸಾಹಶಕ್ತಿಯುಳ್ಳವರೂ ತಮ್ಮ ರಾಜ್ಯದ ಜನರ ವರ್ಣಾಶ್ರಮಗಳನ್ನು ಪರಿಪಾಲಿಸುವವರೂ ಪ್ರಜೆಗಳು ನಿಂದನೆ ಅಸತ್ಯ ಪರಸ್ತ್ರೀಕಾಮ ಮೊದಲಾದವನ್ನು ಬಿಟ್ಟು ಉತ್ತಮವಾದ ವಸ್ತ್ರಾಭರಣಾಲಂಕಾರ ದಿಂದ ಸದ್ವರ್ತನದಲ್ಲಿರುವ ಹಾಗೆ ಪ್ರೇರಿಸತಕ್ಕವರೂ ಅರಸನಿಗೆ ಹಿತವನ್ನೇ ಬಯಸುವಂಥವರೂ ಪರಾಕ್ರಮಶಾಲಿಗಳೂ ಪರರಾಷ್ಟ್ರದವರಿಂದ ಕೊಂಡಾಡಿಸಿಕೊಳ್ಳುವವರೂ ಎಲ್ಲಾ ಕಾರ್ಯ ದಲ್ಲಿಯೂ ನಿಶ್ಚಯಬುದ್ಧಿಯುಳ್ಳವರೂ ಸಂಧಿ ವಿಗ್ರಹ ಯಾನ ಆಸನ ದ್ವೈಧೀಭಾವ ಸಮಾಶ್ರಯಗಳೆಂಬ ಷಡ್ಗುಣ್ಯೈ ಶ್ವರಗಳನ್ನು ಬಲ್ಲವರೂ ಪ್ರಿಯೋಕ್ತಿಗಳನ್ನೇ ನುಡಿಯುವವರೂ ಆದ ಅನೇಕ ಪ್ರಧಾನಿಗಳೊಡನೆ ಕೂಡಿಕೊಂಡು ದಶರಥರಾಯನು ಸಮಸ್ತ ರಾಜ್ಯವನ್ನೂ ಪರಿಪಾಲಿಸಿ ಕೊಂಡು ಬರುತ್ತಿದ್ದನು. ಅವನು ಪ್ರಜೆಗಳಲ್ಲಿ ದುಷ್ಟಶಿಷ್ಟವಿವೇಕಕ್ಕೋಸ್ಕರ ಬೇಹುಗಾರರ ಮುಖದಿಂದ ಸಮಸ್ತವನ್ನೂ ವಿಚಾರಿಸುತ್ತ ಸಮಸ್ತ ಪುರುಷರಲ್ಲಿಯೂ ಉತ್ತಮನಾಗಿ, ತನ್ನ ಪ್ರತಾಪದಿಂದ ಸಮಸ್ತ ಕಂಟಕಗಳನ್ನೂ ಪರಿಹರಿಸಿಕೊಂಡು ದೇವೇಂದ್ರನು ಹೇಗೆ ಸ್ವರ್ಗವನ್ನು ರಕ್ಷಿಸಿಕೊಂಡಿರುವನೋ ಆ ರೀತಿಯಲ್ಲಿ ಸಮಸ್ತ ಜನರನ್ನೂ ರಕ್ಷಿಸಿಕೊಂಡು ಅಂತರಿಕ್ಷಮಾರ್ಗದಲ್ಲಿ ಸೂರ್ಯನು ಹೇಗೆ ಅನೇಕ ಕಿರಣಗಳಿಂದ ಒಪ್ಪುತ್ತಿರುವನೋ ಆ ಪ್ರಕಾರದಲ್ಲಿ ಸಮಸ್ತಕಾರನಿರ್ವಾಹ ಕುಶಲರಾದ ಮಂತ್ರಿಗಳೊಡನೆ ಕೂಡಿಕೊಂಡಿದ್ದನು.

### ದಶರಥರಾಯನುನ ಅಶ್ವಮೇಧಯಾಗ ಮಾಡಲು ಉದ್ಯುಕ್ತನಾಗುವುದು

ಈ ಪ್ರಕಾರದಲ್ಲಿ ಅಯೋಧ್ಯಾಪಟ್ಟಣದಲ್ಲಿ ರಾಜ್ಯಪರಿಪಾಲನವನ್ನು ಮಾಡಿಕೊಂಡಿದ್ದ ದಶರಥ ಮಹಾರಾಯನು ಒಂದು ಸಲ ತನಗೆ ವಂಶಪ್ರವರ್ತಕನಾದ ಮಗನು ಜನಿಸಲಿಲ್ಲದೆಂದು ಯೋಚನೆಯನ್ನು ಮಾಡಿ ಅಶ್ವಮೇಧಯಾಗವನ್ನು ಮಾಡಬೇಕೆಂದು ನಿಶ್ಚಯಿಸಿದನು ಅನಂತರ ಸಮಸ್ತ ಮಂತ್ರಿಗಳೊಡನೆ ಆಲೋಚನೆಮಾಡಿ ಸುಮಂತ್ರನೆಂಬ ಮಂತ್ರಿಯನ್ನು ಕರೆದು ''ಎಲೈ ಸುಮಂತ್ರನೆ, ಅಶ್ವಮೇಧಯಾಗವನ್ನು ಮಾಡಬೇಕೆಂದು ಸಂಕಲ್ಪಿಸಿದ್ದೇನೆ. ನೀನು ಶೀಘ್ರವಾಗಿ ಹೋಗಿ ನನ್ನ ಗುರುಗಳನ್ನು ಕರೆದುಕೊಂಡು ಬಾ' ಎಂದನು.

ಮುಂದುವರಿಯುವುದು...

# ಆರ್ ವಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗೆ ಶುಭ ಕೋರಿದ ಸಂಸದ ತೇಜಸ್ವಿಸೂರ್ಯ

## ವಿದ್ಯಾರ್ಥಿಗಳನ್ನು ಸ್ವಾಗತಿಸಲು ಹಮ್ಮಿಕೊಂಡಿದ್ದ ಕಾರ್ಯಕ್ರಮ, ದೊಡ್ಡದಾಗಿ ಸಾಧನೆ ಮಾಡುವತ್ತ ಚಿತ್ತ ಹರಿಸಿ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ಪ್ರತಿಷ್ಠಿತ ಆರ್‌ವಿ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್‌ನ 2024ನೇ ಶೈಕ್ಷಣಿಕ ವರ್ಷದ ಬಿ.ಟೆಕ್ (ಆನರ್ಸ್) ಪದವಿ ತರಗತಿ ಆರಂಭಗೊಂಡಿದ್ದು, ಹೊಸ ವಿದ್ಯಾರ್ಥಿಗಳನ್ನು ಸ್ವಾಗತಿಸಲು ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಸಂಸದ ಹಾಗೂ ಭಾರತೀಯ ಜನತಾ ಯುವ ಮೋರ್ಚಾದ ರಾಷ್ಟ್ರೀಯ ಅಧ್ಯಕ್ಷರಾದ ಶ್ರೀ ತೇಜಸ್ವಿ ಸೂರ್ಯ ಮುಖ್ಯ ಅತಿಥಿಯಾಗಿ ಭಾಗವಹಿಸಿ ಹೊಸ ವಿದ್ಯಾರ್ಥಿಗಳಿಗೆ ಶುಭ ಕೋರಿದರು.

ಇದೇ ಸಂದರ್ಭದಲ್ಲಿ ಸ್ಕೂಲ್ ಆಫ್ ಬ್ಯುಸಿನೆಸ್, ಸ್ಕೂಲ್ ಆಫ್ ಎಕನಾಮಿಕ್ಸ್ ಅಂಡ್ ಪಬ್ಲಿಕ್ ಪಾಲಿಸಿ, ಸ್ಕೂಲ್ ಆಫ್ ಡಿಸೈನ್ ಅಂಡ್ ಇನ್ನೋವೇಶನ್, ಸ್ಕೂಲ್ ಆಫ್ ಲಾ, ಸ್ಕೂಲ್ ಆಫ್ ಫಿಲ್ಮ್, ಮೀಡಿಯಾ ಅಂಡ್ ಕ್ರಿಯೇಟಿವ್ ಆರ್ಟ್ಸ್‌ನ ಸ್ನಾತಕೋತ್ತರ ಪದವಿ ತರಗಳು ಕೂಡ ಆರಂಭವಾಗಿದ್ದು, ವಿವಿಧ ವಿಭಾಗಗಳ ವಿದ್ಯಾರ್ಥಿಗಳಿಗೆ ಆತ್ಮೀಯ ಸ್ವಾಗತ ಕೋರಲಾಯಿತು.

**ಭಾರತ ಸಮೃದ್ಧ ದೇಶ**

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮಾನ್ಯ ಸಂಸದರು (ಬೆಂಗಳೂರು ದಕ್ಷಿಣ) ಬಿಜೆವೈಎಂನ ರಾಷ್ಟ್ರೀಯ ಅಧ್ಯಕ್ಷ ತೇಜಸ್ವಿ ಸೂರ್ಯ ಅವರು, ಇತಿಹಾಸ'ವನ್ನು ಗಮನಿಸಿದರೆ ಮಾನವನ ಸಾಮರ್ಥ್ಯವನ್ನು ಅತ್ಯುತ್ತಮವಾಗಿ ಬಳಸಿಕೊಳ್ಳಲು ಅವಕಾಶ ಇರುವ ಮಹತ್ವದ ಕಾಲಘಟ್ಟದಲ್ಲಿ ನಾವು ಬದುಕುತ್ತಿದ್ದೇವೆ. ನಮ್ಮ ಪೀಳಿಗೆ ಒಂದು ಸಾಮೂಹಿಕ ಉದ್ದೇಶವಿದೆ. ಅದೇನೆಂದರೆ ಭಾರತ ದೇಶವನ್ನು ಸಮೃದ್ಧ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವುದು. ನಿಮ್ಮ ಶಿಕ್ಷಣ ಸಮಯದಲ್ಲಿ ಫೋಕಸ್ ಕಳೆದುಕೊಳ್ಳಬೇಡಿ. ದೊಡ್ಡದಾಗಿ ಸಾಧನೆ ಮಾಡುವತ್ತ ಚಿತ್ತ ಹರಿಸಿ. ವಿಶ್ವವಿದ್ಯಾನಿಲಯಗಳ ಪ್ರಯೋಗಾಲಯಗಳು ಮತ್ತು ತರಗತಿಗಳಲ್ಲಿ ಅತ್ಯುತ್ತಮ ಐಡಿಯಾಗಳು ಹುಟ್ಟಿಕೊಳ್ಳುತ್ತವೆ, ನಂತರ ಅದನ್ನು ವಾಣಿಜ್ಯ ಉದ್ದಿಮೆ ರೂಪದಲ್ಲಿ ಮಾರುಕಟ್ಟೆಗೆ ಕೊಂಡೊಯ್ಯುವ ಅವಕಾಶ ಇರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆರ್.ವಿ.ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಪತಿ ಡಾ.(ಹೆಚ್.ಸಿ.) ಎ.ವಿ.ಎಸ್. ಮೂರ್ತಿ, ಆರ್‌ವಿಯು ಪ್ರೊ ಚಾನ್ಸೆಲರ್ ಶ್ರೀ ಡಿ.ಪಿ. ನಾಗರಾಜ್, ಆರ್ ಎಸ್ ಎಸ್ ಟಿ ಅಧ್ಯಕ್ಷ ಡಾ.ಎಂ.ಪಿ. ಶ್ಯಾಮ್, ಆರ್‌ವಿಯು ನಿರ್ದೇಶಕ ನಿಖಿಲ್ ಮೂರ್ತಿ ಹಾಗೂ ಟ್ರಸ್ಟ್‌ನ ಸದಸ್ಯರು ಉಪಸ್ಥಿತರಿದ್ದರು.

ಆರ್‌ವಿ ವಿಶ್ವವಿದ್ಯಾಲಯದ ಬಿ.ಟೆಕ್ ಪದವಿಯನ್ನು ಕಂಪ್ಯೂಟಿಂಗ್ ವಿಷಯದಲ್ಲಿ ಅತ್ಯುನ್ನತ ಜ್ಞಾನ ಒದಗಿಸುವಂತೆ ರೂಪಿಸಲಾಗಿದೆ. ಜೊತೆಗೆ ಆರ್‌ವಿ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಪದವಿಗಳನ್ನು ವಿವಿಧ ಕ್ಷೇತ್ರದ ವೃತ್ತಿಪರರ ಅಗತ್ಯಗಳನ್ನು ಸೂಕ್ತವಾಗಿ ಪೂರೈಸುವ ನಿಟ್ಟಿನಲ್ಲಿ ವಿನ್ಯಾಸ ಗೊಂಡಿದ್ದು, ಅವರವರ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡಲು ನೆರವಾಗುತ್ತವೆ. ಕಾರ್ಯಕ್ರಮದಲ್ಲಿ ಆರ್‌ವಿ ವಿಶ್ವವಿದ್ಯಾನಿಲಯವು ಶೈಕ್ಷಣಿಕವಾಗಿ ಅತ್ಯುನ್ನತ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಮೆರಿಟ್ ವಿದ್ಯಾರ್ಥಿವೇತನವನ್ನು ನೀಡಿ ಗೌರವಿಸಿತು. ಹೊಸ ವಿದ್ಯಾರ್ಥಿಗಳಿಗೆ ಮೂರು ದಿನಗಳ ಓರಿಯಂಟೇಶನ್ ಕಾರ್ಯಕ್ರಮವನ್ನು ಆಯೋ ಜಿಸಲಾಗಿತ್ತು.

**ಆರ್‌ವಿ ವಿಶ್ವವಿದ್ಯಾನಿಲಯದ ಉಪಕುಲಪತಿ (ಐ/ಸಿ) ಪ್ರೊ. (ಡಾ.) ದ್ವಾರಿಕಾ ಪ್ರಸಾದ್ ಉನಿಯಾಲ್ ಅವರು, ಆವಿಷ್ಕಾರ ಮನೋಭಾನ ಒದಗಿಸುವ ಮತ್ತು ಬದಲಾವಣೆ ಉಂಟು ಮಾಡುವ ಶಿಕ್ಷಣ ಒದಗಿಸುವ ನಿಟ್ಟಿನಲ್ಲಿ ನಾವು ಒಂದು ಸಂಸ್ಥೆಯಾಗಿ ಬದ್ಧರಾಗಿದ್ದೇವೆ. ಆರ್‌ವಿ ವಿಶ್ವವಿದ್ಯಾನಿಲಯದಲ್ಲಿ ವಿದ್ಯಾರ್ಥಿಗಳು ಮಹತ್ವದ ಸಾಧನೆ ಮಾಡುವ ವೇದಿಕೆ ಒದಗಿಸುತ್ತೇವೆ ಎಂದು ಹೇಳಿದರು.**

# ಡಿಜಿ ಇಮೇಜ್ ಛಾಯಾಚಿತ್ರ ಕಲಾವಿದರ ಸಮ್ಮೇಳನ

## ಕಿರಿಯರಿಗೆ ಹಿರಿಯರ ಮಾರ್ಗದರ್ಶನ ಅವಶ್ಯ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಅಂತರಾಷ್ಟ್ರೀಯ ವಸ್ತು ಪ್ರದರ್ಶನವನ್ನು ಉದ್ಘಾಟಿಸಿದರು ರಾಜ ಋಷಿ ಡಾ. ಶ್ರೀ ವೀರೇಂದ್ರ ಹೆಗ್ಗಡೆರವರು ಆಶೀರ್ವಚನ ನೀಡಿದರು ನನಗೆ ಬಹಳಷ್ಟು ಖುಷಿ ಕೊಡುವಂತಹ ಅವ್ಯಾಸ ಛಾಯಾಗ್ರಹಣ. ಇಂದು ಛಾಯಾಗ್ರಹಣ ಬೃಹತ್ ಉದ್ಯಮವಾಗಿ ಬೆಳೆದಿದೆ. ಛಾಯಾಗ್ರಹಣ ಕಲೆ, ವಿಜ್ಞಾನ ವಾಣಿಜ್ಯದ ಸಮ್ಮಿಲನ, ಛಾಯಾ ವೃತ್ತಿಬಾಂಧವರು ಕಲಾವಿದರು. ಸರ್ಕಾರ ಹಾಗೂ ಸಾರ್ವಜನಿಕ ಜೀವನದ ಅಮೂಲ್ಯ ಅವಿಸ್ಮರಣೀಯ ಕ್ಷಣಗಳ ಚಿತ್ರೀಕರಿಸಿ ದಾಖಲಿಸುತ್ತಾರೆ. ಇಂತಹ ಛಾಯಾಚಿತ್ರ ಕಲಾವಿದರಿಗೆ ಸಾರ್ವಜನಿಕರ ಸಹಕಾರ ಪ್ರೋತ್ಸಾಹ ಬಹಳಬೇಕು. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಸನ್ಮಾನ್ಯ ಶ್ರೀ ನಸಿರ್ ಅಹಮದ್ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ವೃತ್ತಿಪರ ಛಾಯಾಚಿತ್ರಗ್ರಾಹಕರು ಸಾಂಸ್ಕೃತಿಕ ರಾಯಭಾರಿಗಳು ಇವರು ತೆಗೆಯುವ ಪ್ರತಿಯೊಂದು ಚಿತ್ರವು ಒಂದು ಕಥೆಯನ್ನು ಹೇಳುತ್ತದೆ. ಹತ್ತಾರು ವರ್ಷಗಳ ನಂತರವೂ ಆಲ್ಬಮ್ ನೋಡಿದಾಗ ಮಧುರ ಕ್ಷಣಗಳನ್ನು ಮೆಲುಕು ಹಾಕುತ್ತದೆ. ಆತ್ಮೀಯತೆಯನ್ನು ಬೆಸೆಯುತ್ತದೆ. ಪ್ರತಿಯೊಂದು ಚಿತ್ರಗಳ ಮೌಲ್ಯ ಅಮೂಲ್ಯ ಸಾರ್ವಜನಿಕ, ಸಾಂಸ್ಕೃತಿಕ ಕ್ರೀಡೆ, ಕೈಗಾರಿಕೆ ವಾಣಿಜ್ಯ ರಾಜಕೀಯ ಜೀವನದಲ್ಲಿ ಛಾಯಾಚಿತ್ರ ಕಲಾವಿದರ ಸೇವೆ ಅಗಣನೀಯ. ತಮ್ಮ ಬೇಡಿಕೆ. ಛಾಯಾಗ್ರಹಣ ಅಕಾಡೆಮಿ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆಯ ಮೂಲಕ ಛಾಯಾಚಿತ್ರ ಕಲಾವಿದರ ಸ್ಥಾನಮಾನವನ್ನು ನೀಡುವಂತೆ ಮಾನ್ಯ ಮುಖ್ಯಮಂತ್ರಿಗಳಲ್ಲಿ ಪ್ರಸ್ತಾಪ ಮಾಡುತ್ತೇನೆ ಬೇಡಿಕೆ ಈಡೇರುವ ಸರ್ವ ಪ್ರಯತ್ನವನ್ನು ಮಾಡುತ್ತೇನೆ ಎಂದು ಸಭೆಯಲ್ಲಿ ತಿಳಿಸಿದರು.

ಮಾಜಿ ಉಪಮುಖ್ಯಮಂತ್ರಿ ಅಶ್ವಥ್ ನಾರಾಯಣ್ ಕರ್ನಾಟಕ ಛಾಯಾಚಿತ್ರ ಗ್ರಾಹಕರ ಸಂಘದೊಂದಿಗೆ ನನ್ನ ನೆಂಟು ಹತ್ತಾರು ವರ್ಷಗಳಿಂದ ಇದೆ. ನೋವು ನಲಿವು ಎಲ್ಲಾರಂತೆ ನಾನು ಸಹ ಕಂಡಿದ್ದೇನೆ. ಇತ್ತೀಚಿನ ದಿನಗಳಲ್ಲಿ ಮೊಬೈಲ್ ಫೋಟೋಗ್ರಾಫಿ ಸಾರ್ವಜನಿಕರನ್ನು, ಯುವ ಪೀಳಿಗೆಯನ್ನು ಬಹಳ ಆಕರ್ಷಿಸಿದೆ. ವೃತ್ತಿಪರ ಛಾಯಾ ವೃತ್ತಿಬಾಂಧವರು ಬೇಡಿಕೆ ಕಡಿಮೆಯಾಗುತ್ತಿದೆ ಎಂಬ ಮಾತನ್ನು ನಾನು ಒಪ್ಪುವುದಿಲ್ಲ. ಜನಸಂಖ್ಯೆ ಬೆಳೆದಂತೆ ಕಂಪ್ಯೂಟರ್ ಹಾಗೂ ಮಷೀನರಿ ರೋಬೋಟಿಕ್, ಎ ಐ ಆವಿಷ್ಕಾರ ಹೆಚ್ಚಾಗಿದೆ ನಿಜ ನಿಮ್ಮಲ್ಲಿರುವ ಕಲಾವಂತಿಕೆಯನ್ನು ಯಾವುದೇ ತಂತ್ರಜ್ಞಾನ ಬದಲಿಸಲು ಸಾಧ್ಯವಿಲ್ಲ. ಅವರ್ಥವಾಗಿ ನಡೆದು ಬಂದ ಈ ವೃತ್ತಿ ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಚ್ಚು ಬೇಡಿಕೆಯನ್ನು ಪಡೆದಿದೆ. ಯಾರು ಹೊಸ ತಂತ್ರಜ್ಞಾನದ ಜೊತೆ ಜೊತೆಗೆ ನಡೆದು ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು.

ಕೈಗಾರಿಕೆಗಳ, ವಾಣಿಜ್ಯ ವರ್ಗಗಳ, ಸಮಾಜದ, ಪತ್ರಿಕಾ ಮಾಧ್ಯಮದ. ಸಭೆ ಸಮಾರಂಭಗಳ ವಿವಿಧ ಆಯಾಮಗಳ ಅತ್ಯುತ್ತಮ ಚಿತ್ರಗಳನ್ನು ಕ್ಲಿಕ್ಕಿಸಿ ಎಡಿಟಿಂಗ್ ಡಿಸೈನಿಂಗ್ ಪ್ರೆಸೆಂಟೇಶನ್ ಕಾಲಕ್ಕೆ ತಕ್ಕಂತೆ ಕೊಡುತ್ತಾರೆ ಅವರು ಮಾತ್ರ ಮಾರುಕಟ್ಟೆಯಲ್ಲಿ ನಿಲ್ಲುತ್ತಾರೆ.

ಅದಕ್ಕೆ ಈ ವಸ್ತು ಪ್ರದರ್ಶನ ಹಾಗೂ ರಾಷ್ಟ್ರಮಟ್ಟದ ಛಾಯಾಚಿತ್ರಗಳ ಪ್ರದರ್ಶನವೇ ಸಾಕ್ಷಿ. ಅತ್ಯುತ್ತಮ ಕ್ಯಾಮರಾಗಳ ಲಾಂಚಿಂಗ್ ಅದಕ್ಕೆ ಸಂಬಂಧಿಸಿದ 2000ಕ್ಕೂ ಅಧಿಕ ಉಪಕರಣಗಳ ಪ್ರದರ್ಶನ ನಡೆದಿದೆ. ಇದರ ಉಪಯೋಗ ಹೆಚ್ಚಾಗಿ ಮುಂದಿನ ವರ್ಷದಲ್ಲಿ ಅತ್ಯುತ್ತಮ ಕಮರ್ಷಿಯಲ್ ಪ್ರೊಫೆಷನಲ್ ಆರ್ಟಿಸನ್ ಛಾಯಾ ಚಿತ್ರ ಗ್ರಾಹಕರಾಗಿ ಸಮಾಜದಲ್ಲಿ ತಲೆ ಎತ್ತುವ ಎಲ್ಲಾ ಸಾಧ್ಯತೆಗಳು ಇದೆ. ಜೀವನ ಭದ್ರತೆ, ವೃತ್ತಿ ಭದ್ರತೆಗಾಗಿ ಸರ್ಕಾರವನ್ನೇ ಅವಲಂಬಿಸುವ ಬದಲಿಗೆ ನಿಮ್ಮ ರಾಜ್ಯಾಧ್ಯಕ್ಷರಾದ ಎಚ್‌ಎಸ್ ನಾಗೇಶ್ ಕಾರ್ಯದರ್ಶಿ ಮುರಳಿ, ಪರಮೇಶ್, ಖಜಾಂಚಿ ಲವರಾಜ್, ಉಪಾಧ್ಯಕ್ಷರಾದ ಹೇಮರಾಜು, ರವಿಕುಮಾರ್, ವಿಜಯ ರಾಘವನ್ ರವರಂತೆ ಅತ್ಯುತ್ತಮ ನಾಯಕರು ಕೆ ಪಿ ಎ ಸಂಘಟನೆಯಲ್ಲಿ ಇದ್ದಾರೆ. ಅವರ ಸಹಾಯ ಸಹಕಾರವನ್ನು ಪಡೆಯಿರಿ. ಸಂಘಟನೆಯನ್ನು ಗಟ್ಟಿಗೊಳಿಸಿ ಅನೇಕ ಯೋಜನೆಗಳನ್ನು ರೂಪಿಸಿ. ಸಭೆಯಲ್ಲಿ ನೆರೆದ ಸರ್ವರನ್ನು ತಮ್ಮ ಮಾತುಗಳಿಂದ ಪ್ರೇರೇಪಿಸಿದರು. ಸಂಘದ ರಾಜ್ಯಾಧ್ಯಕ್ಷರಾದ ಎಚ್‌ಎಸ್ ನಾಗೇಶ್ ರವರು ಮಾತನಾಡಿ. ಪ್ರತಿ ತಾಲ್ಲೂಕು ಜಿಲ್ಲೆ ನಗರಗಳಲ್ಲಿರುವ ಛಾಯಾ ವೃತ್ತಿಬಾಂಧವರು ಮೊದಲು ಸಂಘಟನೆಯೊಂದಿಗೆ ಸೇರಿ ಕೈಜೋಡಿಸಿ. ನಿಮ್ಮ ಕ್ಷೇಮಾಭಿವೃದ್ಧಿ ಭದ್ರತೆಗಾಗಿ ನಾವಿದ್ದೇವೆ. ಸರ್ಕಾರದ ಯೋಜನೆಗಳು ಸಹ ನಿಮಗೆ ಸಿಗುವಂತೆ ಮಾಡುವ ಎಲ್ಲಾ ಪ್ರಯತ್ನ ಸಾಗರೋಪಾದಿಯಲ್ಲಿ ನಡೆಯುತ್ತಿದೆ.

ಡಿಜಿ ಇಮೇಜ್ ಪ್ರದರ್ಶನದಲ್ಲಿ ಛಾಯಾಚಿತ್ರ ಪ್ರದರ್ಶನ ಪ್ರಶಸ್ತಿ ಪ್ರಧಾನ ಸಮಾರಂಭ ಸಾಧರಿಕರಿಗೆ ಸನ್ಮಾನ ಆಗಮಿಸಿದ್ದ ಛಾಯಾರುತಿ ಬಾಂಧವರಿಗೆ ಉಚಿತ ಕಾರ್ ಪಾರ್ಕಿಂಗ್, ಲಗೇಜ್ ಕೌಂಟರ್, ಊಟದ ವ್ಯವಸ್ಥೆ, ಕೆಪಿಎ ಫೋಟೋಗ್ರಾಫಿ ಅಕಾಡೆಮಿ ಮುಲಕ ಫ್ಯಾಶನ್ ಶೋ, ಟಾಕ್ ಶೋ, ಕಾರ್ಯಗಾರ ಆಯೋಜಿಸಲಾಗಿತ್ತು.

**ಡಿಜಿ ಇಮೇಜ್ 2024 ದಶಮಾನೋತ್ಸವ ಸಡಗರ ಸಂಭ್ರಮ ಹಬ್ಬ ರಾಜ್ಯದ ಜಿಲ್ಲಾ ತಾಲ್ಲೂಕು ಕೇಂದ್ರಗಳಿಂದ ಆಗಮಿಸಿದ ಸಂಘದ ಪದಾಧಿಕಾರಿಗಳು ಹಾಗೂ ಛಾಯಾ ವೃತ್ತಿಬಾಂಧವರಿಗೆ ಅಭಿನಂದನೆಗಳು ಕಳೆದ ಮೂರು ದಿನಗಳಿಂದಲೂ ವೃತ್ತಿಬಾಂಧವರಿಂದ ಈ ಪ್ರದರ್ಶನ ಅಂಗಳವೂ ಸಂಪೂರ್ಣ ತುಂಬಿಕೊಂಡಿದೆ. ಯಶಸ್ಸಿಗೆ ನಿಮ್ಮ ಪ್ರೋತ್ಸಾಹ ಸಹಕಾರವೇ ಕಾರಣ. ಫೋಟೋ ಟೆಕ್ ಪರಿವಾರ, ಎಡಿಟ್ ಪಾಯಿಂಟ್, ಸ್ವಾನ್ ಲೈನ್ ಸ್ಟುಡಿಯೋ ಮುಂತಾಗಿ ವಿಶೇಷ ಸಹಕಾರವನ್ನು ನೀಡಿದ ಪ್ರತಿಯೊಂದು ಕಂಪನಿಗಳಿಗೆ ಅಭಿನಂದಿಸುತ್ತೇನೆ. ಛಾಯಾಶ್ರೀ ಛಾಯಾ ಸಾಧಕ ವಿಶಿಷ್ಟ ಸೇವಾ ಸಾಧಕ ಪ್ರಶಸ್ತಿಯನ್ನು ಪಡೆಯುತ್ತಿರುವ ಸಾಧಕರನ್ನು ಅಭಿನಂದಿಸಿದರು. ಕೆಪಿಎ ಬೃಹತ್ ರಾಜ್ಯ ಛಾಯಾರುತಿ ಬಾಂಧವರ ಸಮಾವೇಶ ಕೆ ಪಿ ಎ ಫೋಟೋಗ್ರಫಿ ಅಕಾಡೆಮಿಗಳ ಮೂಲಕ ಕಾರ್ಯಗಳ ಅಸಂಘಟಿತ ಕಾರ್ಮಿಕ ವಲಯದ ಯೋಜನೆಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವ ಕಾರ್ಯವನ್ನು ಕೆಪಿಎ ಕೈಗೆತ್ತಿಕೊಂಡಿದೆ ಎಂದು ಸಭೆಯಲ್ಲಿ ತಿಳಿಸಿದರು.**

# ಜಿಲ್ಲಾ ಮಟ್ಟದ ರೆಡ್ ರಿಬ್ಬನ್ ಮ್ಯಾರಥಾನ್ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನಗರ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕ, ಬೆಂಗಳೂರು ನಗರ ,ಬಿಬಿಎಂಪಿ ಹಾಗೂ ಲಯನ್ಸ್ ಕ್ಲಬ್ ಜಿಲ್ಲೆ 317ಎ ಸಹಯೋಗದೊಂದಿಗೆ ಯುವಜನೋತ್ಸವ 2024 ಜಿಲ್ಲಾ ಮಟ್ಟದ ರೆಡ್ ರಿಬ್ಬನ್ ಮ್ಯಾರಥಾನ್ ಕಾರ್ಯ ಕ್ರಮವನ್ನು ನಗರದ ಕಂಠೀರವ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮಕ್ಕೆ ಚಲನಚಿತ್ರ ನಟ ಗಣೇಶ ರಾವ್ ಕೆಸರ್ಕರ್ ಲಯನ್ಸ್ ಉಪ ರಾಜ್ಯಪಾಲರಾದ ಈಶ್ವರನ್ ರವರು ಚಾಲನೆ ನೀಡಿದವರು. ಯುವ ಜನ ಇಲಾಖೆಯ ಸಹಾಯಕ ನಿರ್ದೇಶಕರಾದ ಶಶಿಕಲಾ, ಸಹಾಯಕ ಯೋಜನಾ ನಿರ್ದೇಶಕರಾದ ಡಾ. ಉಮಾ ಬುಗ್ಗಿ, ಲಯನ್ ಮನೋಜ್ ಕುಮಾರ್ ರವರು ವಿಜೇತರಿಗೆ ಬಹುಮಾನ ವಿತರಿಸಿದರು. ಈ ವೇಳೆ ನಟ ಗಣೇಶ ರಾವ್ ಕೆಸರ್ಕರ್ ರವರು ಮಾತನಾಡಿ ಹೆಚ್‌ಐವಿ. ಏಡ್ಸ್ ಬಗ್ಗೆ ಅರಿವು, ಸೇವಾ ಸೌಲಭ್ಯಗಳ ಮಾಹಿತಿ, ಕಳಂಕ, ತಾರತಮ್ಯ, ಹೆಚ್.ಐ.ವಿ. ಏಡ್ಸ್ ತಡೆ ಕಾಯ್ದೆ -2017, ನ್ಯಾಕೋ ಏಡ್ಸ್ ಆಯಪ್, ಉಚಿತ ರಾಷ್ಟ್ರೀಯ ಸಹಾಯವಾಣಿ -1097, ಎಸ್.ಟಿ.ಐ. ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು ಮ್ಯಾರಥಾನ್‌ನ ಮೂಲ ಉದ್ದೇಶವಾಗಿದೆ. ಮ್ಯಾರಥಾನ್‌ನಲ್ಲಿ ಭಾಗಿಯಾದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರೆಡ್ ರಿಬ್ಬನ್ ಮ್ಯಾರಥಾನ್ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ 5,000, ದ್ವಿತೀಯ ಬಹುಮಾನ 3500, ತೃತೀಯ ಬಹುಮಾನ 2500, ಸಮಾಧಾನಕರ ಬಹುಮಾನ 4000 ರೂಗಳನ್ನು ನೀಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದರು. ಕಾರ್ಯಕ್ರಮದಲ್ಲಿ ಲಯನ್ಸ್ ಸಂಪುಟ ಕಾರ್ಯದರ್ಶಿ ಲಯನ್ ರಾಮ ಚಂದ್ರ, ಲಯನ್ ಮನೋಜ್ ಕುಮಾರ್, ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳಾದ ಡಾ. ರಮೇಶ್, ಡಾ. ಕೋಮಲ ಜಿಲ್ಲಾ ಮೇಲ್ವಿಚಾರಕರಾದ ಡಿ.ಎಂ ಯಶೋಧ, ಹನುಮಂತ ರಾಯಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಂ ರೇವಣ್ಣ ಸೇರಿದಂತೆ ಇತರರು ಭಾಗವಹಿಸಿದ್ದರು.

# ಸಹಕಾರದ ಮೂಲಕ ಸಮೃದ್ಧಿ ಸಂದೇಶ ಜಾಗತಿಕ ವೇದಿಕೆಯಲ್ಲಿ ಹರಡಲಿದೆ ಭಾರತ

• ಉದಯವಾಹಿನಿ, ಬೆಂಗಳೂರು

ಅಂತಾರಾಷ್ಟ್ರೀಯ ಸಹಕಾರ ಒಕ್ಕೂಟದ (ಐಸಿಎ) 130 ವರ್ಷಗಳ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಐಸಿಎ ಸಾಮಾನ್ಯ ಸಭೆ ಮತ್ತು ಜಾಗತಿಕ ಸಹಕಾರ ಸಮ್ಮೇಳನ ಭಾರತದ ಆತಿಥ್ಯದಲ್ಲಿ ನಡೆಯಲಿದೆ. ಇತರ 17 ಐಸಿಎ ಸದಸ್ಯ ಸಂಸ್ಥೆಗಳ ಸಹಯೋಗದೊಂದಿಗೆ ಇಫ್ಕೊ ಈ ಸಮ್ಮೇಳನ ಆಯೋಜಿಸುತ್ತಿದೆ. ಈ ಕಾರ್ಯಕ್ರಮವನ್ನು ಭಾರತ ಸರ್ಕಾರದ ಸಹಕಾರ ಸಚಿವಾಲಯದ ವಿಶೇಷ ಬೆಂಬಲ ಮತ್ತು ಮಾರ್ಗದರ್ಶನದೊಂದಿಗೆ ಆಯೋಜಿಸಲಾಗುವುದು ಎಂದು ಇಫ್ಕೊ ಅಧ್ಯಕ್ಷ ಶ್ರೀ ದಿಲೀಪ್ ಸಂಘಾನಿ ಮಾಹಿತಿ ನೀಡಿದ್ದಾರೆ.




ಉದಯವಾಹಿನಿ ಚಿತ್ರ

ಐಸಿಎ ಸಾಮಾನ್ಯ ಸಭೆ ಮತ್ತು ಜಾಗತಿಕ ಸಹಕಾರ ಸಮ್ಮೇಳನವು 2024ರ ನವೆಂಬರ್ 25 ರಿಂದ 30 ರವರೆಗೆ ಭಾರತದ ನವದೆಹಲಿಯ ಭಾರತ್ ಮಂಟಪದಲ್ಲಿ ನಡೆಯಲಿದೆ.

**ಸಹಕಾರ:** ಎಲ್ಲಾರಿಗೂ ಸಮೃದ್ಧಿಯ ಹೆಬ್ಬಾಗಿಲು ಎಂಬ ವಿಷಯದ ಈ ಕಾರ್ಯಕ್ರಮವು ಜಾಗತಿಕ ವೇದಿಕೆಯಲ್ಲಿ ಭಾರತೀಯ ಸಹಕಾರಿ ಸಂಘಗಳ ಪ್ರಾಮುಖ್ಯತೆ ಹೆಚ್ಚಿಸಲಿದೆ. ಇದು ಭಾರತೀಯ ಸಹಕಾರಿ ಸಂಸ್ಥೆಗಳಿಗೆ ತಮ್ಮ ಸಾಧನೆಗಳು, ಸವಾಲುಗಳು ಮತ್ತು ಕೊಡುಗೆಗಳನ್ನು ಪ್ರದರ್ಶಿಸಲು ಅವಕಾಶ ನೀಡಲಿದೆ. ಇದರೊಂದಿಗೆ ಭಾರತೀಯ ಸಹಕಾರಿ ಮಾದರಿಗೆ ಉತ್ತೇಜನ ನೀಡಲಿದೆ.

ಈ ಕಾರ್ಯಕ್ರಮವು ವಿಶ್ವಸಂಸ್ಥೆಯ ಅಂತಾರಾಷ್ಟ್ರೀಯ ಸಹಕಾರ ವರ್ಷ 2025ರ ಅಧಿಕೃತ ಘೋಷಣೆಯ ಹಿನ್ನೆಲೆಯಲ್ಲಿ ಹೆಚ್ಚು ಪ್ರಾಮುಖ್ಯತೆ ಪಡೆಯಲಿದೆ. ಈ ಸಮ್ಮೇಳನದಲ್ಲಿ ಭೂತಾನ್ ನ ಗೌರವಾನ್ವಿತ ಪ್ರಧಾನಿ, ವಿಶ್ವಸಂಸ್ಥೆಯ ಆರ್ಥಿಕ ಮಂಡಳಿಯ (ಯುಎನ್ ಇಸಿಒಎಸ್‌ಒಸಿ) ಅಧ್ಯಕ್ಷರು, ಅಂತಾರಾಷ್ಟ್ರೀಯ ಸಹಕಾರ ಒಕ್ಕೂಟದ ಅಧ್ಯಕ್ಷರು, ಫಿಜಿ ದೇಶದ ಗೌರವಾನ್ವಿತ ಉಪ ಪ್ರಧಾನಿ ಮತ್ತು ವಿಶ್ವಸಂಸ್ಥೆ ಸೇರಿದಂತೆ 100 ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಸೇರಿದಂತೆ 1500 ಅತಿಥಿಗಳು ಭಾಗವಹಿಸುವ ನಿರೀಕ್ಷೆಯಿದೆ.


ಇಫ್ಕೊ ಅಧ್ಯಕ್ಷ ಶ್ರೀ ದಿಲೀಪ್ ಸಂಘಾನಿ ಈ ಕುರಿತು ಮಾತನಾಡಿ, ಸಹಕಾರದ ಮೂಲಕ ಸಮೃದ್ಧಿ' ಸಾಧಿಸುವ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಭಾರತದ ಮೊದಲ ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಅವರ ನಾಯಕತ್ವದಲ್ಲಿ ಜಾಗತಿಕ ಮನ್ನಣೆ ಲಭಿಸಿದೆ ಎಂದು ಹೇಳಿದರು.

**ಅಮಿತ್ ಶಾ ನೇತೃತ್ವದ ಸಚಿವಾಲಯವು ಹಲವಾರು ಮಹತ್ವದ ನಿರ್ಧಾರಗಳನ್ನು ತೆಗೆದುಕೊಂಡಿದೆ. ಇದರಿಂದಾಗಿ ಭಾರತದ ಸಹಕಾರಿ ಚಳುವಳಿಯು ವಿಶ್ವದ ಪ್ರಮುಖ ಶಕ್ತಿಯಾಗಿ ಹೊರಹೊಮ್ಮಿದೆ. ತೆರಿಗೆ ಸುಧಾರಣೆಗಳು, ಪಿಎಸಿಎಸ್‌ನ ರಾಷ್ಟ್ರೀಯ ಡೇಟಾಬೇಸ್ ರಚನೆ ಅಥವಾ ಪಿಎಸಿಎಸ್‌ನ ಕಂಪ್ಯೂಟರಿಕರಣ ಸೇರಿದಂತೆ ಅಮಿತ್ ಶಾ ಅವರ ನಾಯಕತ್ವದಲ್ಲಿ ಅನೇಕ ಮೂಲಭೂತ ಸುಧಾರಣೆಗಳನ್ನು ಮಾಡಲಾಗಿದೆ ಎಂದು ದಿಲೀಪ್ ಸಂಘಾನಿ ಹೇಳಿದ್ದಾರೆ.**

# ಅತ್ಯಾಧುನಿಕ ಕ್ಸೋಜೆನ್ ಥೆರಪಿ ಅನಾವರಣ ಮಾಡಿದ ಡಾ ಬಾತ್ರಾಸ್

## ಅನುವಂಶಿಕ ಕೂದಲು ಉದುರುವಿಕೆ ಸಮಸ್ಯೆಗೆ ಪರಿಹಾರ ಒದಗಿಸುವ ಮೊತ್ತ ಮೊದಲ ಎಕ್ಸೋಸೋಮ್ ಆಧರಿತ ಉತ್ಪನ್ನ

• ಉದಯವಾಹಿನಿ, ಬೆಂಗಳೂರು




ಉದಯವಾಹಿನಿ ಚಿತ್ರ

ವಿಶ್ವದ ಅತಿದೊಡ್ಡ ಹೋಮಿಯೋಪತಿ ಚಿಕಿತ್ಸಾಲಯ ಸಮೂಹ ಆಗಿರುವ ಡಾ ಬಾತ್ರಾಸ್‌ಲ ಹೆಲ್ತ್‌ಕೇರ್ ಭಾರತದ ಮೊಟ್ಟಮೊದಲ ಮತ್ತು ವಿಶ್ವದ ಅತ್ಯಾಧುನಿಕ ಎಕ್ಸೋಸೋಮ್ ಆಧರಿತ ಕೂದಲು ಚಿಕಿತ್ಸಾ ವಿಧಾನವಾದ ಕ್ಸೋಜೆನ್ ಅನ್ನು ಬೆಂಗಳೂರಿನಲ್ಲಿ ಅನಾವರಣ ಮಾಡಿದೆ.

ಈ ಅತ್ಯಾಧುನಿಕ ಚಿಕಿತ್ಸೆಯನ್ನು ಪುರುಷ, ಮಹಿಳೆಯರಲ್ಲಿ ಉಂಟಾಗುವ ಅನುವಂಶಿಕ ಕೂದಲು ಉದುರುವಿಕೆ ಸಮಸ್ಯೆಯನ್ನು ತಡೆಗಟ್ಟಲು ವಿನ್ಯಾಸಗೊಳಿಸಲಾಗಿದೆ.

ನಗರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಹೊಸ ಚಿಕಿತ್ಸಾ ವಿಧಾನವನ್ನು ಅನಾವರಣಗೊಳಿಸಲಾಯಿತು. ಈ ವಿಧಾನವು ಅತ್ಯುತ್ತಮವಾದ ಫಾಮುಲೇಶನ್ ಅನ್ನು ಹೊಂದಿದ್ದು, ಕೇವಲ ಮೂರು ತಿಂಗಳಲ್ಲಿ ಆನುವಂಶಿಕ ಕೂದಲು ಉದುರುವಿಕೆ ಸಮಸ್ಯೆ ತಡೆಗಟ್ಟುವುದಾಗಿ ಪ್ರಾಯೋಗಿಕವಾಗಿ ಸಾಬೀತಾಗಿದೆ. ಈ ಅತ್ಯಾಧುನಿಕ ನವೀನ ಚಿಕಿತ್ಸೆಯನ್ನು ಮುಂದಿನ ಪೀಳಿಗೆಯ ಚಿಕಿತ್ಸಾ ಕ್ರಮವೆಂದು ಉಲ್ಲೇಖಿಸಲಾಗಿದ್ದು, ಕೂದಲು ಪುನಃಸ್ಥಾಪನೆ ಮತ್ತು ಸೆಲ್ಯುಲರ್ ರೀಜನರೇಶನ್ ಕ್ಷೇತ್ರದ ಅತ್ಯಾಧುನಿಕ ಉತ್ಪನ್ನವಾಗಿದೆ. ಕ್ಸೋಜೆನ್ ಎಕ್ಸೋಸೋಮ್ ಥೆರಪಿಯು ಕೂದಲು ಉದುರುವಿಕೆಯನ್ನು ತಡೆಯುವ ನೈಸರ್ಗಿಕ ಮತ್ತು ಅತ್ಯಾಧುನಿಕ ವಿಧಾನವಾಗಿದೆ.

ಕೂದಲು ಪುನಃಸ್ಥಾಪನೆ ವಿಜ್ಞಾನವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ದಿರುವ ಈ ತೆರಪಿಯು ಹೆಚ್ಚು ಸುರಕ್ಷಿತ ಉತ್ಪನ್ನವಾಗಿದೆ. ಸೆಲ್ಯುಲರ್ ಪ್ರಕ್ರಿಯೆಗಳನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುವ ಎಕ್ಸೋಸೋಮ್‌ಗಳು ಈ ಚಿಕಿತ್ಸೆಯ ಪ್ರಧಾನ ಅಂಶವಾಗಿ ಕಾರ್ಯನಿರ್ವಹಿಸುತ್ತವೆ.

ಸಮೃದ್ಧ ಬೆಳವಣಿಗೆಯ ಅಂಶಗಳನ್ನು ಹೊಂದಿರುವ ಎಕ್ಸೋಸೋಮ್‌ಗಳನ್ನು ಬಿಡುಗಡೆ ಮಾಡುವ ಮೂಲಕ ಚಿಕಿತ್ಸಾ ಪ್ರಕ್ರಿಯೆಯು ಪ್ರಾರಂಭವಾಗುತ್ತದೆ. ಅವುಗಳನ್ನು ಕೂದಲು ಇಲ್ಲದಿರುವ ನೆತ್ತಿಯ ಪ್ರದೇಶಗಳಿಗೆ ಕಳುಹಿಸಲಾಗುತ್ತದೆ.

ಅಲ್ಲಿ ಅವು ಹಾನಿಗೊಳಗಾದ ಕೂದಲಿನ ಕೋಶಗಳನ್ನು ಪತ್ತೆಹಚ್ಚುತ್ತವೆ ಮತ್ತು ಅಲ್ಲಿಗೆ ಅಂಟಿಕೊಳ್ಳುತ್ತವೆ. ನಂತರ ಎಕ್ಸೋಸೋಮ್‌ಗಳು ಕೂದಲು ಕಿರುಚೀಲಗಳಲ್ಲಿ ಹೀರಿಕೊಳ್ಳಲ್ಪಡುತ್ತವೆ.

ಆಗ ಬಳಿಕ ಕೂದಲು ಬೆಳೆಸುವ ಕಾಂಡಕೋಶಗಳಿಗೆ ಜೀವ ಬರುವಂತೆ ಮಾಡಿ ಕ್ರಿಯಾಶೀಲಗೊಳಿಸುತ್ತದೆ ಮತ್ತು ಸೆಲ್ಯುಲರ್ ಪುನರುತ್ಪಾದನೆ ಮಾಡುತ್ತದೆ.

ಕಾರ್ಯಕ್ರಮದಲ್ಲಿ ವ್ಯವಸ್ಥಾಪಕ ನಿರ್ದೇಶಕ ಮತ್ತು ಟ್ರೈಕೊಲಾಜಿಸ್ಟ್ ಡಾ. ಅಕ್ಷಯ್ ಬಾತ್ರಾ, ಜೊತೆಗೆ ಡಾ. ಬಾತ್ರಾಸ್ ಗ್ರೂಪ್ ಕಂಪನಿಗಳ ಹಿರಿಯ ಮಾರ್ಗದರ್ಶಕ ಡಾ. ಡೇನಿಯಲ್ ರಾಜ್ ಉಪಸ್ಥಿತರಿದ್ದರು.

**ಡಾ. ಬಾತ್ರಾಸ್‌ಲ ಹೆಲ್ತ್‌ಕೇರ್‌ನ ವೈಸ್ ಚೇರ್ ಮನ್ ಮತ್ತು ವ್ಯವಸ್ಥಾಪಕ ನಿರ್ದೇಶಕ ಹಾಗೂ ಲಂಡನ್‌ನ ಟ್ರೈಕೊಲಾಜಿಕಲ್ ಸೊಸೈಟಿ (ಯುಕೆ)ಯ ಮೊದಲ ಭಾರತೀಯ ಅಧ್ಯಕ್ಷರಾಗಿರುವ ಡಾ. ಅಕ್ಷಯ್ ಬಾತ್ರಾ ಅವರು, ಭಾರತದಲ್ಲಿ ಪುರುಷರು ಮತ್ತು ಮಹಿಳೆಯರು ಇಬ್ಬರಿಗೂ ಕೂದಲು ಉದುರುವಿಕೆ ದೊಡ್ಡ ಸಮಸ್ಯೆಯಾಗಿ ಎದುರಾಗಿದೆ. ಈ ಸಮಸ್ಯೆಯಿಂದ ಆತ್ಮವಿಶ್ವಾಸ ಕಡಿಮೆ ಆಗುತ್ತದೆ. ಖಿನ್ನತೆ ಉಂಟಾಗುತ್ತದೆ. ಪ್ಯಾಟರ್ನ್ ಬಾಲ್ಡ್ ನೆಸ್ ಈಗ 21 ವರ್ಷಗಳಲ್ಲಿಯೇ ಕಾಣಿಸಿಕೊಳ್ಳುತ್ತಿದೆ ಎಂದು ಕೆಲವು ಅಧ್ಯಯನಗಳು ವರದಿ ಮಾಡಿವೆ. ವಿಶೇಷವಾಗಿ ಮತ್ತೊಂದು ಅಧ್ಯಯನವು ಶೇ.50 ಪುರುಷರು ಮತ್ತು ಶೇ.22 ಮಹಿಳೆಯರು ಪ್ಯಾಟರ್ನ್ ಬಾಲ್ಡ್ ನೆಸ್ ಸಮಸ್ಯೆಯಿಂದ ಬಳಲುತ್ತಿದ್ದಾರೆ ಎಂದು ತಿಳಿಸಿದೆ. ಈ ಸಮಸ್ಯೆಯನ್ನು ಪರಿಹರಿಸಲು ಉದ್ದೇಶದಿಂದ ನಾವು ಕ್ಸೋಜೆನ್ ಚಿಕಿತ್ಸೆಯನ್ನು ಪರಿಚಯಿಸಿದ್ದೇವೆ. ಈ ಚಿಕಿತ್ಸೆಯು ಕೂದಲು ಪುನಃಸ್ಥಾಪನೆ ಕ್ಷೇತ್ರದಲ್ಲಿನ ಕ್ರಾಂತಿಕಾರಕ ಬೆಳವಣಿಗೆ ಆಗಿದೆ. ಎಕ್ಸೋಸೋಮ್ ಥೆರಪಿ ಒಂದು ಅತ್ಯಾಧುನಿಕ ಆವಿಷ್ಕಾರವಾಗಿದ್ದು, ನಮ್ಮ ಆನುವಂಶಿಕ ಕೂದಲು ನಷ್ಟಕ್ಕೆ ಸುರಕ್ಷಿತ, ನೈಸರ್ಗಿಕ ಮತ್ತು ಹೆಚ್ಚು ಪರಿಣಾಮಕಾರಿ ಚಿಕಿತ್ಸೆ ಆಗಿದೆ. ಡಾ ಬಾತ್ರಾಸ್‌ಲ ನಲ್ಲಿ ಅತ್ಯುತ್ತಮ ಚಿಕಿತ್ಸೆ ನೀಡಲು ಬದ್ಧರಾಗಿದ್ದೇವೆ ಮತ್ತು ಕ್ಸೋಜೆನ್ ಥೆರಪಿ ಅದಕ್ಕೆ ಸಾಕ್ಷಿಯಾಗಿದೆ'' ಎಂದು ಹೇಳಿದರು.**

# ಜಿಲ್ಲೆಯಲ್ಲಿ 53,324 ಅನರ್ಹ ಬಿಪಿಎಲ್ ಕಾರ್ಡ್

## ಬಿಪಿಎಲ್ ಅನರ್ಹರ ಕಾರ್ಡ್‌ಗಳನ್ನು ಪತ್ತೆ ಮಾಡುವುದು ನಮ್ಮ ದೈನಂದಿನ ಕೆಲಸದ ಭಾಗವಾಗಿ ಮಾರ್ಪಟ್ಟಿದೆ: ಆರ್.ಅವಿನ್

• **ಉದಯವಾಹಿನಿ ಶಿವಮೊಗ್ಗ**

ಗ್ಯಾರಂಟಿ ಯೋಜನೆ, ಬಡವರಿಗೆ ಉಚಿತ ಅಕ್ಕಿ ವಿತರಣೆ ಸೇರಿ ಬೇರೆ ಬೇರೆ ಸಾಮಾಜಿಕ, ಆರ್ಥಿಕ ನೆರವಿನ ಕಾರ್ಯಕ್ರಮಗಳ ಅನುಷ್ಠಾನದ ಮೂಲಕ ಬಡತನ ನಿರ್ಮೂಲನೆಗೆ ಒಂದೆಡೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಮುಂದಾಗಿವೆ. ಆದರೆ, ಆ ಯೋಜನೆಗಳ ಆಶಯವನ್ನೇ ಅಣಕಿಸುವಂತೆ ಪಡಿತರ ವ್ಯವಸ್ಥೆಯಲ್ಲಿ ಬಡತನ ರೇಖೆಗಿಂತ ಕೆಳಗಿರುವವರ (ಬಿಪಿಎಲ್) ಅನರ್ಹರ ಸಂಖ್ಯೆ ಹೆಚ್ಚುತ್ತಲೇ ಇದೆ.

ಇದಕ್ಕೆ ಪೂರಕವಾಗಿ ಎಂಬಂತೆ ಬಿಪಿಎಲ್ ಕಾರ್ಡ್ ಹಾಗೂ ಕಡು ಬಡವರಿಗೆ ಕೊಡುವ ಅಂತ್ಯೋದಯ ಅನ್ನ ಯೋಜನೆಯ ಕಾರ್ಡ್‌ಗಳಿಗೆ ವರ್ಷದಿಂದ ವರ್ಷಕ್ಕೆ ಬೇಡಿಕೆ ಹೆಚ್ಚುತ್ತಲೇ ಇದೆ. ಈ ಚಮತ್ಕಾರ ಬಡತನ ನಿರ್ಮೂಲನೆಯ ಹೆಜ್ಜೆಯಲ್ಲಿ ಸರ್ಕಾರದ ಹೆಜ್ಜೆಗೆ ಹಿನ್ನಡೆಯುಂಟು ಮಾಡಿದೆ ಎಂಬ ಕೂಗು ಕೇಳಿ ಬರುತ್ತಿದೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ, ನೈಜ ಫಲಾನುಭವಿಗಳಿಗೆ ಮಾತ್ರ ಪಡಿತರ ವ್ಯವಸ್ಥೆಯ ಉಪಯೋಗ ದೊರೆಯುವಂತೆ ಮಾಡಲು, ಸೋರಿಕೆ ತಡೆಗಟ್ಟಲು ಅನರ್ಹರ ಪಡಿತರ ಚೀಟಿ ಪತ್ತೆ ಕಾರ್ಯ ಚುರುಕುಗೊಳಿಸಿದೆ.

**50,000ಕ್ಕೂ ಹೆಚ್ಚು ಅನರ್ಹರು:** ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆಯ ಮಾಹಿತಿಯಂತೆ ಶಿವಮೊಗ್ಗ ಜಿಲ್ಲೆಯಲ್ಲಿ 53,324 ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಕಳೆದ 6 ತಿಂಗಳಲ್ಲಿ ಪತ್ತೆ ಮಾಡಲಾಗಿದೆ. ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರ ಪಟ್ಟಿ ಮಾಡಲಾಗಿದೆ. ಜಿಲ್ಲೆಯ ಪ್ರತೀ ತಾಲ್ಲೂಕಿನಲ್ಲಿ 7,000ದಿಂದ 8,000 ಅನರ್ಹರನ್ನು ಗುರುತಿಸಲಾಗಿದೆ. ಆ ಕಾರ್ಡ್‌ಗಳನ್ನು ಪರಿಶೀಲಿಸಿ ರದ್ದುಗೊಳಿಸುವ ಕಾರ್ಯ ನಡೆದಿದೆ' ಎಂದು ಆಹಾರ ಇಲಾಖೆಯ ಉಪನಿರ್ದೇಶಕ ಆರ್.ಅವಿನ್ ಹೇಳುತ್ತಾರೆ. ಕುಟುಂಬದ ಆದಾಯ ವಾರ್ಷಿಕ 1.20 ಲಕ್ಷಕ್ಕಿಂತ ಹೆಚ್ಚು ಇದ್ದರೆ, ಆ ಕುಟುಂಬದ ಸದಸ್ಯರಲ್ಲಿ ಯಾರಾದರೂ ಆದಾಯ ತೆರಿಗೆ ಪಾವತಿಸುತ್ತಿದ್ದರೆ ಹಾಗೂ ಸರ್ಕಾರಿ ನೌಕರಿಯಲ್ಲಿದ್ದರೆ ಬಿಪಿಎಲ್ ಕಾರ್ಡ್ ರದ್ದಾಗುತ್ತದೆ. ಅವರು ಎಪಿಎಲ್ ಪಟ್ಟಿಗೆ ಸೇರ್ಪಡೆಯಾಗುತ್ತಾರೆ.

**ಪಡಿತರ ಚೀಟಿ ವಿತರಣೆ:** ಜಿಲ್ಲೆಯ ಪಕ್ಷಿನೋಟ ಜಿಲ್ಲೆಯಲ್ಲಿ ಪಡಿತರ ಚೀಟಿ ಹೊಂದಿದ ಕುಟುಂಬಗಳು-4.87,099 ಅಂತ್ಯೋದಯ ಅನ್ನ ಯೋಜನೆ ಫಲಾನುಭವಿಗಳು- 37,609 ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬ - 3.45,982 ಎಪಿಎಲ್ ಕಾರ್ಡ್ ಹೊಂದಿರುವ ಕುಟುಂಬ- 1.3,418 ಜಿಲ್ಲೆಯಲ್ಲಿ 6 ತಿಂಗಳ ಅವಧಿಯಲ್ಲಿ ಬಿಪಿಎಲ್ ಕಾರ್ಡ್ ಹೊಂದಿದ್ದ 72 ಜನ ಸರ್ಕಾರಿ ನೌಕರರನ್ನು ಗುರುತಿಸಲಾಗಿದೆ. ನೌಕರಿ ಸಿಕ್ಕ ನಂತರ ಇಲ್ಲಿಯವರೆಗೆ ಅವರು ಖರೀದಿಸಿರುವ ಅಕ್ಕಿ ಪ್ರತಿ ಕೆ.ಜಿಗೆ 35ರಂತೆ ದರ ನಿಗದಿಪಡಿಸಿ ದಂಡ ಕಟ್ಟಿಸಿಕೊಂಡು ಆ ಕಾರ್ಡ್‌ಗಳನ್ನು ಎಪಿಎಲ್‌ಗೆ ಬದಲಾಯಿಸಿಕೊಟ್ಟಿದ್ದೇವೆ. ಸರ್ಕಾರಿ ನೌಕರರು ಈಗಲೂ ಸ್ವಯಂ ಪ್ರೇರಿತವಾಗಿ ತಮ್ಮ ಬಿಪಿಎಲ್ ಕಾರ್ಡ್ ವಾಪಸ್ ನೀಡಲಿ' ಎಂದು ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಉಪನಿರ್ದೇಶಕ ಅವಿನ್ ಮನವಿ ಮಾಡುತ್ತಾರೆ.

ಹೊಸ ಬಿಪಿಎಲ್ ಕಾರ್ಡ್ ಕೊಡಲು ಆಗಸ್ಟ್ ತಿಂಗಳಿಂದ ಮತ್ತೆ ಪ್ರಕ್ರಿಯೆ ಆರಂಭವಾಗಿದೆ. ಹೊಸದಾಗಿ ಕಾರ್ಡ್ ಕೋರಿ ಜಿಲ್ಲೆಯಲ್ಲಿ ಒಟ್ಟು 22013 ಅರ್ಜಿಗಳು ಬಂದಿವೆ. ಅದರಲ್ಲಿ 19007 ಅರ್ಜಿಗಳನ್ನು ವಿಲೇವಾರಿ ಮಾಡಿ 11175 ಜನರಿಗೆ ಹೊಸ ಕಾರ್ಡ್ ಕೊಡಲಾಗಿದೆ. 7800 ಅರ್ಜಿಗಳು ತಿರಸ್ಕೃತಗೊಂಡಿವೆ. ಇನ್ನೂ 3006 ಅರ್ಜಿಗಳು ವಿಲೇವಾರಿಗೆ ಬಾಕಿ ಇವೆ. ತಿಂಗಳಲ್ಲಿ 10 ದಿನ ಮಾತ್ರ ಅರ್ಜಿ ಸ್ವೀಕರಿಸಲಾಗುತ್ತದೆ. ಅಕ್ಟೋಬರ್‌ಗೆ ಮತ್ತೆ ಅರ್ಜಿ ಪಡೆಯುವ ಪ್ರಕ್ರಿಯೆ ಆರಂಭಿಸಲಾಗುವುದು.

ಕೃಷಿ ಉದ್ದೇಶಕ್ಕೆ ಟ್ರ್ಯಾಕ್ಟರ್ ಹೊಂದಿದವರು ಹಳದಿ ಬೋರ್ಡ್‌ನ ಕಾರು ಇದ್ದವರು ಇಲ್ಲಿಯವರೆಗೆ ಬಿಪಿಎಲ್ ಪಡಿತರ ಚೀಟಿ ಹೊಂದಲು ಅರ್ಹರಾಗಿದ್ದರು. ಈಗ ಸ್ವಂತ ಬಳಕೆಗೆ (ವೈಟ್ ಬೋರ್ಡ್) ಕಾರು ಹೊಂದಿರುವವರು ಬಿಪಿಎಲ್ ಕಾರ್ಡ್‌ಗೆ ಅರ್ಹರಿದ್ದಾರೆ. ಸ್ವಂತ ಬಳಕೆಗೆ ಕಾರು ಹೊಂದಿದವರ ಬಳಿ ಕಾರ್ಡ್ ಇದ್ದರೆ ಅದನ್ನು ರದ್ದು ಪಡಿಸದಂತೆ ಸರ್ಕಾರ ಸುತ್ತೋಲೆ ಹೊರಡಿಸಿದೆ. ಆದರೆ ಕಾರು ಹೊಂದಿರುವವರ ವಾರ್ಷಿಕ 1.20 ಲಕ್ಷ ಆದಾಯ ಮಿತಿ ಹೊಂದಿರಬೇಕು.

> ಬಿಪಿಎಲ್ ಅನರ್ಹರ ಕಾರ್ಡ್‌ಗಳನ್ನು ಪತ್ತೆ ಮಾಡುವುದು ನಮ್ಮ ದೈನಂದಿನ ಕೆಲಸದ ಭಾಗವಾಗಿ ಮಾರ್ಪಟ್ಟಿದೆ. ಇಲಾಖೆಯ ಶಿರಸ್ತೆದಾರರು ಇನ್ಸ್‌ಪೆಕ್ಟರ್‌ಗಳು ಆ ಕೆಲಸಕ್ಕೆ ನಿಯೋಜನೆಗೊಂಡಿದ್ದಾರೆ
> -ಆರ್.ಅವಿನ್, ಉಪನಿರ್ದೇಶಕ ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ


ಉದಯವಾಹಿನಿ ಚಿತ್ರ

> ಸ್ವಂತಕ್ಕೆ ಕಾರು ಹೊಂದುವುದು ಇವತ್ತು ಐಷಾರಾಮಿ ಅಲ್ಲ, ಅವಶ್ಯಕತೆ, ಆದಾಯ ಮಿತಿಯೊಳಗೆ ಇದ್ದು ಕಾರು ಹೊಂದಿರುವವರ ಬಿಪಿಎಲ್ ಕಾರ್ಡ್ ರದ್ದುಪಡಿಸದಂತೆ ಸರ್ಕಾರ ಸುತ್ತೋಲೆ ಹೊರಡಿಸಿರುವುದು ಸ್ವಾಗತಾರ್ಹ
> -ಎಚ್.ಆರ್.ಬಸವರಾಜಪ್ಪ, ಅಧ್ಯಕ್ಷ ರಾಜ್ಯ ರೈತ ಸಂಘ ಹಸಿರುಸೇನೆ

**ಅನರ್ಹರ ಸಂಖ್ಯೆ ಹೆಚ್ಚುತ್ತಲೇ ಇದೆ**

### ಎಪಿಎಲ್‌ಗೆ ಬದಲಾವಣೆ

ಶಿವಮೊಗ್ಗ ಜಿಲ್ಲೆಯಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವ 2395 ಆದಾಯ ತೆರಿಗೆ (ಐಟಿ) ಪಾವತಿದಾರರನ್ನು ಗುರುತಿಸಿ ಅವರ ಕಾರ್ಡ್ ಎಪಿಎಲ್‌ಗೆ ಬದಲಾಯಿಸಲಾಗಿದೆ. ಸತತ 6 ತಿಂಗಳ ಕಾಲ ಪಡಿತರ ಸಾಮಗ್ರಿ ಪಡೆಯದ 8000 ಬಿಪಿಎಲ್ ಕಾರ್ಡ್ ಹಾಗೂ ಮರಣ ಹೊಂದಿದವರ ಹೆಸರಲ್ಲಿದ್ದ 5000 ಬಿಪಿಎಲ್ ಕಾರ್ಡ್ ಗಳನ್ನು ರದ್ದುಪಡಿಸಲಾಗಿದೆ.

# ತಾಲ್ಲೂಕಿನಲ್ಲಿ ಸೆ. ತಿಂಗಳಲ್ಲಿ ಸರಣಿ ಅಪಘಾತ: ಅನೇಕ ಜನರು ಸಾವು

• **ಉದಯವಾಹಿನಿ ಮುದ್ದೇಬಿಹಾಳ**

ಮುದ್ದೇಬಿಹಾಳ ಪಟ್ಟಣ ಸೇರಿದಂತೆ ತಾಲ್ಲೂಕಿನಲ್ಲಿ ಸೆ. ತಿಂಗಳಲ್ಲಿ ಸರಣಿ ಅಪಘಾತಗಳು ನಡೆದು ಅನೇಕ ಜನರು ಸಾವಿಗೀಡಾಗಿದ್ದಾರೆ. ಅಂತಯೇ ಸೆ 22 ಮಧ್ಯಾಹ್ನ ಲಕ್ಷ್ಮೀ ಚಿತ್ರಮಂದಿರ ಮುಂದೆ ಟಿಪ್ಪರ್ ಬೈಕ್‌ಗೆ ಡಿಕ್ಕಿಯಾಗಿ 19 ಹರೆಯದ ತರುಣ ವಿನಯ್ ತಿಪ್ಪಣ್ಣ. ಶಹಾಪೂರ ಚಿಕಿತ್ಸೆ ಫಲಕಾರಿಯಾಗದೆ ಬಾಗಲಕೋಟೆ ಮಾರ್ಗ ಮಧ್ಯೆ ಅಸುನಿಗಿದ್ದಾನೆ.

ಲಕ್ಷ್ಮೀ ಚಿತ್ರಮಂದಿರ ಮುಂದೆ ಅಪಘಾತದಲ್ಲಿ ಯುವಕ ಗಾಯಗೊಂಡರು ಸಾವು ಬದುಕಿನ ನಡುವಿನ ಒದ್ದಾಡುತ್ತಿದ್ದರೆ ನಮ್ಮ ಸತ್ಪ್ರಜೆಗಳು ಮಾತ್ರ ವಿಡಿಯೋ ಮಾಡುತ್ತಿದ್ದರು ಸಮಯಕ್ಕೆ ಸರಿಯಾಗಿ ಬಂದ ಪೊಲೀಸರು ಆ ಯುವಕನನ್ನು ಆಸ್ಪತ್ರೆ ಸೇರಿಸಿದ್ದಾರೆ.

**ಆಸ್ಪತ್ರೆಯಲ್ಲಿ ವೈದ್ಯರೇ ಇರಲಿಲ್ಲ;** ಪೊಲೀಸರು ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡ ವಿನಯ್ ನನ್ನ ಆಸ್ಪತ್ರೆ ಗೆ ತಂದಾಗ ಯಾವ ವೈದ್ಯರು ಇಲ್ಲ ಆಸ್ಪತ್ರೆಯಲ್ಲಿ ನರ್ಸಿಂಗ್ ಅಧಿಕಾರಿಗಳು ಕೆಲ ಸಮಯದ ನಂತರ ಪ್ರಾಥಮಿಕ ಚಿಕಿತ್ಸೆ ನೀಡಿ ಮುಂದೆ ಎಲ್ಲಿ ತೋರಿಸುತ್ತಿರೋ ತೆಗೆದುಕೊಂಡು ಹೋಗಿ ಎಂದರು ಎಂದು ಮೃತ ವಿನಯ್ ನ ಚಿಕ್ಕಪ್ಪ ಶಿವಕುಮಾರ್ ಶಹಾಪೂರ ಹೇಳುತ್ತಾರೆ.

**ರಸ್ತೆ ಮಧ್ಯೆ ಸಂಸಾರ;** ಮುದ್ದೇಬಿಹಾಳ ಪಟ್ಟಣದ ಬಹುತೇಕ ಎಲ್ಲಾ ರಸ್ತೆಗಳ ಬದಿ ತಳ್ಳುವ ಗಾಡಿ ಗೂಡಂಗಡಿಗಳು ಅದನ್ನು ತೆಗೆದುಕೊಳ್ಳುವ ಜನರು ಅವರ ಬೈಕ್ ಗಳು ಹಳ್ಳಿಗಳಿಗೆ ಹೋಗುವ ಆಟೋಗಳು ಎಲ್ಲವೂ ರಸ್ತೆ ಯನ್ನು ಆಕ್ರಮಿಸಿಕೊಂಡು ವಾಹನ ಸಂಚಾರಕ್ಕೆ ಅನುಕೂಲ ಎಲ್ಲಿ ಇದರ ಬಿಡಾಡಿ ದನಗಳು ಕಾಟ ಎಲ್ಲವೂ ಸೇರಿ ಇಂತಹ ಅಪಘಾತಗಳ ಸಂಖ್ಯೆ ಹೆಚ್ಚಾಗಲು ಕಾರಣವಾಗಿವೆ ಇದಕ್ಕೆ ಕಡಿವಾಣ ಹಾಕುವ ಪುರಸಭೆ ಅಧಿಕಾರಿಗಳು ಪೊಲೀಸರು ಜಂಟಿಯಾಗಿ ಇದಕ್ಕೆ ಶಾಶ್ವತ ಪರಿಹಾರ ಒದಗಿಸಬೇಕು ಇಲ್ಲಾಂದ್ರೆ ವಿನಯ ನಂತಹ ಅಮಾಯಕರ ಪ್ರಾಣ ಕಳೆದುಕೊಳ್ಳಬೇಕಾಗುತ್ತದೆ

ಹೆಚ್ಚುತ್ತಿರುವ ಜನಸಂಖ್ಯೆ ಮಧ್ಯೆ ವಾಹನಗಳ ಸಂಖ್ಯೆ ಯು ಹೆಚ್ಚಾಗುತ್ತಿದೆ ಇದರ ಮಧ್ಯೆ ಬಾರಿ ವಾಹನಗಳು ಸಾಗುತ್ತಿವೆ ಟ್ರಾಫಿಕ್ ರೋಲ್ಸ್ ಪಾಲಿಸಲು ಅಗತ್ಯ ಕ್ರಮ ಹಾಗೂ ಪಾಲಕರು ಚಿಕ್ಕ ಮಕ್ಕಳ ಕೈಗೆ ಬೈಕ್ ನೀಡಬಾರದು ಮತ್ತು ಅಪಘಾತವಾದಾಗ ವಿಡಿಯೋ ಮಾಡದೆ ಪ್ರಾಣ ಉಳಿಸಲು ಯತ್ನಿಸಬೇಕು ಈ ಬಗ್ಗೆ ಜಾಗೃತಿ ಮೂಡಿಸಬೇಕಿದೆ. ಸೆ 22 ರಂದು ಮೃತ ಯುವಕ ವಿನಯ್ ನೇ ಮನೆಗೆ ಆಸರೆಯಾಗಿದ್ದ ಚಿಕ್ಕಪ್ಪನೊಂದಿಗೆ ಕ್ಷೌರಿಕ ವೃತ್ತಿ ಮಾಡುತ್ತಿದ್ದ ವಿನಯ ಅಪಘಾತದಲ್ಲಿ ದುರ್ಮರಣಕ್ಕೆ ಈಡಾಗಿದ್ದಾನೆ ಇತನ ತಂದೆ ತಿಪ್ಪಣ್ಣಗೆ ಕಿಡ್ನಿ ವೈಫಲ್ಯವಾಗಿವೆ ತಾಯಿ ಲಕ್ಷ್ಮೀ ಅವರಿವರ ಮನೆ ಮುಸರಿ ತಿಕ್ಕಿ ಗಂಡನ ಆರೈಕೆ ಮಾಡುತ್ತಿದ್ದಳು ಕೈಗೆ ಬಂದ ಮಗನನ್ನು ಕಳೆದುಕೊಂಡ ಆ ಪರಿವಾರಕ್ಕೆ ಆಕಾಶವೇ ಕಳಚಿ ತಲೆಯ ಮೇಲೆ ಬಿದ್ದಂತೆ ಆಗಿದೆ ಈ ಕುಟುಂಬಕ್ಕೆ ನ್ಯಾಯ ಸಿಗಬೇಕಿದೆ. ಈ ಕುರಿತು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

### ವೈದ್ಯರ ಕೊರತೆ

ನಮ್ಮ ತಾಲ್ಲೂಕ ಸಮುದಾಯದ ಸರಕಾರಿ ಆಸ್ಪತ್ರೆ ಹೆಸರಿಗೆ ಮಾತ್ರ ತಾಲ್ಲೂಕು ಆಸ್ಪತ್ರೆಯಾಗಿದೆಯಾ? ಯಾವುದೇ ತುರ್ತುಸ್ಥಿತಿ ನಿರ್ವಹಣೆ ಇಲ್ಲಿ ಇಲ್ಲ ತುರ್ತು ಚಿಕಿತ್ಸೆ ನೀಡಲಾಗದೆ ಬಾಗಲಕೋಟೆ ವಿಜಯಪುರಕ್ಕೆ ಕಳಿಸುವುದೆ ಸಾಧನೆಯೇ? ಯಾವಾಗ ಈ ಆಸ್ಪತ್ರೆ ಮೇಲ್ದರ್ಜೆಗೆ ಏರುತ್ತದೆ? ಅಪಘಾತದಲ್ಲಿ ಗಾಯಗೊಂಡವರಿಗೆ ಚಿಕಿತ್ಸೆ ನೀಡಲು ವೈದ್ಯರ ಮತ್ತು ಪರಿಕರಣಗಳ ಸಮಸ್ಯೆ ನಿವಾರಣೆ ಎಂದು? ಇನ್ನಷ್ಟು ಬಲಿ ತೆಗೆದುಕೊಂಡ ಮೇಲೆ ಎಚ್ಚರಾಗುತ್ತಾರೆ ನಮ್ಮ ಜನಪ್ರತಿನಿಧಿಗಳು.

# ರಾಜ್ಯದಲ್ಲಿ ಮುಸ್ಲಿಂ ಸರ್ಕಾರವಿದೆ: ಸೂಲಿಬೆಲೆ

• **ಉದಯವಾಹಿನಿ ಕಲಬುರಗಿ**

ವಿನಾಃಕಾರಣ ತಪ್ಪು ತಿಳಿವಳಿಕೆಯಿಂದ ಆಪಾದನೆಗಳನ್ನು ಮಾಡುವುದು ಸರಿಯಲ್ಲ. ಕಾಂಗ್ರೆಸ್ ನಾಯಕರು ಸಂಘ ಪರವಾರದಲ್ಲಿ ತರಬೇತಿ ಪಡೆದುಕೊಳ್ಳಲಿ. ಆಗ ಆರ್‌ಎಸ್‌ಎಸ್ ಏನು ಹೇಳುತ್ತದೆ ಗೊತ್ತಾಗುತ್ತದೆ ಎಂದು ಪ್ರಚಾರಕ ಚಕ್ರವರ್ತಿ ಸೂಲಿಬೆಲೆ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಗಲಾದರೂ ಕಾಂಗ್ರೆಸ್ ನಾಯಕರಿಗೆ ಒಳ್ಳೆಯ ಸಂಸ್ಕೃತಿ ಬರುತ್ತದೆ. ನಾಲ್ಕು ದಿನ ಶಾಖೆಗೂ ಬರಲಿ, ಅಲ್ಲೂ ಒಳ್ಳೆಯ ಭಾಷೆ, ತಿಳಿವು ಬರುತ್ತದೆ. ದೂರ ನಿಂತು ಏನೇನೋ ತಿಳಿದುಕೊಂಡು ಮಾತನಾಡುವುದರಲ್ಲಿ ಯಾವ ಅರ್ಥವೂ ಇಲ್ಲ. ಒಂದು ವಾರ ಬರಲಿ ಎಂದು ಆಹ್ವಾನ ನೀಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್, ಸರದಾರ ವಲ್ಲಭಭಾಯಿ ಪಟೇಲ್, ಮಹಾತ್ಮಾ ಗಾಂಧಿ ಅವರೆಲ್ಲ ಸಂಘ ಪರಿವಾರದ ಕೆಲಸವನ್ನು ಶ್ಲಾಘಿಸಿದ್ದಾರೆ. ಆದರೆ, ಇಂದಿನ ಕಾಂಗ್ರೆಸ್‌ನವರಿಗೆ ಸಂಘ ಪರಿವಾರ ಎಂದರೆ ಆಗಿ ಬರುತ್ತಿಲ್ಲ ಎಂದು ಟಾಂಗ್ ನೀಡಿದರು. ರಾಜ್ಯದಲ್ಲಿ ಮುಸ್ಲಿಂ ಸರಕಾರವಿದೆ. ಕಾಂಗ್ರೆಸ್ ಹಿಂದೂ ವಿರೋಧಿ ಸರಕಾರ. ಅದನ್ನು ಖುದ್ದು ಸಿಎಂ ಸಿದ್ದರಾಮಯ್ಯ ಹಾಗೂ ಅವರ ಸಚಿವರೇ ಹೇಳಿಕೊಂಡು ಓಡಾಡಿದ್ದಾರಲ್ಲ ಎಂದು ಕಿಚಾಯಿಸಿದ ಅವರು, ಶಾಖೆಗಳಿಗೆ ಬೆಳಗ್ಗೆ ಬರುವುದರಿಂದ ನಿಮ್ಮ ಆಲೋಚನೆಗಳು ಬದಲಾಗುತ್ತವೆ. ಆಗೊಂದು ಹಿಂದೂ ರಾಷ್ಟ್ರದ ಕಲ್ಪನೆ ನಿಮ್ಮಲ್ಲೂ ಮೊಳಕೆ ಒಡೆಯಲಿ ಎಂದರು.



ನಿಮ್ಮ ಆರೋಪದಂತೆ ರಾಜಭವನ ಪೊಲೀಸ್ ಠಾಣೆಯಾದಂತೆ ಆಗಿದೆಯೋ ಇಲ್ಲವೋ ಗೊತ್ತಿಲ್ಲ. ಆದರೆ, ನೀವು ಮಾತ್ರ ರಾಜ್ಯವನ್ನು ಮುಸ್ಲಿಂ ರಾಜ್ಯವನ್ನಾಗಿ ಮಾಡಿದ್ದೀರಿ ಎಂದು ಆರೋಪ ಮಾಡಿದರು.

ನೀವು ಮುಸ್ಲಿಂರ ಸೆರಗಿನಲ್ಲಿ ಕುಳಿತುಕೊಂಡು ಮಾತನಾಡಿದರೆ ಹೇಗೆ? ಅವರ ಬೆಂಬಲದಿಂದ ಅಲ್ಲವೇ ರಾಜ್ಯದಲ್ಲಿ ಹಲವು ಘಟನೆಗಳು ನಡೆಯುತ್ತಿರುವುದು.

ಅವರು ವಿರುದ್ಧ ಕಠಿಣ ಕ್ರಮ ಕೈಗೊಳ್ಳದೆ ಇರುವುದಕ್ಕೆ ಅಲ್ವಾ? ಡಿಜೆ ಹಳ್ಳಿ, ಕೆಜಿ ಹಳ್ಳಿ ಹಾಗೂ ನೆಲಮಂಗಲ, ಗಣೇಶನಿಗೆ ಕಲ್ಲು ಕೊನೆಗೆ ಸರಕಾರ ಗಣೇಶನನ್ನು ವ್ಯಾನಿನಲ್ಲಿ ಕೊಂಡೊಯ್ಯಲಿಲ್ಲವೇ ಎಂದು ಪ್ರಶ್ನಿಸಿದರು.

# ಹುಬ್ಬಳ್ಳಿಯಲ್ಲಿ ಗುಂಡಿನ ಸದ್ದು

(ಮಿನಿ ನ್ಯೂಸ್)

• **ಉದಯವಾಹಿನಿ ಹುಬ್ಬಳ್ಳಿ**

ಹುಬ್ಬಳ್ಳಿ ಮತ್ತು ಧಾರವಾಡ ಕಮಿಷನರೇಟ್ ವ್ಯಾಪ್ತಿಯಲ್ಲಿ ಸುಮಾರು 17 ಕಳ್ಳತನ ಕೇಸ್ ನಲ್ಲಿ ಭಾಗಿಯಾಗಿದ್ದ ಆರೋಪಿಯ ಮೇಲೆ ಹುಬ್ಬಳ್ಳಿ ತಾಲ್ಲೂಕಿನ ಬೆಂಡಿಗೇರಿ ಠಾಣೆಯ ಎಸ್‌ಐ ಆರೋಪಿ ಕಾಲಿಗೆ ಗುಂಡು ಹಾರಿಸಿರುವ ಘಟನೆ ನಡೆದಿದೆ. ಹೌದು ಆರೋಪಿ ವಿನೋದ್ ಕಾಲಿಗೆ ಗುಂಡು ಹಾರಿಸಲಾಗಿದ್ದು, ಹುಬ್ಬಳ್ಳಿಯ ಬೆಂಡಿಗೇರಿ ಠಾಣೆ ಪೊಲೀಸರಿಂದ ಇದೀಗ ಗುಂಡಿನ ದಾಳಿ ನಡೆದಿದೆ. ತಾರಿಹಾಳ ಬಳಿ ಆರೋಪಿ ವಿನೋದ್ ಮೇಲೆ ಪೊಲೀಸರು ಗುಂಡಿನ ದಾಳಿ ಮಾಡಿದ್ದಾರೆ. ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ತಾರಿಹಾಳ ಗ್ರಾಮದಲ್ಲಿ ಈ ಒಂದು ಘಟನೆ ನಡೆದಿದೆ.

ಕಳ್ಳತನ ಪ್ರಕರಣದಲ್ಲಿ ಪೊಲೀಸರು ನಿನ್ನೆ ವಿನೋದನನ್ನು ಬಂಧಿಸಿದ್ದರು. ತನ್ನ ಸಹಚರನ್ನು ತೋರಿಸುತ್ತೇನೆ ಎಂದು ವಿನೋದ್ ಪೊಲೀಸರನ್ನು ಕರೆದುಕೊಂಡು ಹೋಗಿದ್ದಾನೆ. ಈ ವೇಳೆ ಪೊಲೀಸರ ಮೇಲೆ ವಿನೋದ್ ಹಲ್ಲೆ ನಡೆಸಿ ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದಾನೆ. ಬೆಂಡಿಗೇರಿ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಜಯಶ್ರೀ ಛಲವಾದಿ, ಕಾನ್ಸ್‌ಟೇಬಲ್ ರಮೇಶ್ ಹಿತ್ತಲಮನಿ ಮೇಲೆ ಹಲ್ಲೆಗೆ ಯತ್ನಿಸಿದ್ದಾನೆ. ಆತ್ಮ ರಕ್ಷಣೆಗಾಗಿ ಪಿಐ ಜಯಶ್ರೀ ವಿನೋದ ಕಾಲಿಗೆ ಗುಂಡು ಹಾರಿಸಿದ್ದಾರೆ.

# ಗ್ರಾಮಸ್ಥರಿಂದ ರಸ್ತೆಯ ಗುಂಡಿ ಮುಚ್ಚುವ ಮಹತ್ಕಾರ್ಯ: ಶಿವನ್ ಗೌಡ ಮೆಚ್ಚುಗೆ

• **ಉದಯವಾಹಿನಿ ತೀರ್ಥಹಳ್ಳಿ**

ತಾಲ್ಲೂಕಿನ ಪ್ರಖ್ಯಾತ ಧಾರ್ಮಿಕ ಕ್ಷೇತ್ರವಾದ, ಎರಡನೇ ತಿರುಪತಿ ಎಂದೇ ಪ್ರಖ್ಯಾತಿ ಪಡೆದ ಅರುಣಗಿರಿಯ ಶ್ರೀ ಲಕ್ಷ್ಮೀ ವೆಂಕಟರಮಣ ದೇವಸ್ಥಾನಕ್ಕೆ ಗೋಪಿನಾಥ ಹಳ್ಳದ ಸೇತುವೆಯಿಂದ ಕುಣಿಗದ್ದೆಯವರೆಗೆ 1 ಕಿಲೋ ಮೀಟರ್ ದೂರದ ಡಾಂಬರ್ ರಸ್ತೆ ಭಾರಿ ಮಳೆಯಿಂದಾಗಿ ಹೊಂಡ ಗುಂಡಿಗಳಾಗಿದ್ದವು. ಅರುಣಗಿರಿ ಕುಣಿಗದ್ದೆ ದಾಸನಗದ್ದೆಯ ಗ್ರಾಮಸ್ಥರು ಮತ್ತು ವಿನಾಯಕ ಸೇವಾ ಸಮಿತಿಯವರೆಲ್ಲರೂ ಸೇರಿ ತಾವೇ ಹೊಂಡ ಮುಚ್ಚುವ ಮಹತ್ಕಾರ್ಯಕ್ಕೆ ಕೈ ಜೋಡಿಸಿ ಹೊಂಡ ಗುಂಡಿ ಮುಚ್ಚುವ ಕಾರ್ಯ ನೆರವೇರಿಸಿದರು.

ಈ ವೇಳೆ ಇದೇ ರಸ್ತೆಯಲ್ಲಿ ಬರುತ್ತಿದ್ದ ತೀರ್ಥಹಳ್ಳಿಯ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಶಿವನ್ ಗೌಡರವರು ಗ್ರಾಮಸ್ಥರ ಸಮಾಜಮುಖಿ ಕಾರ್ಯಕ್ರಮದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ ಮತದಾನದ ವೇಳೆ ಚುನಾವಣೆ ಸಮಯದಲ್ಲಿ ರಸ್ತೆ ಆಗಿಲ್ಲ ಎಂದು ಬಹಿಷ್ಕಾರ ಹಾಕುವ ಬದಲು ಹೀಗೆ ತಮ್ಮ ಊರಿನ ರಸ್ತೆಗಳನ್ನು ಹಾಗೂ ಅಕ್ಕ ಪಕ್ಕದ ಊರಿನ ಸ್ವಚ್ಛತೆಯನ್ನು ನಾವೇ ಸರಿ ಪಡಿಸಿಕೊಂಡಿದ್ದರೆ ನಮ್ಮೆಲ್ಲರ ಗ್ರಾಮ, ಊರು ಸ್ವಚ್ಛಂದವಾಗಿರಲಿದೆ. ನಿಮ್ಮೆಲ್ಲರ ಸಮಾಜಮುಖಿ ಕೆಲಸ ಮುಂದುವರೆಸಿ ಎಂದು ಹಾರೈಸಿದರು.

# ತಲವಾರ್‌ನಿಂದ ಹೊಡೆದಾಟ

• **ಉದಯವಾಹಿನಿ ಬೆಳಗಾವಿ**

ನಗರದಲ್ಲಿ ಈದ್ ಮಿಲಾದ್ ಮೆರವಣಿಗೆ ಮುಗಿಸಿ ವಾಪಸ್ ಹೋಗುತ್ತಿದ್ದಾಗ ಎರಡು ಗುಂಪುಗಳ ಯುವಕರು ತಲವಾರ್ ದಿಂದ ಹೊಡೆದಾಡಿಕೊಂಡಿದ್ದು, ಮೂವರು ಗಾಯಗೊಂಡ ಘಟನೆ ಇಲ್ಲಿಯ ರುಕ್ಮಿಣಿ ನಗರದಲ್ಲಿ ರಾತ್ರಿ ನಡೆದಿದೆ.

ರುಕ್ಮಿಣಿ ನಗರ ಹಾಗೂ ಉಜ್ವಲ್ ನಗರದ ಯುವಕರ ಮಧ್ಯೆ ಈ ಗಲಾಟೆ ಆಗಿದ್ದು, ಮೆರವಣಿಗೆ ಮುಗಿಸಿಕೊಂಡು ಹೋಗುವಾಗ ಒಬ್ಬರಿಗೊಬ್ಬರು ಸಿಟ್ಟಿನಿಂದ ನೋಡಿದ್ದಕ್ಕೆ ಹೊಡೆದಾಡಿಕೊಂಡಿದ್ದಾರೆ.

ತಲ್ವಾರ್ ಹಾಗೂ ಚಾಕುವಿನಿಂದ ಘರ್ಷಣೆ ಹಾಡಿದಿತ್ತು ಘಟನೆಯಲ್ಲಿ ಹೊಟ್ಟೆ ಹಾಗೂ ಕತ್ತಿನ ಭಾಗಕ್ಕೆ ಗಾಯವಾಗಿದೆ.

ಗಾಯಗೊಂಡ ಮೂವರು ಯುವಕರನ್ನು ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಆರೋಪಿಗಳ ಪತ್ತೆಗೆ ಪೊಲೀಸರು ಜಾಲ ಬೀಸಿದ್ದಾರೆ. ಮಾಳಮಾರುತಿ ಪೊಲೀಸ್ ಠಾಣೆಯಲ್ಲಿ ಈ ಘಟನೆ ನಡೆದಿದೆ.

# ಮಿಲಾದ್ ರ್‍ಯಾಲಿ: ಸಾವಿರಾರು ಜನ ಭಾಗಿ

• **ಉದಯವಾಹಿನಿ ನಾಪೋಕ್ಲು**

ವಿವಿಧ ಧರ್ಮಗಳ ಹಬ್ಬಗಳ ಆಚರಣೆಯನ್ನು ಸಂಭ್ರಮದಿಂದ ಕೈಗೊಳ್ಳುವುದರ ಮೂಲಕ ಸಮಾಜದಲ್ಲಿ ಶಾಂತಿ ನೆಲೆಸುವಂತೆ ಮಾಡಲಾಗಿದೆ ಎಂದು ಶಾಸಕ ಎಎಸ್.ಪೊನ್ನಣ್ಣ ಹೇಳಿದರು.

ನಾಪೋಕ್ಲು ಟೌನ್ ಮುಹಿಯುದ್ದೀನ್ ಸುನಿ ಜುಮಾ ಮಸೀದಿ ವತಿಯಿಂದ 3 ದಿನಗಳ ಕಾಲ ನಡೆದ ಬೃಹತ್ ಮಿಲಾದ್ ಸಮಾವೇಶ 'ಮದದೆ ಮದೀನಾ' ಮಿಲಾದ್ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. 'ಎಲ್ಲರೂ ತಮ್ಮ ತಮ್ಮ ಧಾರ್ಮಿಕ ನಂಬಿಕೆಗಳನ್ನು ಪಾಲನೆ ಮಾಡುತ್ತಿದ್ದಾರೆ. ಜಾತ್ಯತೀತ ಸಿದ್ಧಾಂತದ ಆಧಾರದಲ್ಲಿ ರಾಜ್ಯ ಸರ್ಕಾರ ಕೆಲಸ ನಿರ್ವಹಿಸುತ್ತಿದೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಧರ್ಮ ನಿರಪೇಕ್ಷ ಆಡಳಿತಕ್ಕೆ ಬದ್ಧವಾಗಿದೆ. ರಾಜ್ಯಾದ್ಯಂತ ಶಾಂತಿ ನೆಲೆಸಿದೆ. ಉತ್ತಮ ಆಡಳಿತದ ಮೂಲಕ ಸಮಾನತೆಯ ತತ್ವಕ್ಕೆ ಬದ್ಧವಾಗಿದೆ' ಎಂದರು. ಕೆಲವು ಕಿಡಿಗೇಡಿಗಳ ಕೃತ್ಯದಿಂದ ಸಮಾಜಕ್ಕೆ ಹಾನಿಯಾಗುತ್ತಿದೆ. ರಾಜಕೀಯ ಪ್ರೇರಿತ ಕೆಲವು ಘಟನೆಗಳು ಅಲ್ಲಲ್ಲಿ ನಡೆಯುತ್ತಿದೆ. ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಶಿಕ್ಷಿಸಲಾಗುವುದು ಎಂದರು. ಸಮಾರೋಪ ಸಮಾರಂಭಕ್ಕೂ ಮುನ್ನ ಬೃಹತ್ ಮೆರವಣಿಗೆ ನಡೆಯಿತು. ಸಾವಿರಾರು ಸಂಖ್ಯೆ ಯಲ್ಲಿ ಜನರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ದಫ್ ಕಾರ್ಯಕ್ರಮ ಮೆರವಣಿಗೆಯಲ್ಲಿ ಗಮನ ಸೆಳೆಯಿತು. ನಾಪೋಕ್ಲು ಟೌನ್ ಮುಹಿಯುದ್ದೀನ್ ಸುನಿ ಜುಮಾ ಮಸೀದಿ ವತಿಯಿಂದ 3 ದಿನಗಳ ಕಾಲ ನಡೆದ ಬೃಹತ್ ಮಿಲಾದ್ ಸಮಾವೇಶ 'ಮದದೆ ಮದೀನಾ' ಮಿಲಾದ್ ಕಾರ್ಯಕ್ರಮದ ಅಂಗವಾಗಿ ಪಟ್ಟಣದಲ್ಲಿ ಬೃಹತ್ ಮಿಲಾದ್ ರ್‍ಯಾಲಿ ನಡೆಯಿತು.


ಉದಯವಾಹಿನಿ ಚಿತ್ರ

**ಕಿಡಿಗೇಡಿಗಳ ಕೃತ್ಯದಿಂದ ಸಮಾಜಕ್ಕೆ ಹಾನಿ**

# ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆಯಿಂದ ನೀಟ್, ಸಿಇಟಿ, ಇಂಗ್ಲೀಷ್ ಪರೀಕ್ಷೆ ತರಬೇತಿ

• **ಉದಯವಾಹಿನಿ ಬಳ್ಳಾರಿ**

ಜಿಲ್ಲಾ ಆಡಳಿತ ಬಳ್ಳಾರಿ, ಜಿಲ್ಲಾ ಪಂಚಾಯತ್ ಬಳ್ಳಾರಿ ಶಾಲಾ ಶಿಕ್ಷಣ ಇಲಾಖೆ ( ಪದವಿ ಪೂರ್ವ ) ಬಳ್ಳಾರಿ ಇವರ ಸಂಯುಕ್ತ ಆಶ್ರಯದಲ್ಲಿ ಸಮೃದ್ಧಿ ಯೋಜನೆಯ ಅಡಿಯಲ್ಲಿ ನೀಟ್, ಸಿಇಟಿ, ಇಂಗ್ಲೀಷ್ ಪರೀಕ್ಷೆಗಾಗಿ ತರಬೇತಿ ಕಾರ್ಯಕ್ರಮದ ಉದ್ಘಾಟನೆಯನ್ನು ನಡೆಸಲಾಯಿತು.

ಕಾರ್ಯಕ್ರಮದ ಪ್ರಾರಂಭದಲ್ಲಿ ಪ್ರಾರ್ಥನಾ ಗೀತೆಯನ್ನು ಅರ್ಥಶಾಸ್ತ್ರದ ಉಪನ್ಯಾಸಕರಾದ ಟಿ.ತಿಮ್ಮಪ್ಪರವರು ನೆರವೇರಿಸಿದರು.


ಭೌತಶಾಸ್ತ್ರದ ಉಪನ್ಯಾಸಕರಾದ ಬಿಪಿ ಕಲ್ಲಪ್ಪರವರು ಗಣ್ಯಮಾನ್ಯರನ್ನು ಸ್ವಾಗತಿಸಿದರು. ಪದವಿಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಯುತ ಟಿ ಪಾಲಾಕ್ಷರವರು ಪ್ರಾಸ್ತಾವಿಕ ನುಡಿಯನ್ನು ನುಡಿದರು. ಕಾರ್ಯಕ್ರಮದ ಉದ್ಘಾಟನೆಯನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀಯುತ ರಾಹುಲ್ ಶರಣಪ್ಪ ಸಂಕನೂರ್ ಉದ್ಘಾಟಿಸಿ ತಮ್ಮ ಉದ್ಘಾಟನಾ ನುಡಿಯಲ್ಲಿ ವಿದ್ಯಾರ್ಥಿಗಳು ಸತತ ಪರಿಶ್ರಮ ವಹಿಸಿ ಅಭ್ಯಾಸ ಮಾಡಿದರೆ ಯಾವುದು ಅಸಾಧ್ಯವಲ್ಲ ಇದು ನಿಮಗೆ ಸುವರ್ಣ ಅವಕಾಶ ಈ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಿ ವಿದ್ಯಾರ್ಥಿಗಳು ಜೀವನದ ಮೊದಲ 24 ವರ್ಷಗಳನ್ನು ಸರಿಯಾದ ರೀತಿಯಲ್ಲಿ ನಡೆದರೆ ಮುಂದಿನ ನಿಮ್ಮ ಜೀವನ ಉತ್ತಮವಾಗಿರುತ್ತದೆ ಹೆಚ್ಚು ಹೆಚ್ಚು ಮಕ್ಕಳು ನೀಟ್, ಸಿಇಟಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಸಮಾಜಕ್ಕೆ ವಿದ್ಯಾರ್ಥಿಗಳು ದಾರಿದೀಪವಾಗಬೇಕು ನಿಮ್ಮ ಬೆಂಬಲಕ್ಕೆ ಸದಾ ನಾನಿರುತ್ತೇನೆ ಎಂದು ತಮ್ಮ ಉದ್ಘಾಟನಾ ನುಡಿಯಲ್ಲಿ ನುಡಿದರು.

ಬಳ್ಳಾರಿ ಪ್ರಾಚಾರ್ಯ ಸಂಘದ ಅಧ್ಯಕ್ಷರಾದ ಎಮ್ ಶ್ರೀಶೈಲ ಉಪಸ್ಥಿತರಿದ್ದರು, ವಿವಿಧ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಉಪಸ್ಥಿತರಿದ್ದರು. ಸ್ಥಳೀಯ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಭಾಗಿಯಾಗಿದ್ದರು. ಭೌತಶಾಸ್ತ್ರದ ಉಪನ್ಯಾಸಕರಾದ ಅಕ್ಕಿ ಮಲ್ಲಿಕಾರ್ಜುನ ರವರು ಕಾರ್ಯಕ್ರಮವನ್ನು ನಿರೂಪಿಸಿದರು, ಆಂಗ್ಲ ಭಾಷೆ ಉಪನ್ಯಾಸಕರಾದ ಕೆ ಪಿ ಮಂಜುನಾಥ ರೆಡ್ಡಿ ಸರ್ ರವರು ಕೊನೆಗೆ ವಂದಿಸಿದರು.


ಉದಯವಾಹಿನಿ ಚಿತ್ರ

# ಧಾರ್ಮಿಕ ಕೇಂದ್ರಗಳು ಮುಜರಾಯಿ ಇಲಾಖೆಯಿಂದ ಮುಕ್ತವಾಗಬೇಕು

• **ಉದಯವಾಹಿನಿ ರಾಯಚೂರು**



ಭಕ್ತರ ಶ್ರದ್ಧ ಕೇಂದ್ರವಾದ ತಿರುಪತಿಯಲ್ಲಿ ಪ್ರಸಾದದಲ್ಲಿ ಕಲಬೆರಕೆಯಾಗಿರುವುದು ಅತ್ಯಂತ ಹೇಯ ಕೃತ್ಯವಾಗಿದೆ. ಈ ಘಟನೆಯ ಕುರಿತು ಇನ್ನೂ ಹೆಚ್ಚಿನ ತನಿಖೆಯಾಗಿ ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮಂತ್ರಾಲಯ ರಾಘವೇಂದ್ರಸ್ವಾಮಿ ಮಠದ ಶ್ರೀ ಸುಬುಧೇಂದ್ರ ತೀರ್ಥರು ಹೇಳಿದರು.

ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಗೋವಿಂದ ಗಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ದೇವಸ್ಥಾನಗಳು, ಮಠಮಾನ್ಯಗಳು ಧಾರ್ಮಿಕ ಶ್ರದ್ಧಾ ಕೇಂದ್ರ ಗಳು ಮುಜರಾಯಿ ಇಲಾಖೆಯಿಂದ ಮುಕ್ತವಾಗಬೇಕು.

ಸ್ವಾತಂತ್ರ್ಯ ಪೂರ್ವದಲ್ಲಿ ಆಯಾ ಊರಿನ ದೇವಸ್ಥಾನಗಳು ಮಠಮಾನ್ಯಗಳು ಆಯಾ ಭಕ್ತರು, ಶಿಷ್ಯರು ಹಾಗೂ ಮುಖಂಡರ ನೇತೃತ್ವದಲ್ಲಿ ನಿರ್ವಹಣೆ ಮತ್ತು ವ್ಯವಸ್ಥೆಗಳು ನಡೆಯುತ್ತಿದ್ದವು ಆದರೆ ಲೌಕಿಕ ಕಾನೂನುಗಳಿಂದ ಸರ್ಕಾರದ ವಶಕ್ಕೆ ಸೇರಿಕೊಂಡು ತೊಂದರೆಗಳಾಗುತ್ತಿವೆ ಎಂದರು.

ತಿರುಪತಿ ದೇವಸ್ಥಾನದ ಪ್ರಸಾದದಲ್ಲಿ ಕಲಬೆರಕೆಯಾಗಿರುವ ವಸ್ತುಗಳ ಬಗ್ಗೆ ಅಲ್ಲಿನ ಅಧಿಕಾರಿಗಳು, ವಸ್ತುಗಳನ್ನು ಖರೀದಿ ಸುವವರು ಪರಿಶೀಲಿಸಬೇಕು. ಪ್ರಸಾದದಲ್ಲಿ ಕಲಬೆರಕೆಯಾಗಿದ್ದರೆ ಶುದ್ಧಿಯಾಗಬೇಕಿದೆ.

> ಧಾರ್ಮಿಕ ಕ್ಷೇತ್ರಗಳಲ್ಲಿ ಈ ಘಟನೆಗಳು ನಡೆಯಬಾರದು. ಇದು ಖಂಡನೀಯ. ವಿವಿಧ ಮಠಗಳ ಮಠಾಧೀಶರ ಚರ್ಚೆಗಳು ನಡೆಯುತ್ತವೆ ಅದರಲ್ಲಿ ಭಾಗವಹಿಸುವ ಜತೆಗೆ ಶುದ್ಧಿಕರಣದ ಸಂದರ್ಭದಲ್ಲಿ ಇರುವುದಾಗಿ ತಿಳಿಸಿದರು.
> -ಶ್ರೀ ಸುಬುಧೇಂದ್ರ ತೀರ್ಥರು

ತಿರುಪತಿಯ ಪ್ರಸಾದದಲ್ಲಿ ಕಲಬೆರಕೆಯಾದ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿ ಯಾರು ಕಾರಣರು ಮತ್ತು ಯಾವಾಗಿನಿಂದ ಈ ಕಲಬೆರಕೆಯಾಗಿದೆ ಎಂಬುವುದರ ಬಗ್ಗೆ ತನಿಖೆಯ ನಡೆಸಬೇಕು ಎಂದು ಒತ್ತಾಯಿಸಿದರು. ರಾಘವೇಂದ್ರ ಸ್ವಾಮಿ ಮಠದ ರಾಯರ ಆರಾಧನಾ ಮಹೋತ್ಸವ ಸಂದರ್ಭದಲ್ಲಿ ತಿರುಪತಿಯಿಂದ ತರುವ ಶೇಷವಸ್ತ್ರವನ್ನೇ ಪ್ರಸಾದವನ್ನಾಗಿ ಸ್ವೀಕರಿಸಲಾಗುತ್ತಿತ್ತು. ಶೇಷವಸ್ತ್ರವನ್ನೇ ರಾಯರಿಗೆ ಪ್ರಸಾದ ರೂಪದಲ್ಲಿ ಸಮರ್ಪಣೆ ಮಾಡಲಾಗುತ್ತದೆ. ಮಠದಲ್ಲಿ ತಯಾರಿಸುವ ಪರಿಮಳ ಪ್ರಸಾದಕ್ಕೆ ವಿಜಯಾ ಡೇರಿಯ ತುಪ್ಪವನ್ನು ಬಳಸಲಾಗುತ್ತದೆ. ಆಹಾರ ಗುಣಮಟ್ಟದ ಪರೀಕ್ಷೆಯ ವರದಿ ಹಾಗೂ ಪ್ರಮಾಣಪತ್ರ ಪಡೆದುಕೊಳ್ಳಲಾಗಿದೆ ಎಂದು ಸುಬುಧೇಂದ್ರ ತೀರ್ಥರು ತಿಳಿಸಿದರು.

# ತಾಲ್ಲೂಕಿನ ಹಲವೇಡೆ ಅಕ್ರಮ ಮದ್ಯ ಮಾರಾಟ ದಂಧೆ

## • ಆರಂಭದಲ್ಲಿ ಮಾಮೂಲಿ ಹೆಚ್ಚಳಕ್ಕೆ ಅಕ್ರಮ ಮದ್ಯ ಬಂದ್ ಮಾಡಿಸಿದ್ರಾ...? ಸಿಪಿಐ ರಾಹುಲ ನಾಯಕ...!

**ಉದಯವಾಹಿನಿ ವಿಶೇಷ ವರದಿ**

• **ಶಿವರಾಜಕುಮಾರ ವಾಲಿಕಾರ**

• **ಉದಯವಾಹಿನಿ ಇಂಡಿ**

ತಾಲ್ಲೂಕಿನ ಹಲವೇಡೆ ಅಕ್ರಮ ಮದ್ಯ ಮಾರಾಟ ದಂಧೆ ರಾಜಾರೋಷವಾಗಿ ನಡೆ ಯುತ್ತಿದ್ದರೂ ಅಬಕಾರಿ ಇಲಾಖೆ ನಿದ್ರೆಗೆ ಜಾರಿದೆ. ತಾಲ್ಲೂಕಿನ ಪ್ರತಿ ಹಳ್ಳಿ ಹಳ್ಳಿಗಳಲ್ಲೂ ದಿನದ 24 ಗಂಟೆ ಯೂ ಅಕ್ರಮ ಮದ್ಯ ಸಿಗುತ್ತಿದ್ದು ಮಹಿಳೆಯರು ಇಲಾಖೆ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.ಅಬಕಾರಿ ಇಲಾಖೆ ನೀಡಿರುವ ನಿಯಮಗಳನ್ನು ಇಲ್ಲಿನ ಕೆಲ ಬಾರ್ ಗಳು ಗಾಳಿಗೆ ತೂರಿದ್ದು ಅಕ್ಕಪಕ್ಕದ ಅಂಗಡಿ ಮತ್ತು ಮನೆಗಳಿಗೂ ತುಂಬಾ ತೊಂದರೆಯಾಗುತ್ತಿದೆ.

ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲಿ ನಾಯಿ ಕೊಡೆಯಂತೆ ತಲೆ ಎತ್ತಿರುವ ಅಕ್ರಮ ಮದ್ಯ ಅಂಗಡಿಗಳಿಗೆ ಮದ್ಯ ಸರಬರಾಜು ಆಗುತ್ತಿದ್ದು ಅಬಕಾರಿ ಅಧಿಕಾರಿಗಳು ಮಾತ್ರ ಯಾವುದೇ ಕ್ರಮ ಕೈಗೊಳ್ಳದೇ ಮೌನಕ್ಕೆ ಜಾರಿದ್ದಾರೆ.

**ಸಿಬ್ಬಂದಿಗಳ ಕೊರತೆ:** ಸಿಬ್ಬಂದಿಗಳನ್ನ ಆರಂಭದಲ್ಲಿ ಮೇಲಿಂದ ಕರಿಸಿದ್ರ ಸಿಬ್ಬಂದಿಗಳಿಗೆ ಮೊದಲು ಮದ್ಯ ಬಂದ್ ಮಾಡಿಸಲು ಎಲ್ಲಿಂದ ಬಂದರು ನಿಮಗೆ ಸಿಬ್ಬಂದಿಗಳು. ಸಂಘಟನಾಕಾರಾರು ಏನಾದರೂ ಕೇಳಿದರೆ ಸಿಬ್ಬಂದಿಗಳ ಕೊರತೆ ಅಂತ ನಿಮ್ಮ ಬಾಯಿಂದ ನೀವೇ ಹೇಳುತ್ತೀರಿ ಸಿಪಿಐ ರಾಹುಲ ನಾಯಕ ಅವರೇ ಮೊದಲು ಮದ್ಯ ಕಡಿವಾಣಕ್ಕೆ ಇಲ್ಲದೆ ಸಿಬ್ಬಂದಿ ಕೊರತೆ ಬರ್ತಾ ಬರ್ತಾ ಹೇಗೆ ಬಂತು...?ಇದನೆಲ್ಲ ನೋಡಿದರೆ ನಿಮ್ಮ ಮಾಮೂಲಿಗಾಗಿ ನೀವೂ ಸತತವಾಗಿ 3-4 ತಿಂಗಳು ಮದ್ಯ ಬಂದ್ ಮಾಡಿಸಿದ್ರ. ಬರ್ತಾ ಬರ್ತಾ ಅದೇ ರಾಗ ಅದೇ ಹಾಡು ಅನ್ನುವ ರೀತಿ ಮತ್ತೆ ಅದೇ ಸ್ಥಾನಕ್ಕೆ ಬಂದು ನಿಂತ ಮದ್ಯ ಬಂದ್ ಮಾಡಿಸುವ ಕಾರ್ಯ.ಎಂದು ಇಂಡಿ ತಾಲೂಕಿನ ಸಾರ್ವಜನಿಕರು ಆರೋಪಿಸಿದ್ದಾರೆ.

**ಕಾಟಾಚಾರಕ್ಕೆ ದಾಳಿ:** ಇಂಡಿ ತಾಲ್ಲೂಕಿನದ್ಯಂತ ನಾಯಿ ಕೊಡೆಗಳಂತೆ ತಲೆ ಎತ್ತಿರುವ ಅಕ್ರಮ ಮದ್ಯ ಮಾರಾಟ ಖರೀದಿಗೆ ಮುಗಿ ಬೀಳುವುದರಿಂದ ಸಾಕಷ್ಟು ತೊಂದರೆಯಾಗುತ್ತಿದೆ. ಇನ್ನೂ ಅಧಿಕಾರಿಗಳು ಕಾಟಾಚಾರಕ್ಕೆ ಎಂಬಂತೆ ಅಲ್ಲಲ್ಲಿ ದಾಳಿ ಮಾಡಿ ಕೈ ತೊಳೆದುಕೊಳ್ಳುತ್ತಿದ್ದಾರೆ.

**ಅಕ್ರಮ ಮದ್ಯ ಮಾರಾಟ ಮಾಹಿತಿ ನೀಡಿದರೆ ಕ್ರಮ:** ಪ್ರೀತಿ ಹಳ್ಳಿಗಳಲ್ಲಿ ಮದ್ಯ ಮಾರಾಟ ಸರ್ವೆ ಸಾಮಾನ್ಯ. ಗ್ರಾಪಂ ಸದಸ್ಯರೇ ಮಾರಾಟ ಮಾಡುವ ಸ್ಥಿತಿ ಎದುರಾಗಿದೆ. ಜನರ ಸಹಕಾರದೊಂದಿಗೆ ಅಕ್ರಮ ಮದ್ಯ ಮಾರಾಟದ ಮಾಹಿತಿ ನೀಡಿದರೆ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಇಂಡಿ ತಾಲೂಕು ಅಬಕಾರಿ ಇಲಾಖೆ ಸಿಪಿಐ ರಾಹುಲ ನಾಯಕ ತಿಳಿಸಿದ್ದಾರೆ.

**ಚಿಲ್ಲರೆ ಅಂಗಡಿಗಳಲ್ಲೂ ಅಕ್ರಮ ಮದ್ಯ ಮಾರಾಟ :** ಕೆಲವು ಕೂಲಿ ಕಾರ್ಮಿಕರು ಕೆಲಸಕ್ಕೆ ಹೋಗದೆ ಬೆಳಗ್ಗೆಯೇ ಮದ್ಯ ಸೇವಿಸಿ ರಸ್ತೆ ಬದಿಗಳಲ್ಲೇ ಬಿದ್ದಿರುತ್ತಾರೆ. ಅನೇಕರು ರೋಗ ಪೀಡಿತರಾಗಿ ಆಸ್ಪತ್ರೆ ಸೇರಿದರೆ ಕೆಲವರು ಸಾವನ್ನಪ್ಪಿದ್ದಾರೆ.

**ಗಾಂಧಿ ಜಯಂತಿ ಗಣೇಶ್ ಚತುರ್ಥಿಗಲ್ಲಿ ನಿಲ್ಲದ ಮದ್ಯ ಮಾರಾಟ:** ಇಂಡಿ ತಾಲೂಕಿನಲ್ಲಿ ಗಾಂಧಿ ಜಯಂತಿ ಹಾಗೂ ಯಾವದೆ ಮದ್ಯ ನಿಷೇದದ ಜಯಂತಿಗಳಿದ್ದರು ನಿರ್ಭಂಯದಿಂದ ಸಾಗುತ್ತಿದೆ ಮದ್ಯ ಮಾರಾಟ ಅಧಿಕಾರಿಗಳ ಕಿಂಚಿತ್ತೂ ಭಯವಿಲ್ಲದೆ ಮಾಮೂಲಿ ಕೊಡುತ್ತೇವೆ ಎನ್ನುವ ಮಾರಾಟಗಾರರು ಮಾರಾಟ ಮಾಡಲ್ಲಿಕ್ಕದರೂ ಏಕೆ ಭಯಪಡುತ್ತಾರೆ.

**ಇಲ್ಲಿಂದಲೇ ಮದ್ಯ ಸಪ್ಲೆ:** ಇಂಡಿ ತಾಲೂಕಿನಲ್ಲಿ ವೈನ್ ಶಾಪ್, ಬಾರ್- ರೆಸ್ಟೋರೆಂಟ್, ಲಾಡ್ಜಿಂಗ್ ಬಾರ್ ಶಾಪ್, ಎಂಎಸ್ ಎಲ್‌ಒ ಇವೆ.

ಒಟ್ಟು ಮದ್ಯದ ಅಂಗಡಿ ಪರವಾನಗಿ ಪಡೆದು ಕೊಂಡಿವೆ ಇಲ್ಲಿಂದಾನೆ. ಚಿಲ್ಲರೆ ಅಂಗಡಿಗಳಿಗೆ , ಪರವಾನಗಿ ಇಲ್ಲದೇ ಅನೇಕ ಡಾಬಾ, ಕಿರಾಣಿ ಅಂಗಡಿ, ಮನೆ, ಚಿಲ್ಲರೆ ಅಂಗಡಿಗಳಲ್ಲಿ ಮದ್ಯವನ್ನು ಮಾರಾಟ ಮಾಡಲಾಗುತ್ತಿದೆ. ಪ್ರತಿ ಹಳ್ಳಿಗಳಲ್ಲಿ ಏನಿಲ್ಲ ಅಂದರೂ 5ರಿಂದ 10ಅಕ್ರಮ ಮದ್ಯದಂಗಡಿ ತಲೆ ಎತ್ತಿವೆ. ರಸ್ತೆ ಪಕ್ಕದಲ್ಲಿರುವ ಚಿಲ್ಲರೆ ಅಂಗಡಿಗಳಲ್ಲಿ ರಾಜಾರೋಷವಾಗಿ ದಿನ ನಿತ್ಯವೂ ಅಕ್ರಮ ಮದ್ಯ ಮಾರಾಟ ಮಾಡುತ್ತಿದ್ದಾರೆ. ಅಬಕಾರಿ ಅಧಿಕಾರಿಗಳು ಮಾತ್ರ ಸಂಘಟನೆಗಳು ಮತ್ತು ಸಾರ್ವಜನಿಕರು ಮದ್ಯ ಬಂದ್ ಮಾಡಿಸಲು ಕೊಟ್ಟ ಅರ್ಜಿಗಳನ್ನು ಗುಡ್ಡೆ ಹಾಕುತ್ತ. ಜಾಣ ಮೌನ ವಹಿಸಿದ್ದಾರೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.


ಉದಯವಾಹಿನಿ ಚಿತ್ರ

### ಮನೆಗಳಲ್ಲಿ ಮಾರಾಟ

ಪ್ರತಿ ಚಿಲ್ಲರೆ ಅಂಗಡಿ, ದಿನಸಿ ಅಂಗಡಿ ರಸ್ತೆ ಬದಿಯ ಡಬ್ಬ ಅಂಗಡಿಗಳಲ್ಲಿ, ನಿರ್ಜನ ಪ್ರದೇಶದಲ್ಲಿ ಚೀಲಗಳಲ್ಲಿ, ಮನೆಗಳಲ್ಲಿ ಮದ್ಯ ಮಾರಾಟ ನಡೆಯುತ್ತಿದೆ. ಇದರಿಂದ ದಿನಸಿ ಖರೀದಿಸಲು ಹೋಗುವ ಮಹಿಳೆಯರೂ ಗುಟ್ಟಾಗಿ ಮದ್ಯ ಖರೀದಿಸುತ್ತಿದ್ದಾರೆ. ಒಂದು ವೇಳೆ ಒಬ್ಬ ವ್ಯಕ್ತಿಗಿಂತ ಹೆಚ್ಚಿನ ಮದ್ಯ ಬೇಕಾದರೆ ಕ್ಷಣಾರ್ಧದಲ್ಲಿ ತಂದು ಮಾರಾಟ ಮಾಡುವ ಸ್ಥಿತಿಯಿದೆ. ಇನ್ನು ಕೆಲ ಮದ್ಯದ ಅಂಗಡಿಗಳಿಂದ ಚೀಪ್ ಲಿಕ್ಕರ್ ಖರೀದಿಸಿಹೋಟೆಲ್, ಮನೆಗಳಲ್ಲಿ ಮಾರಾಟ ಮಾಡಲಾಗುತ್ತಿದೆ.


ಉದಯವಾಹಿನಿ ಚಿತ್ರ

### ದಾಳಿ ನಡೆಸುತ್ತಿಲ್ಲ

ಕೆಲ ಸಂಘದ ಸದಸ್ಯರು, ಪ್ರಗತಿ ಪರ ಸಂಘಟನೆಗಳು ಮದ್ಯ ಅಂಗಡಿ ತೆರವಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ದೂರು ನೀಡಿದವರಿಗೆ ನೀವು ಸಾಕ್ಷಿ ಆಗುತ್ತೀರಾ ಅಂತ ಮಾತಲ್ಲೇ ಗೊಡ್ಡು ಬೆದರಿಕೆ ಹಾಕುವ ಅಬಕಾರಿ ಅಧಿಕಾರಿ. ಗ್ರಾಮೀಣ ಭಾಗದಲ್ಲಿ ನೆಪ ಮಾತ್ರಕ್ಕೆ ಕಡೆ ದಾಳಿ ನಡೆಸಿ ಹಣ ಪಡೆದು ಸುಮ್ಮನಾಗುತ್ತಾರೆ. ಅಧಿಕಾರಿಗಳು ಮಾತ್ರ ಬಾರ್ ಮಾಲಿಕರಿಂದ ತಮಗೆ ಬರುವ ಮಾಮೂಲಿ ಪಡೆದು ಸುಮ್ಮನಾಗುತ್ತಿದ್ದಾರೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ.

### ಮಾಮೂಲಿ ಹೆಚ್ಚಳಕ್ಕೆ ಆರಂಭದ ಕಟ್ಟುನಿಟ್ಟಿನಲ್ಲಿ ಕ್ರಮ

ಅಬಕಾರಿ ಸಿಪಿಐ ರಾಹುಲ ನಾಯಕ ಅಧಿಕಾರಕ್ಕೆ ಬಂದ ಹೊಸತರಲ್ಲಿ ಸಿಬ್ಬಂದಿಗಳ ಜೊತೆಗೂಡಿಸಿಕೊಂಡು ಸುಮಾರು 3-4 ತಿಂಗಳು ಅಕ್ರಮ ಮದ್ಯ ಬಂದ್ ಮಾಡಿಸಿ, ಅಬಕಾರಿ ಆಫೀಸರ್ ಅಂದ್ರೆ ಭಯ ಬರುವ ರೀತಿ ಕಟ್ಟುನಿಟ್ಟಿನ ಕಾರ್ಯನಿರ್ವಹಿಸಿದಿದ್ದರು. ಮದ್ಯ ಇರಲಿ ಅಕ್ರಮ ಮದ್ಯ ಮಾರಾಟ ಗಾರರಿಗೆ ನೋಡಲು ಮದ್ಯದ ಪ್ಯಾಕೇಟ್ ಸಹ ಸಿಗಲಾರದಂತ ಪರಿಸ್ಥಿತಿ ನಿರ್ಮಾಣವಾಗಿತ್ತು. ಹೀಗೆ ನಿರ್ಮಾಣವಾದ ಸಿಪಿಐ ರಾಹುಲ ನಾಯಕ ಅವರ ಕಾರ್ಯಚರಣೆ ನೆನೆ ಗುದಿಗೆ ಬಿದ್ದದು ಮಾಮೂಲಿ ಹೆಚ್ಚಳಕ್ಕೆ ಇಲ್ಲವಾಗಿದ್ದರೆ ಮತ್ತೆ ಮೊದಲಿನ ರೀತಿ ಬಂದ್ ಮಾಡಿ ತೋರಿಸಲಿ.ಅಕ್ರಮ ಮದ್ಯ ಬಂದ್ ಮಾಡಿಸಿದಾಗ ಮೊದಲಿಗೆ ಅಕ್ರಮ ಮದ್ಯ ಮಾರಾಟಗಾರರು ಪ್ರತಿ ನಿತ್ಯ ಗುಂಪು ಗುಂಪಾಗಿ ಬರಿತ್ತೀದ್ದರು ಮತ್ತೆ ಸುರು ಮಾಡಿ ಅಂತ ನಾವು ನಮ್ಮ ಕಣ್ಣಾರೆ ನೋಡಿದ್ದೇವೆ..!ಆದರೆ ಈಗ ತಿಂಗಳಿಗೊಮ್ಮೆ ಬರುತ್ತಾರೆ ಮಾಮೂಲಿ ಮುಟ್ಟಿಸಲು.

**ಅಬಕಾರಿ ಅಧಿಕಾರಿಗಳು ಮೌನಕ್ಕೆ ಶರಣು**

# ನಿರಾಶ್ರಿತರ ಸಂಖ್ಯೆ ದುಪ್ಪಟ್ಟು: ವಲಸಿಗರಿಗೆ ಸಿಗುತ್ತಿಲ್ಲ ನೆಲೆ

## 2024ರಲ್ಲಿ ನಿರಾಶ್ರಿತರ ಸಂಖ್ಯೆ ಭಾರಿ ಹೆಚ್ಚಳವಾಗುವ ಸಾಧ್ಯತೆ, ವಲಸಿಗರ ನಿರ್ವಹಣೆಯೇ ಸವಾಲು

**ವಾಷಿಂಗ್ಟನ್:** ಭಾರತ ಸೇರಿದಂತೆ ಅನೇಕ ದೇಶಗಳಿಂದ ಅಮೆರಿಕಕ್ಕೆ ವಲಸೆ ಹೋಗುವವರ ಸಂಖ್ಯೆ ಹೆಚ್ಚುತ್ತಿದೆ. ಗಡಿ ಹಾರಿ ಅಕ್ರಮವಾಗಿ ಒಳ ನುಗ್ಗುವವರು, ರಾಜಾಶ್ರಯ ಕೋರಿ ಬರುವವರು ಮತ್ತು ಮುಖ್ಯ ನಗರಗಳನ್ನು ಪ್ರವೇಶಿಸುವವರ ಸಂಖ್ಯೆ ಐತಿಹಾಸಿಕ ಮಟ್ಟಕ್ಕೆ ತಲುಪಿದ್ದು, ಅಮೆರಿಕದಲ್ಲಿ ನಿರ್ವಸಿತರ ಸಂಖ್ಯೆ ದುಪ್ಪಟ್ಟಾಗುತ್ತಿದೆ ಎಂದು ವಾಲ್ ಸ್ಟ್ರೀಟ್ ಜರ್ನಲ್‌ನ ಇತ್ತೀಚಿನ ವರದಿ ಹೇಳಿದೆ.



**ದೊಡ್ಡಣ್ಣನ ಊರಲ್ಲೂ ಇಲ್ಲ ಸೂರು**

2007ರಿಂದ ದಾಖಲಾಗಿರುವ ಅಮೆರಿಕದ ನಿರಾಶ್ರಿತರ ಸಂಖ್ಯೆ ಕುರಿತಾದ ದತ್ತಾಂಶಗಳನ್ನು ಈ ವರದಿ ತಿಳಿಸಿದ್ದು, ದೇಶಕ್ಕೆ ಬರುತ್ತಿರುವ ಅಕ್ರಮ ವಲಸಿಗರ ಪ್ರಮಾಣದ ಬಗ್ಗೆ ಚಕಿತಗೊಳಿಸಿವ ಮಾಹಿತಿ ನೀಡಿದೆ. ಈ ವರ್ಷದ ಜನವರಿಯಲ್ಲಿ ಕನಿಷ್ಠ 5,50,000 ಜನರು ಅಮೆರಿಕದಲ್ಲಿ ನಿರ್ವಸಿತರಾಗಿದ್ದರು. ಇದೇ ತಿಂಗಳು ಅಮೆರಿಕದಲ್ಲಿ ಅತ್ಯಧಿಕ ಸಂಖ್ಯೆಯಲ್ಲಿ ಗಡಿ ದಾಟುವಿಕೆ ವರದಿಯಾಗಿದೆ ಎಂದು ವಾಲ್ ಸ್ಟ್ರೀಟ್ ಜರ್ನಲ್ ತಿಳಿಸಿದೆ. 2023ರ ಜನವರಿಗೆ ಹೋಲಿಸಿದರೆ 2024ರ ಜನವರಿಯಲ್ಲಿ ನಿರಾಶ್ರಿತರ ಸಂಖ್ಯೆ ಅಂದಾಜು ಶೇ 10ರಷ್ಟು ಅಧಿಕವಾಗಿದೆ. 2007ರಿಂದ ಈವರೆಗಿನ ದತ್ತಾಂಶಗಳನ್ನು ಪರಿಶೀಲಿಸಿದಾಗ, ಇದು ನಿರಾಶ್ರಿತರ ಅತ್ಯಧಿಕ ವಾರ್ಷಿಕ ಸಂಖ್ಯೆಯಾಗಿದೆ.

**ಅರ್ಧದಷ್ಟು ಅಕ್ರಮ ವಲಸಿಗರು**

**ಈಗಾಗಲೇ ತಮ್ಮಲ್ಲಿನ ನಿರಾಶ್ರಿತರ ದಾಖಲೆಗಳನ್ನು ವರದಿ ಮಾಡಿರುವ ಅಮೆರಿಕದ ಇತರೆ ನಗರಗಳು, ನಿರಾಶ್ರಿತರ ಪ್ರಗತಿಗೆ ಅಕ್ರಮ ವಲಸೆ ಅಡ್ಡಿ ಉಂಟುಮಾಡುತ್ತಿರುವುದನ್ನು ತೋರಿಸಿವೆ. ಉದಾಹರಣೆಗೆ, ಜನವರಿಯಲ್ಲಿ ರಾಜ್ಯದ ಕೌಟುಂಬಿಕ ಆಶ್ರಯ ತಾಣಗಳಲ್ಲಿ ಆಶ್ರಯ ಕಲ್ಪಿಸಲಾಗಿರುವ 7 ಸಾವಿರಕ್ಕೂ ಅಧಿಕ ನಿರಾಶ್ರಿತರ ಪೈಕಿ ಅರ್ಧದಷ್ಟು ಮಂದಿ ಅಕ್ರಮ ವಲಸಿಗರು ಎಂದು ಮಸ್ಸಾಚುಯೆಟ್ಸ್‌ನ ವರದಿಗಳು ತಿಳಿಸಿವೆ.**

2023ರಲ್ಲಿ ಅಮೆರಿಕದಲ್ಲಿ 6,53,000 ಮಂದಿ ನಿರಾಶ್ರಿತರು ಇದ್ದರು ಎಂದು ಅಂದಾಜಿಸಲಾಗಿದೆ.

**ಕೆನಡಾ, ಮೆಕ್ಸಿಕೋ ಗಡಿ ಭಾಗಗಳ ಮೂಲಕ ಅಮೆರಿಕಕ್ಕೆ ಅಕ್ರಮವಾಗಿ ನುಸುಳಿ ಬರುವ ವಲಸಿಗರ ಸಂಖ್ಯೆ ಹೆಚ್ಚುತ್ತಲೇ ಇದೆ. ಇದರಿಂದ ಅಮೆರಿಕದ ಪ್ರಮುಖ ನಗರಗಳು ನಿರಾಶ್ರಿತರಿಂದ ತುಂಬಿ ಹೋಗುತ್ತವೆ. ಪ್ರತಿ ವರ್ಷವೂ ಸಾವಿರಾರು ಮಂದಿ ವಲಸಿಗರು ಅಮೆರಿಕಕ್ಕೆ ದಾಂಗುಡಿ ಇಡುತ್ತಿದ್ದು, ಲಕ್ಷಾಂತರ ಜನರು ಸೂರಿಲ್ಲದೆ ಬೀದಿಗಳಲ್ಲಿದ್ದಾರೆ.**

ಆದರೆ ನಗರಗಳು ಎಲ್ಲಾ ನಿರಾಶ್ರಿತರ ದತ್ತಾಂಶವನ್ನು ಪ್ರಕಟಿಸಿದಾಗ ಅಥವಾ ಕಳುಹಿಸಿದ ಬಳಿಕ, ದೇಶದ ಇತಿಹಾಸದಲ್ಲಿಯೇ ಅತಿ ಹೆಚ್ಚು ಸಂಖ್ಯೆಯಲ್ಲಿ ನಿರಾಶ್ರಿತರು ಇರುವುದು 2024ರಲ್ಲಿ ಎಂದು ಸಾಬೀತಾಗುವ ಸಾಧ್ಯತೆ ಹೆಚ್ಚಿದೆ ಎಂದು ವರದಿ ತಿಳಿಸಿದೆ.


ಅತಿ ಹೆಚ್ಚು ನಿರಾಶ್ರಿತ ಜನಸಂಖ್ಯೆ ಹೊಂದಿರುವ ಹಾಗೂ ಅವರಲ್ಲಿ ಹೆಚ್ಚಿನವರು ಅಕ್ರಮ ವಲಸಿಗರಿರುವ ನ್ಯೂಯಾರ್ಕ್‌ನಂತಹ ನಗರಗಳು ತಮ್ಮಲ್ಲಿನ ನಿರ್ವಸಿತರ ವಿವರಗಳನ್ನು ಇನ್ನೂ ಸರ್ಕಾರಕ್ಕೆ ಸಲ್ಲಿಸಿಲ್ಲ.

**ನಿರಾಶ್ರಿತರ ಸಂಖ್ಯೆ ಹೆಚ್ಚಲು ಕಾರಣಗಳೇನು?:** ಡೆನ್ವರ್ ಮತ್ತು ಷಿಕಾಗೊದಂತಹ ಇತರೆ ನಗರಗಳಲ್ಲಿ ಕೂಡ ನಿರಾಶ್ರಿತರ ಗುಂಪಿನಲ್ಲಿ ಅಕ್ರಮ ವಲಸಿಗರೇ ಅಧಿಕವಾಗಿದ್ದಾರೆ. ಷಿಕಾಗೊದಲ್ಲಿ ಸುಮಾರು 18 ಸಾವಿರ ನಿರ್ವಸಿತರಿದ್ದು, ನಗರದಲ್ಲಿನ ಪ್ರತಿ 10 ನಿರಾಶ್ರಿತರಲ್ಲಿ ಏಳು ಮಂದಿ ವಲಸಿಗರಿದ್ದಾರೆ. ಡೆನ್ವರ್‌ನಲ್ಲಿ ನಿರಾಶ್ರಿತರ ಜನಸಂಖ್ಯೆಯು ಶೇ 42ರಷ್ಟು ಏರಿಕೆ ಕಂಡಿದೆ. ಅಮೆರಿಕದಲ್ಲಿ ನಿರ್ವಸಿತರ ಸಂಖ್ಯೆ ಹೆಚ್ಚಲು ಅಕ್ರಮ ವಲಸೆ ಮಾತ್ರವೇ ಕಾರಣವಲ್ಲ. ಇಲ್ಲಿ ಹೆಚ್ಚುತ್ತಿರುವ ಮಾದಕ ವಸ್ತು ಸೇವನೆ, ಹೆಚ್ಚುತ್ತಿರುವ ಮನೆ ಹಾಗೂ ಬಾಡಿಗೆ ದರಗಳು ಮತ್ತು ಕೋವಿಡ್ 19 ಸಾಂಕ್ರಾಮಿಕದ ಸಂದರ್ಭದಲ್ಲಿ ಟ್ಯಾಕ್ಸ್ ಕ್ರೆಡಿಟ್‌ಗಳನ್ನು ನಿಲ್ಲಿಸಿರುವುದು ಸಹ ಕಾರಣ ಎಂದು ವರದಿ ತಿಳಿಸಿದೆ.

# ಶ್ರೀಲಂಕಾ ನೂತನ ಅಧ್ಯಕ್ಷರಾಗಿ ನೂರಾ ಕುಮಾರ್ ದಿಸಾನಾಯಕೆ ಪ್ರಮಾಣ

**ಕೊಲಂಬೊ:** ಶ್ರೀಲಂಕಾದ ಒಂಬತ್ತನೇ ಅಧ್ಯಕ್ಷರಾಗಿ ಅನುರ ಕುಮಾರ ಡಿಸಾನಾಯಕೆ ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು. ಇಲ್ಲಿನ ರಾಷ್ಟ್ರಪತಿಗಳ ಕಾರ್ಯದರ್ಶಿ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಮುಖ್ಯ ನ್ಯಾಯಮೂರ್ತಿ ಜಯಂತ ಜಯಸೂರ್ಯ ಅವರಿಂದ ಪ್ರಮಾಣ ವಚನ ಸ್ವೀಕರಿಸಿದರು. ಅದ್ಭುತ ಗೆಲುವಿನ ಫಲಿತಾಂಶ ಘೋಷಣೆ ಮರುದಿನವೇ ದೇಶದ ಅಧಿಕಾರ ಚುಕ್ಕಾಣಿ ಹಿಡಿದಿದ್ದಾರೆ.

ದೇಶದ ಆರ್ಥಿಕತೆಯನ್ನು ಬಲಪಡಿಸುವ, ಭ್ರಷ್ಟಾಚಾರವನ್ನು ತೊಡೆದುಹಾಕುತ್ತಾರೆ ಎಂಬ ಭರವಸೆಯನ್ನು ಈಡೇರಿಸುವ ಜವಾಬ್ದಾರಿ ಅವರ ಮೇಲಿದೆ. ಇದಕೂ ಮುನ್ನವೇ ಶ್ರೀಲಂಕಾದ ಪ್ರಧಾನಿ ದಿನೇಶ್ ಗುಣವರ್ಧನೆ ಸೋಮವಾರ ತಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಕಳೆದ ಜುಲೈ 2022 ರಿಂದ ಅವರು ಪ್ರಧಾನಿಯಾಗಿದ್ದ ಅವರು



ಪ್ರಸ್ತುತ ಡಿಸಾನಾಯಕೆ ಅವರಿಗೆ ಬರೆದಿರುವ ಪತ್ರದಲ್ಲಿ ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವುದರಿಂದ ನನ್ನ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದು, ಹೊಸ ಸಚಿವ ಸಂಪುಟವನ್ನು ನೇಮಿಸುವ ಪ್ರಕ್ರಿಯೆಗೆ ಸಹಕರಿಸುವುದಾಗಿ ತಿಳಿಸಿದ್ದಾರೆ. ಶನಿವಾರ ನಡೆದ ಚುನಾವಣೆಯಲ್ಲಿ ನ್ಯಾಷನಲ್ ಪೀಪಲ್ಸ್ ಪವರ್ (ಎನ್‌ಪಿಪಿ)ನ ನಾಯಕ 56 ವರ್ಷದ ಡಿಸ್ಸಾನಾಯಕೆ ಅವರು ತಮ ಸಮೀಪದ ಪ್ರತಿಸ್ಪರ್ಧಿ ಸಮಗಿ ಜನ ಬಲವೇಗ ಪಕ್ಷದ ಸಜಿತ್ ಪ್ರೇಮದಾಸ ಅವರನ್ನು ಸೋಲಿಸಿದರು.

# ಬಾಲಕಿ ಮೇಲಿನ ಅತ್ಯಾಚಾರ ತಪ್ಪಿಸಿದ ವಾನರರು

**ಲಖ್ನೋ:** ದೇವರಂತೆ ಬಂದ ಕೋತಿಗಳು ಬಾಲಕಿ ಮೇಲೆ ನಡೆಯುತ್ತಿದ್ದ ಅತ್ಯಾಚಾರ ಯತ್ನವನ್ನು ತಪ್ಪಿಸಿರುವ ಘಟನೆ ಉತ್ತರ ಪ್ರದೇಶದ ಬಾಗ್ಪತ್‌ನ ದೌಲಾ ಗ್ರಾಮದಲ್ಲಿ ನಡೆದಿದೆ. ಆರು ವರ್ಷದ ಬಾಲಕಿ ಮೇಲೆ ವ್ಯಕ್ತಿಯೊಬ್ಬರು ಅತ್ಯಾಚಾರ ನಡೆಸಲು ಯತ್ನಿಸುತ್ತಿದ್ದ ಸಂದರ್ಭದಲ್ಲಿ ಕೋತಿಗಳ ಗುಂಪೊಂದು ಆ ವ್ಯಕ್ತಿಯ ಮೇಲೆ ದಾಳಿ ನಡೆಸಿವೆ.

ಯುಕೆಜಿ ವಿದ್ಯಾರ್ಥಿನಿ ಅಲ್ಲಿಂದ ತಪ್ಪಿಸಿಕೊಂಡು ಮನೆಗೆ ಓಡಿ ಹೋಗಿ ಪೋಷಕರಿಗೆ ನಡೆದ ವಿಷಯ ತಿಳಿಸಿದ್ದು, ವಿರೋಧಿಸಿದರೆ ತನ್ನನ್ನು ಮತ್ತು ತನ್ನ ಕುಟುಂಬದವರನ್ನು ಸಾಯಿಸುವುದಾಗಿ ಹೆದರಿಸಿದ ಎಂದು ಬಾಲಕಿ ತನ್ನ ಪೋಷಕರಿಗೆ ತಿಳಿಸಿದ್ದಾಳೆ.

ಬಳಿಕ ಆಕೆಯ ಮನೆಯವರು ಪೊಲೀಸ್ ಠಾಣೆಗೆ ಬಂದು ದೂರು ನೀಡಿದ್ದಾರೆ. ಪೋಕ್ಸೊ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳಡಿ ಪ್ರಕರಣ ದಾಖಲಾಗಿದ್ದು, ಪರಾರಿಯಾಗಿರುವ ಆರೋಪಿಗಾಗಿ



ಪೊಲೀಸರು ಶೋಧ ಕಾರ್ಯ ಕೈಗೊಂಡಿದ್ದಾರೆ.

ಸೆ.20ರಂದು ಆರೋಪಿಯು ಬಾಲಕಿಯನ್ನು ಅಪಹರಿಸಿ, ಒಂದೆಡೆ ಕರೆದೊಯ್ದು ಆಕೆಯನ್ನು ವಿವಸ್ತ್ರಗೊಳಿಸಿ ಲೈಂಗಿಕ ದೌರ್ಜನ್ಯಕ್ಕೆ ಪ್ರಯತ್ನಿಸಿದ್ದ. ಇದ್ದಕ್ಕಿದ್ದಂತೆ ಕೋತಿಗಳ ದಂಡು ಅಲ್ಲಿಗೆ ಧಾವಿಸಿದ್ದು, ಅವುಗಳನ್ನು ಕಂಡು ಆರೋಪಿ ಪರಾರಿಯಾಗಿದ್ದಾನೆ.

ಗ್ರಾಮದಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮರಾದಲ್ಲಿ ಆರೋಪಿ ಬಾಲಕಿಯನ್ನು ಕರೆದುಕೊಂಡು ಹೋಗುತ್ತಿರುವ ದೃಶ್ಯ ಸೆರೆಯಾಗಿದೆ. ದೃಶ್ಯಾವಳಿಗಳಿಂದ ಆಧರಿಸಿ ಪೊಲೀಸರು ಆರೋಪಿಗೆ ಪತ್ತೆಗೆ ಮುಂದಾಗಿದ್ದಾರೆ.

**ಆರೋಪಿ ಬೇರೆ ಗ್ರಾಮದ ನಿವಾಸಿಯಾಗಿದ್ದು, ಮನೆಯ ಹೊರಗೆ ಬಾಲಕಿಯ ಆಟವಾಡುತ್ತಿರುವುದನ್ನು ಗಮನಿಸಿ ತನ್ನೊಂದಿಗೆ ಬರುವಂತೆ ಮನವೊಲಿಸಿ ಅಲ್ಲಿಂದ ಆಕೆಯನ್ನು ಅಪಹರಿಸಿ ಅತ್ಯಾಚಾರಕ್ಕೆ ಯತ್ನಿಸಿದ್ದಾನೆ. ಕೋತಿಗಳ ದಾಳಿಯ ನಂತರ, ತಪ್ಪಿಸಿಕೊಂಡು ಹುಡುಗಿ ಮನೆಗೆ ಓಡಿ ಬಂದು ಘಟನೆಯ ಬಗ್ಗೆ ತನ್ನ ಪೋಷಕರಿಗೆ ತಿಳಿಸಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.**

# ಮಕ್ಕಳ ಅಶ್ಲೀಲ ಚಿತ್ರ ವೀಕ್ಷಿಸುವುದು, ಡೌನ್‌ಲೋಡ್ ಮಾಡುವುದು ಪೋಕ್ಸೋ ಅಪರಾಧ

**ನವದೆಹಲಿ:** ಮಕ್ಕಳ ಅಶ್ಲೀಲ ಚಿತ್ರಗಳನ್ನು ವೀಕ್ಷಿಸುವುದು, ಡೌನ್‌ಲೋಡ್ ಮಾಡುವುದು ಮತ್ತು ಸಂಗ್ರಹಿಸಿಟ್ಟುಕೊಳ್ಳುವುದು ಪೋಕ್ಸೋ ಕಾಯ್ದೆಯಡಿ ಅಪರಾಧ ಎಂದು ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದೆ. ಯಾವುದೇ ಉದ್ದೇಶವಿಲ್ಲದೆ ಮಕ್ಕಳ ಅಶ್ಲೀಲ ಚಿತ್ರಗಳನ್ನು ವೀಕ್ಷಿಸುವುದು, ಕವರೇಜ್ ಮಾಡುವುದು ಪೋಕ್ಸೋ ಅಡಿ ಬರುವುದಿಲ್ಲ ಎಂದು ಮದ್ರಾಸ್ ಹೈಕೋರ್ಟ್ ನೀಡಿದ್ದ ತೀರ್ಪನ್ನು ರದ್ದು ಪಡಿಸಿದೆ.



**ಸುಪ್ರೀಂ ಮಹತ್ವದ ತೀರ್ಪು**

ಮೊಬೈಲ್ ಸೇರಿದಂತೆ ಇನ್ನಿತರ ಸಾಧನದಲ್ಲಿ ಮಕ್ಕಳ ಅಶ್ಲೀಲ ಚಿತ್ರಗಳನ್ನು ಸಂಗ್ರಹ ಮಾಡಿಟ್ಟುಕೊಳ್ಳುವು ದೂ ಕೂಡಾ ಪೋಕ್ಸೋ ಕಾಯ್ದೆಯಡಿ ಅಪರಾಧವೇ ಎಂದು ಸ್ಪಷ್ಟಪಡಿಸಿದೆ. ಇದರ ಜೊತೆಗೆ, ಮಕ್ಕಳ ಅಶ್ಲೀಲ ಚಿತ್ರ ಎಂಬ ಪದವನ್ನು ಮಕ್ಕಳ ಲೈಂಗಿಕ ಶೋಷಣೆ ಎಂಬುದಾಗಿ ಬದಲಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಚಿಸಿದೆ. ಎಲ್ಲಾ ನ್ಯಾಯಾಲಯಗಳಲ್ಲೂ ಮಕ್ಕಳ ಅಶ್ಲೀಲ ಚಿತ್ರ ಎಂಬ ಪದವನ್ನು ತಮ ನ್ಯಾಯಾಲಯದ ಅದೇಶಗಳಲ್ಲೂ ಬಳಕೆ ಮಾಡದಂತೆ ನಿರ್ದೇಶನ ನೀಡಿದೆ.

ಮದ್ರಾಸ್ ಹೈಕೋರ್ಟ್‌ನ ಆದೇಶವನ್ನು ಪ್ರಶ್ನಿಸಿ ಫರಿದಾಬಾದ್ ಮೂಲದ ಸರ್ಕಾರೇತರ ಸಂಸ್ಥೆಯಾದ, ಮಕ್ಕಳ ಕಲ್ಯಾಣಕ್ಕಾಗಿ ಕೆಲಸ ಮಾಡುತ್ತಿರುವ ಜಸ್ಟ್ ರೈಟ್ಸ್ ಫಾರ್ ಚಿಲ್ಡ್ರನ್ ಅಲೈಯನ್ಸ್ ಮತ್ತು ನವದೆಹಲಿ ಮೂಲದ ಬಚ್ಪನ್ ಬಚಾವೊ ಆಂದೋಲನ್ ಹೆಸರಿನ ಸಂಘಟನೆಗಳು ಸಲ್ಲಿಸಿದ್ದ ಮೇಲನವಿ ಅರ್ಜಿ ವಿಚಾರಣೆ ವೇಳೆ ಸುಪ್ರೀಂಕೋರ್ಟ್ ಈ ತೀರ್ಪು ನೀಡಿದೆ.

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್, ನ್ಯಾಯಮೂರ್ತಿಗಳಾದ ಜೆ.ಬಿ.ಪರ್ದಿವಾಲ ಹಾಗೂ ಮನೋಜ್ ಮಿಶ್ರ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು, ಮದ್ರಾಸ್ ಹೈಕೋರ್ಟ್ ನೀಡಿದ ತೀರ್ಪು ಸಾಕಷ್ಟು ಪ್ರಮಾದದಿಂದ ಕೂಡಿದೆ ಎಂದು ಅಸಮಾಧಾನ ಹೊರ ಹಾಕಿದರು.

**ಪ್ರಕರಣವೇನು?**

**28 ವರ್ಷದ ವ್ಯಕ್ತಿಯೊಬ್ಬ ಮಕ್ಕಳ ಅಶ್ಲೀಲ ಚಿತ್ರವನ್ನು ತನ್ನ ಮೊಬೈಲ್‌ನಲ್ಲಿ ಡೌನ್‌ಲೋಡ್ ಮಾಡಿ ವೀಕ್ಷಣೆ ಮಾಡುತ್ತಿದ್ದ. ಈ ಆರೋಪದ ಮೇಲೆ ಆತನ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ಈ ಕುರಿತು ಜನವರಿ 11ರಂದು ವಿಚಾರಣೆ ನಡೆಸಿದ ಮದ್ರಾಸ್ ಹೈಕೋರ್ಟ್, ಮಾಹಿತಿ ತಂತ್ರಜ್ಞಾನ ಕಾಯ್ದೆ 2000 ಮತ್ತು ಪೋಕ್ಸೋ ಕಾಯ್ದೆ 2012ರ ಅಡಿ ಮಕ್ಕಳ ಅಶ್ಲೀಲ ಚಿತ್ರ ವೀಕ್ಷಣೆ ಮತ್ತು ಡೌನ್‌ಲೋಡ್ ಮಾಡುವುದು ಅಪರಾಧವಲ್ಲ ಎಂದು ಆದೇಶಿಸಿತ್ತು. ಈ ಆದೇಶವನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾತ್ತು.**

ನಾವು ಪೋಕ್ಸೊಗೆ ತಿದ್ದುಪಡಿ ತರಲು ಸಂಸತ್ತಿಗೆ ಸೂಚಿಸಿದ್ದೇವೆ. ಆದ್ದರಿಂದ ಮಕ್ಕಳ ಅಶ್ಲೀಲತೆಯ ವ್ಯಾಖ್ಯಾನವನ್ನು ಮಕ್ಕಳ ಲೈಂಗಿಕ ದೌರ್ಜನ್ಯ ಮತ್ತು ಶೋಷಣೆಯ ವಸ್ತು ಎಂದು ಉಲ್ಲೇಖಿಸಬಹುದು. ನಾವು ಸುಗ್ರೀವಾಜ್ಞೆ ತರಲು ಸಲಹೆ ನೀಡಿದ್ದೇವೆ. ನಾವು ಎಲ್ಲಾ ನ್ಯಾಯಾಲಯಗಳನ್ನು ಕೇಳಿದ್ದೇವೆ. ಯಾವುದೇ ಆದೇಶದಲ್ಲಿ ಮಕ್ಕಳ ಅಶ್ಲೀಲತೆಯನ್ನು ಉಲ್ಲೇಖಿಸಬಾರದು ಎಂದು ಸೂಚಿಸಿದರು.


ಕಳೆದ ಜ.11ರಂದು ಮದ್ರಾಸ್ ಹೈಕೋರ್ಟ್ ಮಕ್ಕಳ ಅಶ್ಲೀಲ ಚಿತ್ರವನ್ನು ವೀಕ್ಷಿಸಿದ ಮತ್ತು ಡೌನ್‌ಲೋಡ್ ಮಾಡಿಕೊಂಡ ಆರೋಪದ ಮೇಲೆ ಚೆನ್ನೈನ ನಿವಾಸಿ 28 ವರ್ಷದ ವ್ಯಕ್ತಿಯ ಮೇಲೆ ದಾಖಲಾಗಿದ್ದ ಮೊಕದ್ದಮೆಗಳನ್ನು ರದ್ದುಪಡಿಸಿತ್ತು. ಖಾಸಗಿಯಾಗಿ ವೀಕ್ಷಿಸುವುದು ಪೋಕ್ಸೋ ಕಾಯ್ದೆ ವ್ಯಾಪ್ತಿಗೆ ಬರುವುದಿಲ್ಲ ಎಂಬ ಮದ್ರಾಸ್ ಹೈಕೋರ್ಟ್‌ನ ಆದೇಶವನ್ನು ಸುಪ್ರೀಂಕೋರ್ಟ್ ಈ ಸಂದರ್ಭದಲ್ಲಿ ರದ್ದುಪಡಿಸಿ ಇದು ಘೋರ ಅಪರಾಧವಾಗಿದ್ದು, ಪೋಕ್ಸೋ ಕಾಯ್ದೆ ವ್ಯಾಪ್ತಿಗೆ ಬರುತ್ತದೆ ಎಂದು ತೀರ್ಪು ನೀಡಿದರು. ಅಲ್ಲದೆ ಹಿಂದೆ ಚೆನ್ನೈ ನಿವಾಸಿ ವಿರುದ್ಧ ದಾಖಲಾಗಿದ್ದ ಮೊಕದ್ದಮೆಗಳನ್ನು ದಾಖಲಿಸಿ ವಿಚಾರಣೆ ನಡೆಸುವಂತೆ ನ್ಯಾಯಾಲಯ ಸೂಚಿಸಿದೆ. ಮಕ್ಕಳ ಅಶ್ಲೀಲತೆ ವಿಷಯವನ್ನು ಪ್ರಕಟಿಸುವುದು ಮತ್ತು ಅದನ್ನು ಹಂಚಿಕೊಳ್ಳುವುದು ಅಪರಾಧ. ಇದನ್ನು ಡೌನ್‌ಲೋಡ್ ಮಾಡಿಕೊಳ್ಳುವುದು ಇನ್ನಷ್ಟು ಅಪಾಯಕಾರಿ ಬೆಳವಣಿಗೆ. ಕೇಂದ್ರ ಸರ್ಕಾರ ಈ ಬಗ್ಗೆ ಹೊಸದಾಗಿ ಮಾರ್ಗಸೂಚಿ ಪ್ರಕಟಿಸಬೇಕೆಂದು ನಿರ್ದೇಶನ ನೀಡಿದರು.

ಮಕ್ಕಳನ್ನು ಲೈಂಗಿಕವಾಗಿ ನಿಂದಿಸುವ ಮತ್ತು ಶೋಷಣೆ ಮಾಡುವ ವಸ್ತು ಎಂಬ ಪದದ ಬದಲಿಗೆ ತಿದ್ದುಪಡಿ ತರಲು ಸಾಧ್ಯವೇ ಎಂಬುದನ್ನು ಕೇಂದ್ರ ಸರ್ಕಾರ ಪರಿಶೀಲನೆ ಮಾಡಬೇಕೆಂದು ಸೂಚನೆ ಕೊಟ್ಟಿದೆ. ಅಲ್ಲದೆ ಇನ್ನುಮುಂದೆ ದೇಶದ ಯಾವುದೇ ನ್ಯಾಯಾಲಯಗಳು ಮಕ್ಕಳ ಅಶ್ಲೀಲತೆ ಎಂಬ ಪದವನ್ನು ಬಳಸದಂತೆ ಮುಖ್ಯ ನ್ಯಾಯಮೂರ್ತಿಗಳ ಪೀಠ ಸೂಚಿಸಿತು. ಮದ್ರಾಸ್ ಹೈಕೋರ್ಟ್ ಈ ಕುರಿತು ಆದೇಶ ನೀಡುವಾಗ ಘೋರ ತಪ್ಪು ಮಾಡಿದೆ. ಪ್ರಕರಣದಲ್ಲಿ ಖುಲಾಸೆಯಾಗಿರುವ ವ್ಯಕ್ತಿಯ ವಿರುದ್ಧದ ಕ್ರಿಮಿನಲ್ ಮೊಕದ್ದಮೆಯನ್ನು ಸುಪ್ರೀಂ ಕೋರ್ಟ್ ಮರು ಸ್ಥಾಪಿಸಲಿದೆ ಎಂದು ಆದೇಶದಲ್ಲಿ ತಿಳಿಸಿದೆ.

# 2 ಲಕ್ಷ ರೂ. ಲಂಚ ಕೊಟ್ಟು ನಕಲಿ ಪೊಲೀಸ್ ಆದ 18ರ ಯುವಕ

**ಪಟನಾ:** ಬಿಹಾರದ ಜಮುಯಿ ನಗರದಲ್ಲಿ ಉದ್ಯೋಗದ ಹೆಸರಿನಲ್ಲಿ ವಂಚನೆ ಎಸಗಿರುವ ದೊಡ್ಡ ಪ್ರಕರಣವೊಂದು ಬೆಳಕಿಗೆ ಬಂದಿದೆ. ಇಲ್ಲಿನ ವಂಚಕರು ಐಪಿಎಸ್ ಅಧಿಕಾರಿಯನ್ನಾಗಿ ಮಾಡುವುದಾಗಿ ನಂಬಿಸಿ 2 ಲಕ್ಷ ರೂಪಾಯಿ ತೆಗೆದುಕೊಂಡು ಯುವಕನೊಬ್ಬನಿಗೆ ಮೋಸ ಮಾಡಿದ್ದಾರೆ. ನಕಲಿ ಐಪಿಎಸ್ ಅಧಿಕಾರಿಯನ್ನು ಜಮುಯಿ ಸಬ್ ಇನ್ಸ್‌ಪೆಕ್ಟರ್ ಬಂಧಿಸಿದ್ದು, ವಿಚಾರಣೆ ನಡೆಸಿದ ಬಳಿಕ ಅಸಲಿ ವಿಷಯ ಬೆಳಕಿಗೆ ಬಂದಿದೆ. ಇದೀಗ ಪೊಲೀಸರು ಇಡೀ ಪ್ರಕರಣದ ತನಿಖೆ ಆರಂಭಿಸಿದ್ದಾರೆ.

ವರದಿಗಳ ಪ್ರಕಾರ ಮನೋಜ್ ಸಿಂಗ್ ಎಂಬ ವಂಚಕ 18 ವರ್ಷದ ಮಿಥಿಲೇಶ್ ಮಾಂಝಿ ಎಂಬಾತನನ್ನು ಐಪಿಎಸ್ ಅಧಿಕಾರಿ ಮಾಡುವುದಾಗಿ ಪುಸಲಾಯಿಸಿ 2 ಲಕ್ಷ ರೂಪಾಯಿ ಹಣ ಪಡೆದು, ನಕಲಿ ಪಿಸ್ತೂಲ್ ಮತ್ತು ಯೂನಿಫಾರ್ಮ್ ನೀಡಿ ವಂಚನೆ ಮಾಡಿದ್ದಾನೆ. ಬಂಧಿತ ಯುವಕ ಮಿಥಿಲೇಶ್‌ನಿಂದ ಪಲ್ಸರ್ ಬೈಕ್, ಪಿಸ್ತೂಲ್ ಹಾಗೂ ಯೂನಿಫಾರ್ಮ್



ವಶಕ್ಕೆ ಪಡೆಯಲಾಗಿದೆ.

ಈ ವಂಚನೆಯಿಂದ ಒಂದು ದೊಡ್ಡ ಜಾಲ ಇರುವ ಶಂಕೆ ವ್ಯಕ್ತವಾಗಿದೆ. ಈ ಬಗ್ಗೆ ಮಾತನಾಡಿರುವ ಬಂಧಿತ ಮಿಥಿಲೇಶ್, ಇತ್ತೀಚೆಗೆ ನಾನು ಜಲಪಾತ ವೀಕ್ಷಿಸಲು ಪ್ರವಾಸಕ್ಕೆ ಹೋದಾಗ ಅಲ್ಲಿ ಒಬ್ಬರನ್ನು ಭೇಟಿಯಾದೆ. ಅವರ ಮಾಟದ ಮಾತುಗಳನ್ನು ಕೇಳಿ ಮರುಳಾದೆ. ಕಡಿಮೆ ಹಣದಲ್ಲಿ ಐಪಿಎಸ್ ಅಧಿಕಾರಿಯನ್ನಾಗಿ ಮಾಡುತ್ತೇನೆ ಎಂದು ನಂಬಿಸಿದರು. ಅವರು ಆಡಿದ ಮಾತುಗಳನ್ನು ಕೇಳಿ ನಾನು ಕೂಡ ನಿಜವೆಂದು ನಂಬಿದೆ ಮತ್ತು ಒಳಗೊಳಗೆ ಖುಷಿಪಡುತ್ತಿದೆ. ನನಗೆ ಎಲ್ಲರೂ ಗೊತ್ತಿದೆ ಮತ್ತು ಸುಲಭವಾಗಿ ಕೆಲಸ ಕೊಡಿಸುತ್ತೇನೆಂದು ನಂಬಿಸಿದರು. ಅದಕ್ಕಾಗಿ ಎರಡು ದಿನದಲ್ಲಿ 2 ಲಕ್ಷ ರೂ. ಹಣ ಹೊಂದಿಸುವಂತೆ ಹೇಳಿದರು. ಇದಾದ ಬಳಿಕ ನಾನು ಸಂಬಂಧಿಕರ ಬಳಿ ಒತ್ತಾಯ ಮಾಡಿ ಎರಡು ಲಕ್ಷ ಸಾಲ ರೂ. ಪಡೆದು ವಂಚಕನಿಗೆ ನೀಡಿದೆ. ಇದಾದ ಬಳಿಕ ವಂಚಕರು ಸಮವಸ್ತ್ರದ ಜತೆಗೆ ನಕಲಿ ಪಿಸ್ತೂಲ್ ನೀಡಿದರು ಎಂದು ಮಿಥಿಲೇಶ್ ಹೇಳಿದ್ದಾನೆ.

**ಅಂದಹಾಗೆ ಬಂಧಿತ ಮಿಥೀಲೇಶ್ ತಾನೊಬ್ಬ ಐಪಿಎಸ್ ಅಧಿಕಾರಿ ಎಂದು ತನ್ನ ಗ್ರಾಮದಲ್ಲಿ ಬಡಾಯಿ ಕೊಚ್ಚಿಕೊಳ್ಳುವಾಗ ಅಲ್ಲಿನ ಜನರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳಕ್ಕೆ ಬಂದ ಪೊಲೀಸರು ಮಿಥಿಲೇಶ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಅಸಲಿ ಸಂಗತಿ ಬಯಲಾಗಿದೆ. ಈ ಮಿಥಿಲೇಶ್ ಸಮೋಸಾ ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದ ಎಂದು ತಿಳಿದುಬಂದಿದೆ.**

# ಜಾತಿವಾದಿ ಪಕ್ಷ ಕಾಂಗ್ರೆಸ್‌ನಿಂದ ದಲಿತರು ದೂರವಿರಬೇಕು

**ಲಕ್ನೋ:** ಹರಿಯಾಣದಲ್ಲಿ ವಿಧಾನಸಭಾ ಚುನಾವಣೆಗೆ ಮುನ್ನ ಬಿಎಸ್‌ಪಿ ಅಧಿನಾಯಕಿ ಮಾಯಾವತಿ ಅವರು ದಲಿತ ನಾಯಕರನ್ನು ಕಾಂಗ್ರೆಸ್, ಇತರ ಜಾತಿವಾದಿ ಪಕ್ಷಗಳೊಂದಿಗಿನ ಸಂಬಂಧವನ್ನು ಕಡಿದು ಕೊಂಡು ಡಾ. ಬಿ. ಆರ್. ಅಂಬೇಡ್ಕರ್ ಅವರು ಹಾಕಿಕೊಟ್ಟ ಮಾರ್ಗವನ್ನು ಅನುಸರಿಸಬೇಕೆಂದು ಒತ್ತಾಯಿಸಿದ್ದಾರೆ.



ಬಹುಜನ ಸಮಾಜ ಪಕ್ಷ (ಬಿಎಸ್‌ಪಿ), ಇಂಡಿಯನ್ ನ್ಯಾಷನಲ್ ಲೋಕ ದಳ (ಐಎನ್‌ಎಲ್‌ಡಿ) ಮೈತ್ರಿಯು ಹರಿಯಾಣದಲ್ಲಿ ದಲಿತ ಪರ ಪರ್ಯಾಯವಾಗಿ ತನ್ನನ್ನು ತಾನು ಸ್ಥಾಪಿಸಿಕೊಳ್ಳುವ ಪ್ರಯತ್ನಗಳ ಮಧ್ಯೆ ಈ ಕಾಮೆಂಟ್‌ಗಳು ಬಂದಿವೆ.

ಉತ್ತರ ಪ್ರದೇಶದ ಮಾಜಿ ಮುಖ್ಯಮಂತ್ರಿ ಮಾಯಾವತಿ ಅವರು ಕಾಂಗ್ರೆಸ್, ಇತರ ಜಾತಿವಾದಿ ಪಕ್ಷಗಳು ದಲಿತ ನಾಯಕರನ್ನು ಸಂಕಷ್ಟದ ಸಮಯದಲ್ಲಿ ಮಾತ್ರ ಬಳಸಿಕೊಂಡಿವೆ ಮತ್ತು ನಂತರ ಅವರನ್ನು ಕಡೆಗಣಿಸುತ್ತಿವೆ ಎಂದು ಆರೋಪಿಸಿದರು.

ಕಾಂಗ್ರೆಸ್, ಇತರ ಜಾತಿ ವಾದಿ ಪಕ್ಷಗಳು ದಲಿತರನ್ನು ತಮ ಕೆಟ್ಟ ದಿನಗಳಲ್ಲಿ ಮಾತ್ರ ನೆನಪಿಸಿಕೊಳ್ಳುತ್ತವೆ ಮತ್ತು ಅವರನ್ನು ಮುಖ್ಯಮಂತ್ರಿಯಾಗಿ ಅಥವಾ ತಾತ್ಕಾಲಿಕವಾಗಿ ಇತರ ಪ್ರಮುಖ ಸ್ಥಾನಮಾನಗಳಿಗೆ ನೇಮಿಸುತ್ತವೆ ಎಂಬುದನ್ನು ದೇಶದ ರಾಜಕೀಯ ಬೆಳವಣಿಗೆಗಳು ಸಾಬೀತುಪಡಿಸಿವೆ ಎಂದು ಅವರು ಹಿಂದಿಯಲ್ಲಿ ಎಕ್ಸ್ ಮಾಡಿದ್ದಾರೆ.

ಈ ಅವಮಾನಿತ ದಲಿತ ನಾಯಕರು ತಮ ಮೆಸ್ಸಿಹ್ ಬಾಬಾ ಸಾಹೇಬ್ ಡಾ. ಭೀಮರಾವ್ ಅಂಬೇಡ್ಕರ್ ಅವರಿಂದ ಸ್ಫೂರ್ತಿ ಪಡೆಯಬೇಕು ಮತ್ತು ಈ ಪಕ್ಷಗಳಿಂದ ತಮನ್ನು ತಾವು ಬೇರ್ಪಡಿಸಬೇಕು.

ಅವರು ತಮ ಸಮುದಾಯಗಳನ್ನು ಈ ಪಕ್ಷಗಳಿಂದ ದೂರವಿಡಲು ಕೆಲಸ ಮಾಡಬೇಕು ಎಂದರು.

# ವಿದ್ಯಾರ್ಥಿಗಳಿಗೆ 5 ಲಕ್ಷ ಡಾಲರ್ ಸ್ಕಾಲರ್‌ಶಿಪ್ ಘೋಷಿಸಿದ ಭಾರತ

## ಇಂಡೋ – ಪೆಸಿಫಿಕ್ ಪ್ರದೇಶದ ವಿದ್ಯಾರ್ಥಿಗಳಿಗೆ 5 ಲಕ್ಷ ಡಾಲರ್ ವಿದ್ಯಾರ್ಥಿ ವೇತನಗಳನ್ನು ನೀಡಲು ಭಾರತ ನಿರ್ಧಾರ

**ವಾಷಿಂಗ್ಟನ್:** ಇಂಡೋ – ಪೆಸಿಫಿಕ್ ಪ್ರದೇಶದ ವಿದ್ಯಾರ್ಥಿಗಳಿಗೆ 5 ಲಕ್ಷ ಡಾಲರ್ (ಸುಮಾರು 4,17,40,225ರೂ.) ಮೌಲ್ಯದ ಐವತ್ತು ಕ್ವಾಡ್ ವಿದ್ಯಾರ್ಥಿ ವೇತನಗಳನ್ನು ನೀಡಲು ಭಾರತ ಮುಂದಾಗಿದೆ. ಅಮೆರಿಕಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಈ ಮಹತ್ವದ ನಿರ್ಧಾರ ಕೈಗೊಂಡಿದ್ದಾರೆ. ಈ ವಿದ್ಯಾರ್ಥಿ ವೇತನದಿಂದ ಇಂಡೋ – ಪೆಸಿಫಿಕ್ ದೇಶಗಳ ವಿದ್ಯಾರ್ಥಿಗಳಿಗೆ ಭಾರತ ಸರ್ಕಾರದ ಅನುದಾನಿತ ತಾಂತ್ರಿಕ ಸಂಸ್ಥೆಯಲ್ಲಿ 4 ವರ್ಷದ ಎಂಜಿನಿಯರಿಂಗ್ ಪದವಿ ಶಿಕ್ಷಣ ಸೌಲಭ್ಯ ವಿದ್ಯಾರ್ಥಿಗಳಿಗೆ ಸಿಗಲಿದೆ.

ಕ್ವಾಡ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಿದ ನಂತರ ಈ ಘೋಷಣೆ ಮಾಡಿದ್ದಾರೆ. ಈ ಸಭೆಯಲ್ಲಿ ಅಮೆರಿಕಾ ಅಧ್ಯಕ್ಷ ಜೋ ಬಿಡೆನ್, ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಮತ್ತು ಜಪಾನ್ ಪ್ರಧಾನಿ ಫ್ಯೂಮಿಯೊ ಉಪಸ್ಥಿತರಿದ್ದರು.

**ಅರ್ಹತೆ ಏನು?:** ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷಗಳಾಗಿರಬೇಕು. ಅರ್ಜಿದಾರರು



- **ಕ್ವಾಡ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಭಾಗವಹಿಸಿದ ನಂತರ ಘೋಷಣೆ.**
- **ಭಾರತ ಸರ್ಕಾರದ ಅನುದಾನಿತ ತಾಂತ್ರಿಕ ಸಂಸ್ಥೆಯಲ್ಲಿ 4 ವರ್ಷದ ಎಂಜಿನಿಯರಿಂಗ್ ಪದವಿ ಶಿಕ್ಷಣ ಸೌಲಭ್ಯ.**

ಕ್ವಾಡ್ ದೇಶಗಳಲ್ಲಿ ಒಂದಾದ ಆಸ್ಟ್ರೇಲಿಯಾ, ಭಾರತ, ಜಪಾನ್ ಅಥವಾ ಯುನೈಟೆಡ್ ಸ್ಟೇಟ್ಸ್ ಅಥವಾ ಆಗ್ನೇಯ ಏಷ್ಯಾದ ಯಾವುದೇ ದೇಶಗಳ ನಾಗರಿಕರು ಅಥವಾ ಕಾನೂನುಬದ್ಧ ಶಾಶ್ವತ ನಿವಾಸಿಗಳಾಗಿರಬೇಕು. ವಿದ್ಯಾರ್ಥಿಗಳು ಅರ್ಹ ವಿದ್ಯಾಭ್ಯಾಸ ಪೂರ್ಣಗೊಳಿಸಿರಬೇಕು.

**ಯುಎಸ್‌ನಲ್ಲಿ ಅಧ್ಯಯನಕ್ಕೂ ಪ್ರೋತ್ಸಾಹ**

**ಈ ಸ್ಕಾರಲ್‌ಶಿಫ್ ಕಾರ್ಯಕ್ರಮವನ್ನು ಜಾಗತಿಕ ಲಾಭರಹಿತ ಸಂಸ್ಥೆಯಾದ ಇನ್ಸ್ಟಿಟ್ಯೂಟ್ ಆಫ್ ಇಂಟರ್ ನ್ಯಾಷನಲ್ ಎಜುಕೇಶನ್ ನಿರ್ವಹಿಸುತ್ತದೆ. 2024 ರಿಂದಲೇ ಈ ಕಾರ್ಯಕ್ರಮ ಆರಂಭವಾಗಲಿದೆ. ಈ ಫೆಲೋಶಿಪ್ ಯುನೈಟೆಡ್ ಸ್ಟೇಟ್ಸ್‌ನಲ್ಲಿ ವಿಜ್ಞಾನ, ತಂತ್ರಜ್ಞಾನ, ಎಂಜಿನಿಯರಿಂಗ್ ಮತ್ತು ಗಣಿತ ಅಧ್ಯಯನ ಮಾಡಲು ಸ್ನಾತಕೋತ್ತರ ಮತ್ತು ಡಾಕ್ಟರೇಟ್ ವಿದ್ಯಾರ್ಥಿಗಳಿಗೂ ಪ್ರೋತ್ಸಾಹ ನೀಡಲಿದೆ.**

**ಹಣಕಾಸಿನ ಪ್ರಯೋಜನಗಳು ಏನು?:** ಪ್ರತಿ ಕ್ವಾಡ್ ಫೆಲೋ ಶೈಕ್ಷಣಿಕ ವೆಚ್ಚಗಳನ್ನು ಸರಿದೂಗಿಸಲು 40,000 ಡಾಲರ್ ( 33,39,218 ರೂ.) ಒಂದುಬಾರಿ ಆರ್ಥಿಕ ಅನುದಾನ ನೀಡಲಾಗುತ್ತದೆ. ಉಳಿದ ವಿವರ, ಅರ್ಹತಾ ಮಾನದಂಡಗಳನ್ನು ಇನ್ನೂ ಪ್ರಕಟಿಸಿಲ್ಲ.

**ಅಮೆರಿಕಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ**

**ಬೈಡನ್ ದಂಪತಿಗೆ ಮೋದಿ ಉಡುಗೊರೆ:** ಪ್ರಧಾನಿ ನರೇಂದ್ರ ಮೋದಿ ಅವರು ಬೈಡನ್ ದಂಪತಿಗೆ ವಿಶೇಷ ಉಡುಗೊರೆ ನೀಡಿದರು. ಕೈಯಿಂದ ರೂಪಿಸಿದ ಭಾರತೀಯ ರೈಲ್ವೆ ಹೆಸರಿನಲ್ಲಿದ್ದ ದಿಲ್ಲಿ- ಡೆಲವೇರ್ ಹೆಸರು ಹೊಂದಿದ್ದ ಪುರಾತನ ಬೆಳ್ಳಿಯ ರೈಲು ಮಾದರಿಯನ್ನು ಬೈಡನ್ ಅವರಿಗೆ ಮೋದಿ ನೀಡಿದರು. ಬೈಡನ್ ಪತ್ನಿ ಜಿಲ್ ಅವರಿಗೆ ಕಾಶ್ಮೀರಿ ಪಶ್ಮಿನಾ ಶಾಲನ್ನು ಉಡುಗೊರೆಯಾಗಿ ನೀಡಿದರು.

**ಕ್ವಾಡ್‌ನಲ್ಲಿ ಇಂಡೊ-ಪೆಸಿಫಿಕ್ ಶಾಂತಿಗೆ ಮೋದಿ ಒತ್ತು**

ಕ್ವಾಡ್ ಶೃಂಗಸಭೆಯಲ್ಲಿ ಇಂಡೊ – ಪೆಸಿಫಿಕ್ ವಲಯದಲ್ಲಿ ಶಾಂತಿ, ಸ್ಥಿರತೆಗೆ ಒತ್ತು ನೀಡುವ ಅಗತ್ಯವಿದೆ ಎಂದು ಪ್ರತಿಪಾದಿಸಿದ ಮೋದಿ ಅವರು, ಸದಸ್ಯ ರಾಷ್ಟ್ರಗಳು ಸಹಕಾರ, ಪಾಲುದಾರಿಕೆ ಮೂಲಕ ಪಾಲ್ಗೊಳ್ಳುವ ಮೂಲಕ ಸಮಗ್ರ ಅಭಿವೃದ್ಧಿಗೆ ಬದ್ಧತೆ ಪ್ರದರ್ಶಿಸಬೇಕು, ಎಂದು ಹೇಳಿದರು. ಕ್ವಾಡ್ ಸಭೆ ಬಳಿಕ ಪ್ರಧಾನಿ ಮೋದಿ ಅವರು ಜಪಾನ್ ಪ್ರಧಾನಿ ಫ್ಯೂಮಿಯೋ ಕಿಶಿದಾ ಅವರೊಂದಿಗೆ ದ್ವಿಪಕ್ಷೀಯ ಬಾಂಧವ್ಯ ಕುರಿತು ಚರ್ಚೆ ನಡೆಸಿದರು. ಬಳಿಕ ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

**ಅಮೆರಿಕಾ ಪ್ರವಾಸದಲ್ಲಿ ಪ್ರಧಾನಿ ಮೋದಿ ಅವರು ಇಂಡೋ – ಪೆಸಿಫಿಕ್ ಪ್ರದೇಶದ ವಿದ್ಯಾರ್ಥಿಗಳಿಗೆ ಗುಡ್‌ನ್ಯೂಸ್ ನೀಡಿದ್ದಾರೆ. 5 ಲಕ್ಷ ಡಾಲರ್ ಮೌಲ್ಯದ ಐವತ್ತು ಕ್ವಾಡ್ ವಿದ್ಯಾರ್ಥಿ ವೇತನಗಳನ್ನು ಆರಂಭಿಸುವುದಾಗಿ ಘೋಷಣೆ ಮಾಡಿದೆ. ಇಂಡೋ – ಪೆಸಿಫಿಕ್ ದೇಶಗಳ ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಬಹುದಾಗಿದೆ. ಈ ಬಗ್ಗೆ ವಿವರ ಇಲ್ಲಿದೆ.**

## ಮಿನಿ ನ್ಯೂಸ್

### ಮಹಾರಾಷ್ಟ್ರ, ಜಾರ್ಖಂಡ್‌ಗೆ ಏಕಕಾಲದಲ್ಲಿ ಚುನಾವಣೆ.. ?

**ನವದೆಹಲಿ:** ಮಹಾರಾಷ್ಟ್ರ ಮತ್ತು ಜಾರ್ಖಂಡ್‌ನಲ್ಲಿ ವಿಧಾನಸಭಾ ಚುನಾವಣೆಗಳು ಏಕಕಾಲದಲ್ಲಿ ನಡೆಯುವ ಸಾಧ್ಯತೆಯಿದೆ. ಚುನಾವಣಾ ಆಯೋಗವು ಮುಂದಿನ ವಾರ ಈ ಎರಡೂ ರಾಜ್ಯಗಳಿಗೆ ಭೇಟಿ ನೀಡಿ ಅಲ್ಲಿನ ಸಿದ್ಧತೆ ಬಗ್ಗೆ ಪರಿಶೀಲನೆ ನಡೆಸಲಿದೆ. ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ನೇತೃತ್ವದಲ್ಲಿ ಆಯೋಗವು ಸೆಪ್ಟೆಂಬರ್ 23–24 ರಂದು ಜಾರ್ಖಂಡ್‌ನಲ್ಲಿ ಮತ್ತು ಸೆಪ್ಟೆಂಬರ್ 27–28 ರಂದು ಮಹಾರಾಷ್ಟ್ರದಲ್ಲಿದೆ ಪರಿಶೀಲನೆ ನಡೆಸಲಿದೆ ಎಂದು ತಿಳಿದುಬಂದಿದೆ.

ಈ ಹಿಂದೆ ನಡೆದ ಚುನಾವಣಾ ಸಮಯದಲ್ಲಿ ಮಹಾರಾಷ್ಟ್ರ ಮತ್ತು ಹರಿಯಾಣದಲ್ಲಿ ಏಕಕಾಲದಲ್ಲಿ ಚುನಾವಣೆಗಳು ನಡೆದಿದ್ದವು. ಆದರೆ ಈ ಬಾರಿ ಚುನಾವಣಾ ಆಯೋಗ ಈ ಎರಡು ರಾಜ್ಯಗಳ ಚುನಾವಣೆಯನ್ನು ಪ್ರತ್ಯೇಕಿಸಿದೆ. ಕಳೆದ ಬಾರಿ ಜಾರ್ಖಂಡ್‌ನಲ್ಲಿ ವಿಧಾನಸಭೆ ಚುನಾವಣೆಯನ್ನು ಸ್ವತಂತ್ರವಾಗಿ ನಡೆಸಲಾಗಿತ್ತು. ಆದರೆ ಇದೀಗ ಮಹಾರಾಷ್ಟ್ರ ಜಾರ್ಖಂಡ್‌ನಲ್ಲಿ ಏಕಕಾಲದಲ್ಲಿ ಚುನಾವಣೆ ನಡೆಸುವ ಸಾಧ್ಯತೆಯಿದೆ ಎನ್ನಲಾಗುತ್ತಿದೆ. ಮತ್ತೊಂದೆಡೆ ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯು ನವೆಂಬರ್ 26ರಂದು ಮುಗಿಯಲಿದೆ. ಆದರೆ ಜಾರ್ಖಂಡ್‌ನಲ್ಲಿ ಜನವರಿ 5ರಂದು ಮುಕ್ತಾಯವಾಗಲಿದೆ ಎಂಬ ಮಾತುಗಳು ಕೇಳಿಬರುತ್ತುವೆ. ಈಗಾಗಲೇ ಜಮ್ಮುಕಾಶೀರದಲ್ಲಿ ಚುನಾವಣೆಗಳು ನಡೆಯುತ್ತಿದ್ದು, ಹರಿಯಾಣದಲ್ಲಿ ಅಕ್ಟೋಬರ್ 5ರಂದು ಮತದಾನ ನಡೆಯಲಿದೆ. ಇನ್ನು ನವದೆಹಲಿಯ ವಿಧಾನಸಭಾ ಚುನಾವಣೆ ಫೆಬ್ರವರಿಯಲ್ಲಿ ನಡೆಯುವ ನಿರೀಕ್ಷೆಯಿದೆ.

### ಗುಜರಾತ್‌ನ ಕಚ್‌ನಲ್ಲಿ ಭೂಕಂಪನ

**ಅಹಮದಾಬಾದ್:** ಸೋಮವಾರ ಬೆಳಗ್ಗೆ ಗುಜರಾತ್‌ನ ಕಚ್ ಜಿಲ್ಲೆಯಲ್ಲಿ 3.3 ತೀವ್ರತೆಯ ಕಂಪನ ಸಂಭವಿಸಿದೆ ಎಂದು ಭೂಕಂಪನ ಸಂಶೋಧನಾ ಸಂಸ್ಥೆ (ಐಎಸ್‌ಆರ್) ತಿಳಿಸಿದೆ. ಭೂಕಂಪನದ ಪ್ರಭಾವದಿಂದ ಜಿಲ್ಲೆಯ ಲ್ಲಿ ಯಾವುದೇ ಪ್ರಾಣಹಾನಿ ಅಥವಾ ಆಸ್ತಿ ನಷ್ಟ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕಂಪನವು ಬೆಳಿಗ್ಗೆ 10.05 ಕ್ಕೆ ದಾಖಲಾಗಿದೆ, ಅದರ ಕೇಂದ್ರಬಿಂದು ರಾಪರ್‌ನ ಪಶ್ಚಿಮ–ನೈಋತ್ಯ ಪಶ್ಚಿಮಕ್ಕೆ 12 ಕಿಮೀ ದೂರದಲ್ಲಿದೆ ಎಂದು ಗಾಂಧಿನಗರ ಮೂಲದ ಐಎಸ್‌ಆರ್ ತಿಳಿಸಿದೆ. ಈ ತಿಂಗಳಿನಲ್ಲಿ ಇದುವರೆಗೆ ರಾಜ್ಯದ ಸೌರಾಷ್ಟ್ರ–ಕಚ್ ಪ್ರದೇಶದಲ್ಲಿ ದಾಖಲಾದ 3 ಕ್ಕಿಂತ ಹೆಚ್ಚು ತೀವ್ರತೆಯ ನಾಲ್ಕನೇ ಕಂಪನವಾಗಿದೆ ಎಂದು ಐಎಸ್‌ಆರ್ ಡೇಟಾ ತೋರಿಸಿದೆ. ಗುಜರಾತ್‌ನಲ್ಲಿ ಭೂಕಂಪದ ಅಪಾಯ ತುಂಬಾ ಹೆಚ್ಚಾಗಿದೆ.

ಗುಜರಾತ್ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಒದಗಿಸಿದ ಮಾಹಿತಿಯ ಪ್ರಕಾರ, ಕಳೆದ 200 ವರ್ಷಗಳಲ್ಲಿ ಒಟ್ಟು ಒಂಬತ್ತು ಪ್ರಮುಖ ಭೂಕಂಪಗಳನ್ನು ಅನುಭವಿಸಿದೆ. 2001 ರ ಕಚ್ ಭೂಕಂಪವು ಕಳೆದ ಎರಡು ಶತಮಾನಗಳಲ್ಲಿ ಭಾರತದಲ್ಲಿ ಮೂರನೇ ಅತಿದೊಡ್ಡ, ಎರಡನೇ ಅತ್ಯಂತ ವಿನಾಶಕಾರಿ ಭೂಕಂಪವಾಗಿದೆ ಎಂದು ಅದು ಹೇಳಿದೆ. 2001 ರ ಜನವರಿ 26 ರಂದು, ಗುಜರಾತ್ ಕಚ್‌ನ ಭಚೌ ಬಳಿ 6.9 ತೀವ್ರತೆಯ ಭೂಕಂಪನದಿಂದ ಆಘಾತಕ್ಕೊಳಗಾಯಿತು, ಇದು ಇಡೀ ರಾಜ್ಯದ ಮೇಲೆ ಪರಿಣಾಮ ಬೀರಿತು. ಜಿಎಸ್‌ಡಿಎಂಎ ನೀಡಿದ ಮಾಹಿತಿಯ ಪ್ರಕಾರ ಭೂಕಂಪವು ಸುಮಾರು 13,800 ಜನರು ಸಾವನ್ನಪ್ಪಿದ್ದರು ಮತ್ತು 1.67 ಲಕ್ಷ ಜನರು ಗಾಯಗೊಂಡಿದ್ದರು.

### ಕಲ್ಲಿದ್ದಲು ಗಣಿಯಲ್ಲಿ ಸ್ಫೋಟ ಸಾವಿನ ಸಂಖ್ಯೆ 38ಕ್ಕೆ ಏರಿಕೆ

**ಟೆಹರಾನ್:** ಪೂರ್ವ ಇರಾನ್ ಕಲ್ಲಿದ್ದಲು ಗಣಿಯೊಂದರಲ್ಲಿ ಶನಿವಾರ ರಾತ್ರಿ ಸಂಭವಿಸಿದ ಸ್ಫೋಟದಲ್ಲಿ ಮೃತಪಟ್ಟಿರುವ ಮತ್ತಷ್ಟು ಮಂದಿ ಕಾರ್ಮಿಕರ ಶವಗಳನ್ನು ರಕ್ಷಣಾ ತಂಡದವರು ಸೋಮವಾರ ವಶಪಡಿಸಿಕೊಂಡಿದ್ದು, ಮೃತರ ಸಂಖ್ಯೆ 38ಕ್ಕೆ ಏರಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಟೆಹರಾನ್‌ನಿಂದ 540 ಕಿ.ಮೀ. ದೂರದಲ್ಲಿರುವ ತಬಾಸ್ ಕಲ್ಲಿದ್ದಲು ಗಣಿಯಲ್ಲಿ ಮಿಥೇನ್ ಅನಿಲ ಸೋರಿಕೆಯಿಂದ ಈ ಸ್ಫೋಟ ಸಂಭವಿಸಿದ್ದು, ಇನ್ನೂ 14 ಜನ ಗಣಿ ಕಾರ್ಮಿಕರು ನೆಲದಡಿ ಸಿಲುಕಿದ್ದಾರೆ ಎಂದು ಶಂಕಿಸಲಾಗಿದೆ.

### ಪ್ಯಾಲೆಸ್ಟೀನ್ ಅಧ್ಯಕ್ಷ ಅಬ್ಬಾಸ್ ಭೇಟಿ ಗಾಜಾ ಪರಿಸ್ಥಿತಿಯ ಬಗ್ಗೆ ಕಳವಳ

**ನ್ಯೂಯಾರ್ಕ್:** ಪ್ಯಾಲೆಸ್ಟೀನ್ ಅಧ್ಯಕ್ಷ ಮಹಮೂದ್ ಅಬ್ಬಾಸ್ ಅವರನ್ನು ನ್ಯೂಯಾರ್ಕ್‌ನಲ್ಲಿ ಭೇಟಿಯಾದ ಪ್ರಧಾನಿ ನರೇಂದ್ರ ಮೋದಿ, ಯುದ್ಧಪೀಡಿತ ಗಾಜಾ ಪರಿಸ್ಥಿತಿಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಆದಷ್ಟು ಬೇಗನೆ ಶಾಂತಿ ಮತ್ತು ಸ್ಥಿರತೆ ನೆಲೆಸುವಂತೆ ಮಾಡಲು ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದ್ದಾರೆ. ಅಮೆರಿಕ ಪ್ರವಾಸದಲ್ಲಿರುವ ಮೋದಿ ವಿಶ್ವಸಂಸ್ಥೆಯ ಮಹಾ ಅಧಿವೇಶನದ ವೇಳೆ ವಿವಿಧ ದೇಶಗಳ ಗಣ್ಯರನ್ನು ಭೇಟಿಯಾಗಿದ್ದಾರೆ. ಅಬ್ಬಾಸ್ ಅವರನ್ನು ಭೇಟಿಯಾದ ಬಗ್ಗೆ ಟ್ವಿಟ್ ಮಾಡಿರುವ ಅವರು, 'ಅಧ್ಯಕ್ಷ ಮಹಮೂದ್ ಅಬ್ಬಾಸ್ ಅವರನ್ನು ನ್ಯೂಯಾರ್ಕ್‌ನಲ್ಲಿ ಭೇಟಿಯಾದೆ. ಗಾಜಾದಲ್ಲಿ ಶೀಘ್ರದಲ್ಲೇ ಶಾಂತಿ ಮತ್ತು ಸ್ಥಿರತೆ ನೆಲೆಗೊಳ್ಳುವಂತೆ ಮಾಡಲು ಭಾರತ ಬೆಂಬಲ ನೀಡಲಿದೆ ಎಂಬುದನ್ನು ಪುನರುಚ್ಚರಿಸಿದ್ದೇನೆ. ದೀರ್ಘಕಾಲದ ಸ್ನೇಹ ಬಲಪಡಿಸುವ ನಿಟ್ಟಿನಲ್ಲಿ ಚರ್ಚಿಸಿದ್ದೇವೆ' ಎಂದು ತಿಳಿಸಿದ್ದಾರೆ. ವಿದೇಶಾಂಗ ಇಲಾಖೆಯ ವಕ್ತಾರ ರಣಧೀರ್ ಜೈಸ್ವಾಲ್, 'ವಿಶ್ವಸಂಸ್ಥೆ ಮಹಾ ಅಧಿವೇಶನದ ಸಂದರ್ಭದಲ್ಲಿ ಅಬ್ಬಾಸ್ ಅವರನ್ನು ಭೇಟಿಯಾದ ಪ್ರಧಾನಿ, ಗಾಜಾದಲ್ಲಿನ ಮಾನವೀಯ ಪರಿಸ್ಥಿತಿಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಪ್ಯಾಲೆಸ್ಟೀನ್ ಜನರಿಗೆ ಬೆಂಬಲ ಮುಂದುವರಿಸುವುದಾಗಿ ಒತ್ತಿ ಹೇಳಿದ್ದಾರೆ.

### 300ಕ್ಕೂ ಹೆಚ್ಚು ಹಿಜ್ಬುಲ್ಲಾ ನೆಲೆಗಳ ಮೇಲೆ ಇಸ್ರೇಲ್ ವೈಮಾನಿಕ ದಾಳಿ

**ಲೆಬನಾನ್:** ಸೋಮವಾರ ನೂರಾರು ಹಿಜ್ಬುಲ್ಲಾ ಗುರಿಗಳ ಮೇಲೆ ಇಸ್ರೇಲ್ ತನ್ನ ಅತ್ಯಂತ ವ್ಯಾಪಕವಾದ ವೈಮಾನಿಕ ದಾಳಿಯನ್ನು ನಡೆಸಿದ ಕೆಲವೇ ಗಂಟೆಗಳ ನಂತರ, ಶಿಯಾ ಇಸ್ಲಾಮಿಕ್ ರಾಜಕೀಯ ಪಕ್ಷವು ದಾಳಿಯಲ್ಲಿ ಕನಿಷ್ಠ 100 ಜನರು ಸಾವನ್ನಪ್ಪಿದ್ದಾರೆ ಎಂದು ಹೇಳಿಕೊಂಡಿದೆ. ಗಾಝಾದಲ್ಲಿ ಇಸ್ರೇಲ್‌ನೊಂದಿಗೆ ಯುದ್ಧ ನಡೆ ಸುತ್ತಿರುವ ತನ್ನ ಮಿತ್ರ ಹಮಾಸ್ಗೆ ಬೆಂಬಲವಾಗಿ ಹಿಜ್ಬುಲ್ಲಾ ಇಸ್ರೇಲ್ ಮೇಲೆ ರಾಕೆಟ್‌ಗಳನ್ನು ಹಾರಿಸುತ್ತಿರುವ ತನ್ನ ಉತ್ತರ ಗಡಿಯತ್ತ ತನ್ನ ಗಮನವನ್ನು ಕೇಂದ್ರೀಕರಿಸುತ್ತಿದ್ದಂತೆ, ಸುಮಾರು ಒಂದು ವರ್ಷದ ಸಂಘರ್ಷದಲ್ಲಿ ಕೆಲವು ಭಾರಿ ಗಡಿಯಾಚೆಗಿನ ಗುಂಡಿನ ವಿನಿಮಯಗಳ ಮಧ್ಯೆ ಇತ್ತೀಚಿನ ದಾಳಿಗಳು ನಡೆದಿವೆ. ನಾವು ಲೆಬನಾನ್‌ನಲ್ಲಿ ನಮ್ಮ ದಾಳಿಯನ್ನು ಆಳಗೊಳಿಸುತ್ತಿದ್ದೇವೆ, ಉತ್ತರದ ನಿವಾಸಿಗಳನ್ನು ಸುರಕ್ಷಿತವಾಗಿ ತಮ್ಮ ಮನೆಗಳಿಗೆ ಮರಳಿಸುವ ನಮ್ಮ ಗುರಿಯನ್ನು ಸಾಧಿಸುವವರೆಗೂ ಕ್ರಮಗಳು ಮುಂದುವರಿಯುತ್ತವ ಎಂದು ಇಸ್ರೇಲ್ ರಕ್ಷಣಾ ಸಚಿವ ಯೋವ್ ಗ್ಯಾಲಂಟ್ ಸೋಮವಾರ ತಮ್ಮ ಕಚೇರಿ ಪ್ರಕಟಿಸಿದ ವೀಡಿಯೊದಲ್ಲಿ ತಿಳಿಸಿದ್ದಾರೆ.

## ವಿನಯ್ ರಾಜ್‌ಕುಮಾರ್‌ಗೆ ದುನಿಯಾ ವಿಜಯ್ ಆಯಕ್ಷನ್ ಕಟ್



ಸಲಗ, ಭೀಮ ಚಿತ್ರದ ಮೂಲಕ ನಟನೆಯ ಜೊತೆಗೆ ನಿರ್ದೇಶಕನಾಗಿಯೂ ದುನಿಯಾ ವಿಜಯ್ ಸೈ ಎನಿಸಿಕೊಂಡಿದ್ದಾರೆ. ಇದೀಗ ವಿನಯ್ ರಾಜ್‌ಕುಮಾರ್‌ಗೆ ಆಯಕ್ಷನ್ ಕಟ್ ಹೇಳೋಕೆ ವಿಜಯ್ ರೆಡಿಯಾಗಿದ್ದಾರೆ. ಈ ಕುರಿತು ಸೋಶಿಯಲ್ ಮೀಡಿಯಾದಲ್ಲಿ ನಟ ಮಾಹಿತಿ ನೀಡಿದ್ದಾರೆ.

ವಿನಯ್ ರಾಜ್‌ಕುಮಾರ್ ಅವರು ವಿಜಯ್ ನಿರ್ದೇಶನದ 'ಸಿಟಿ ಲೈಟ್ಸ್' ಚಿತ್ರತಂಡಕ್ಕೆ ಸಾಥ್ ನೀಡಿರೋದಾಗಿ ತಿಳಿಸಿದ್ದಾರೆ. ವಿಜಯ್ ನಿರ್ದೇಶನದ 3ನೇ ಚಿತ್ರಕ್ಕೆ ಪುತ್ರಿ, ಮೋನಿಷಾಗೆ ಡೈರೆಕ್ಟರ್ ಮಾಡುತ್ತಿರೋದು ವಿಶೇಷವಾಗಿದೆ. ಈ ಚಿತ್ರದಲ್ಲಿ ವಿನಯ್ ರಾಜ್‌ಕುಮಾರ್ ಪಾತ್ರ ಹೇಗಿರಲಿದೆ ಎಂಬುದು ರಿವೀಲ್ ಆಗಿಲ್ಲ. ನಟ ತಂಡ ಸೇರಿರುವ ಬಗ್ಗೆ ಮಾಹಿತಿ ನೀಡಿದ್ದಾರೆ.

ಇತ್ತೀಚೆಗೆ ಮೋನಿಷಾ ನಟಿಸುತ್ತಿರುವ ಸಿನಿಮಾದ ಫಸ್ಟ್ ಲುಕ್ ರಿಲೀಸ್ ಮಾಡಿದ್ದರು. ಹಳ್ಳಿ ಹುಡುಗಿಯ ಮುಗ್ಧ ಕಥೆಯನ್ನು ಈ ಸಿನಿಮಾ ಒಳಗೊಂಡಿದೆ. ಮೋನಿಷಾ ನಟನೆಯ ಮೊದಲ ಸಿನಿಮಾಗೆ 'ಸಿಟಿ ಲೈಟ್ಸ್' ಎಂದು ಟೈಟಲ್ ಇಡಲಾಗಿದ್ದು, 'ಜವಾಬ್ದಾರಿ ದೀಪಗಳು' ಅನ್ನೋ ಟ್ಯಾಗ್ ಲೈನ್ ಕೂಡ ಈ ಸಿನಿಮಾಕ್ಕಿದೆ.



## ಮತ್ತೆ ಬಾತ್‌ರೂಮ್ ರೀಲ್ಸ್ ಶೇರ್ ಮಾಡಿದ ನಿವೇದಿತಾ ಗೌಡ

ಚಂದನ್ ಶೆಟ್ಟಿ ಜೊತೆಗಿನ ಡಿವೋರ್ಸ್ ನಂತರ ನಿವೇದಿತಾ ಗೌಡ ಸದಾ ಒಂದಲ್ಲಾ ಒಂದು ವಿಚಾರವಾಗಿ ಸುದ್ದಿಯಾಗುತ್ತಲೇ ಇರುತ್ತಾರೆ. ಇದೀಗ ಟ್ರೋಲ್‌ಗೆ ಡೋಂಟ್ ಕೇರ್ ಎನ್ನುತ್ತಾ ಮತ್ತೊಂದು ಬಾತ್‌ರೂಮ್ ರೀಲ್ಸ್ ಅನ್ನು ನಟಿ ಶೇರ್ ಮಾಡಿದ್ದಾರೆ. ದಾಂಪತ್ಯಕ್ಕೆ ಅಂತ್ಯ ಹಾಡಿದ ಮೇಲೆ ನಟಿ, ಮತ್ತಷ್ಟು ಸೋಶಿಯಲ್ ಮೀಡಿಯಾದಲ್ಲಿ ಸಕ್ರಿಯರಾಗಿದ್ದಾರೆ. ಸಖತ್ ಹಾಟ್ ಆಗಿ ಕಾಣಿಸಿಕೊಳ್ಳುತ್ತಿರುವ ನಿವೇದಿತಾ ಈಗ ಕಿವಿ ಮೇಲೆ ಫ್ಲವರ್ ಇಟ್ಟುಕೊಂಡು ಬಾತ್‌ರೂಮ್‌ನಲ್ಲಿ ರೀಲ್ಸ್ ಮಾಡಿದ್ದಾರೆ. ಟ್ರೋಲ್ ಮಾಡುವವರಿಗೆ, ನೆಗೆಟಿವ್ ಕಾಮೆಂಟ್ ಮಾಡುವವರಿಗೆ ತಲೆಕೆಡಿಸಿಕೊಳ್ಳದೆ ಹೊಸ ರೀಲ್ಸ್‌ನಲ್ಲಿ ನಟಿ ಮಿಂಚಿದ್ದಾರೆ.

ನಟಿಯ ರೀಲ್ಸ್ ನೋಡಿ ಮುಂದಿನ ನಿಮ್ಮ ಕರಿಮಣಿ ಮಾಲೀಕ ಯಾರು ಎಂದೆಲ್ಲಾ ನೆಟ್ಟಿಗರು ಕಾಲೆಳೆದಿದ್ದಾರೆ. ಈ ರೀಲ್ಸ್ ಸೋಶಿಯಲ್ ಮೀಡಿಯಾದಲ್ಲಿ 6 ಮಿಲಿಯನ್‌ಗೂ ಅಧಿಕ ವಿವ್ಸ್ ಪಡೆದಿದೆ. ಅಂದಹಾಗೆ, ಚಂದನ್ ಶೆಟ್ಟಿ ಜೊತೆ 'ಮುದ್ದು ರಾಕ್ಷಸಿ' ಸಿನಿಮಾ, ಸೃಜನ್ ಲೋಕೇಶ್ ಜೊತೆ 'ಜಿಎಸ್‌ಟಿ' ಸಿನಿಮಾದಲ್ಲಿ ನಿವೇದಿತಾ ಮುಖ್ಯ ಪಾತ್ರದಲ್ಲಿ ನಟಿಸಿದ್ದಾರೆ.

## ಹೊಟ್ಟೆ ಮೇಲೆ ರೇಖಾ ಚಿತ್ರ ಬಿಡಿಸಿಕೊಂಡ ಗರ್ಭಿಣಿ ರಿಚಾ ಚಡ್ಡಾ!

### ಟ್ರೋಲ್‌ಗೆ ಡೋಂಟ್ ಕೇರ್

ತನ್ನ ಬೋಲ್ಡ್ ಅವತಾರದಿಂದ ಬಾಲಿವುಡ್‌ನಲ್ಲಿ ಸೌಂಡ್ ಮಾಡುತ್ತಿರುವ ನಟಿ ರಿಚಾ ಚಡ್ಡಾ. ಇತ್ತೀಚೆಗಷ್ಟೇ 'ಹೀರಾಮಂಡಿ' ಚಿತ್ರದ ಮೂಲಕ ಸೌಂಡ್ ಮಾಡಿದ್ದ ನಟಿ. ಇದೀಗ ರಿಚಾ ಚಡ್ಡಾ ತಾನು ಮಗುವಿಗೆ ಜನ್ಮ ನೀಡೋದ್ದಕ್ಕೂ ಮುನ್ನ ತೆಗೆಸಿಕೊಂಡ ವಿಭಿನ್ನ ಬೇಬಿ ಬಂಪ್ ಫೋಟೋಗಳನ್ನ ಇನ್ಸಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಇತ್ತೀಚೆಗೆ ಗರ್ಭಿಣಿ ನಟಿಯರು ತಮ್ಮದೇ ಆದ ಥೀಮ್‌ನಲ್ಲಿ ಬೇಬಿ ಬಂಪ್ ಪ್ರದರ್ಶಿಸುವುದು ಸಾಮಾನ್ಯವಾಗಿದೆ. ಕೆಲ ನಟಿಯರು ಇನ್ನೂ ಮುಂದಕ್ಕೆ ಹೋಗಿ ಕ್ರಿಯೇಟಿವ್ ಆಗಿ ಫೋಟೋಶೂಟ್ ಮಾಡಿಸುತ್ತಾರೆ. ಇದೀಗ ರಿಚಾ ಚಡ್ಡಾ ಇಂಥದ್ದೇ ಒಂದು ವಿಭಿನ್ನ ಪ್ರಯೋಗ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಸೆನ್ಸೇಷನ್ ಹುಟ್ಟಿಸಿದ್ದಾರೆ. ತುಂಬು ಗರ್ಭಿಣಿಯಾಗಿದ್ದಾಗ ರಿಚಾ ಚಡ್ಡಾ ಹೊಟ್ಟೆ ಮೇಲೆ ಚಿತ್ತಾರ ಬಿಡಿಸಿಕೊಂಡು ಬೇಬಿ ಬಂಪ್ ಪ್ರದರ್ಶಿಸಿದ್ದಾರೆ.

ತಿಂಗಳ ಹಿಂದೆ ಹೆಣ್ಣು ಮಗುವಿಗೆ ಜನ್ಮ ನೀಡಿರುವ ರಿಚಾ ಚಡ್ಡಾ 9 ತಿಂಗಳ ಗರ್ಭಿಣಿಯಾಗಿದ್ದಾಗ ತಮ್ಮ ಎದೆಯಿಂದ ಹೊಟ್ಟೆಯವರೆಗೆ ವಿಭಿನ್ನ ಚಿತ್ರ ಬಿಡಿಸಿಕೊಂಡಿದ್ದಾರೆ. ಈ ಫೋಟೋಗಳನ್ನ ತಮ್ಮ ಇನ್ಸಾಗ್ರಾಂ ಖಾತೆಯಲ್ಲಿ ಪೋಸ್ಟ್ ಮಾಡಿರುವ ರಿಚಾ ಚಡ್ಡಾ ತಾವು ಬಿಡಿಸಿಕೊಂಡ ಚಿತ್ರದ ವಿಶೇಷತೆಗಳನ್ನ ಹೇಳಿಕೊಂಡಿದ್ದಾರೆ. ಈ ರೇಖಾ ಚಿತ್ರವು ದೈವಿಕ ಸ್ತ್ರೀಲಿಂಗದ ಸಂಕೇತದ ಥೀಮ್‌ನಿಂದ ಚಿತ್ರಿಸಲಾಗಿದೆ ಎಂದಿದ್ದಾರೆ. ಜೊತೆಗೆ ತನ್ನ ಎಳೆ ಮಗುವಿಗೆ ವಿಭಿನ್ನವಾಗಿ ವಿಶ್ ಮಾಡಿದ್ದಾರೆ. ಹ್ಯಾಪಿ ಡಾಟರ್ಸ್ ಡೇ ಮಗಳೇ ಒಂದಿನ ನಾವಿಬ್ಬರೂ ಒಟ್ಟಿಗೆ ಕುಳಿತು ಈ ಚಿತ್ರವನ್ನ ನೋಡುತ್ತೇವೆ ಎಂದು ಗೊತ್ತಿತ್ತು. ಆಗ ನೀನು ಹೊಟ್ಟೆಯೊಳಗೆ ಪೋಸ್ ನೀಡುತ್ತಿದ್ದರೆ ನಾನು ಹೊರಗಿನಿಂದ ಪ್ರಜ್ವಲಿಸುತ್ತಿದ್ದೆ, ಇದನ್ನು ಹೊರಗಿನವರು ನೋಡಬಹುದು ಆದರೆ ಮಾತನಾಡಲು ಸಾಧ್ಯವಿಲ್ಲ ಎಂದು ಹೇಳಿ ಕಾಮೆಂಟ್ಸ್ ಆಫ್ ಮಾಡಿದ್ದಾರೆ.




## ಆ ದೊಡ್ಡ ಸ್ಟಾರ್ ಜೊತೆ ನಟಿಸುತ್ತಿಲ್ಲ: ಸಿಮ್ರಾನ್ ಫುಲ್ ಗರಂ..!



ಕಾಲಿವುಡ್‌ನ ನಟ ವಿಜಯ್ ದಳಪತಿ ನಟನೆಯ ಕೊನೆಯ ಸಿನಿಮಾ 'ದಳಪತಿ 69. ಹಾಗಾಗಿನೇ ಈ ಸಿನಿಮಾ ಮೇಲೆ ಅಭಿಮಾನಿಗಳು ಬೆಟ್ಟದಷ್ಟು ನಿರೀಕ್ಷೆಗಳನ್ನ ಇಟ್ಟುಕೊಂಡಿದ್ದಾರೆ. ಆದ್ರೆ, ಅಸಲಿ ಮ್ಯಾಟರ್ ಇದಲ್ಲ. ಈ ಸಿನಿಮಾದಲ್ಲಿ ವಿಜಯ್‌ಗೆ ಜೋಡಿಯಾಗಿ ಸಿಮ್ರಾನ್ ಕಾಣಿಸಿಕೊಳ್ಳುತ್ತಿದ್ದಾರೆ ಅನ್ನೋ ಮಾತುಗಳು ಹರಿದಾಡ್ತಿದ್ದವು. ಆದ್ರೆ, ಈ ವಿಷಯ ಕೇಳಿ ನಟಿ ಸಿಮ್ರಾನ್ ಫುಲ್ ಗರಂ ಆಗಿದ್ದಾರೆ. ಹೌದು, ಸುಳ್ಳು ಸುದ್ದಿ ಹರಡುವವರ ವಿರುದ್ಧ ಸಿಮ್ರಾನ್ ಕಿಡಿಕಾರಿದ್ದಾರೆ. 'ಪ್ರತಿ ಸಲ ಈ ಥರದ ಸುಳ್ಳು ಸುದ್ದಿ ಕೇಳಿ ಕೇಳಿ ಸಾಕಾಗಿ ಹೋಗಿದೆ. ಯಾರೋ ಹೇಳುವುದನ್ನ ಕೇಳಿ ನನ್ನ ಸ್ನೇಹಿರು ನಂಬುವುದು ನನಗೆ ನೋವುಂಟು ಮಾಡಿದೆ. ಇಲ್ಲಿಯವರೆಗೆ ನಾನು ಸೈಲಾಂಟಾಗಿದ್ದೆ. ಯಾವ ದೊಡ್ಡ ಸ್ಟಾರ್ ನಟರ ಜೊತೆ ಸಿನಿಮಾ ಮಾಡುವ ಆಸೆ ನನಗಿಲ್ಲ. ನನ್ನ ಗಮನ ಬೇರೆಕಡೆ ಇದೆ. ನಾನು ಈಗಾಗಲೇ ಸಾಕಷ್ಟು ಸಿನಿಮಾಗಳನ್ನ ವಿಜಯ್ ಜೊತೆಗೆ ಮಾಡಿದ್ದೀನಿ' ಅಂತಾ ಟ್ವಿಟ್ ಮೂಲಕ ಸ್ಪಷ್ಟನೆ ನೀಡಿದ್ದಾರೆ ಸಿಮ್ರಾನ್. ವಿಜಯ್ ದಳಪತಿ ಜೊತೆ ಈಗಾಗಲೇ ಸಾಕಷ್ಟು ಸಿನಿಮಾಗಳನ್ನ ಮಾಡಿದ್ದೇನೆ. ಯಾವ ಸ್ಟಾರ್ ನಟರ ಸಿನಿಮಾದಲ್ಲಿ ನಟಿಸುವ ಬಯಕೆ ನನಗಿಲ್ಲ ಎಂದು ಕಡ್ಡಿ ತುಂಡಾಗುವ ಹಾಗೆ ತಮ್ಮ ಸಾಮಾಜಿಕ ಜಾಲತಾಣದ ಮೂಲಕ ರೂರಸ್ ಹರಡುವವರಿಗೆ ಸಿಮ್ರಾನ್ ಉತ್ತರ ಕೊಟ್ಟಿದ್ದಾರೆ. '

## ಪವನ್ ಕಲ್ಯಾಣ್ ನಟನೆಯ ಹರಿಹರ ವೀರಮಲ್ಲು ರಿಲೀಸ್‌ಗೆ ಮುಹೂರ್ತ ಫಿಕ್ಸ್

ಟಾಲಿವುಡ್ ನಟ ಪವನ್ ಕಲ್ಯಾಣ್ ಸಿನಿಮಾಗಳೆಂದರೆ ಕೊಂಚ ಡಿಫರೆಂಟ್. ಸಿನಿಮಾದ ಮೇಕಿಂಗ್, ಮಾಸ್ ಎಲಿಮೆಂಟ್, ಸಾಂಗ್ಸ್ ಎಲ್ಲಾವೂ ಕೂಡಾ ಡಿಫರೆಂಟಾಗಿಯೇ ಇರುತ್ತದೆ. ಅದರ ಜೊತೆಗೆ ಪವನ್ ಕಲ್ಯಾಣ್ ಕ್ಯಾರೆಕ್ಟರ್ ಅದಕ್ಕೆ ತಕ್ಕದಾದ ಟೈಟಲ್ ಕೂಡ ಸಖತ್ ಪವರ್‌ಫುಲ್ ಆಗಿಯೇ ಇರುತ್ತದೆ. ಸದ್ಯ ಪವನ್ ಕಲ್ಯಾಣ್ ಅಭಿನಯದ 'ಹರಿಹರ ವೀರಮಲ್ಲು' ಸಿನಿಮಾ ಸಖತ್ ಸುದ್ದಿಯಲ್ಲಿದೆ. ಚಿತ್ರದ ರಿಲೀಸ್‌ಗೆ ಮುಹೂರ್ತ ಫಿಕ್ಸ್ ಆಗಿದೆ. 'ಭೀಮ್ಲಾನಾಯಕ್' ಹಾಗೂ 'ಬ್ರೋ' ಸಿನಿಮಾದ ಬಳಿಕ 'ಹರಿಹರ ವೀರಮಲ್ಲು' ಚಿತ್ರವನ್ನು ಕೈಗೆತ್ತಿಕೊಂಡಿದ್ದಾರೆ. ಅಂದಹಾಗೆ, 17ನೇ ಶತಮಾನದ ಮೊಘಲ್ ಸಾಮ್ರಾಜ್ಯದ ಐತಿಹಾಸಿಕ ಕಾಲ್ಪನಿಕ ಕಥೆಯನ್ನು 'ಹರಿಹರ ವೀರಮಲ್ಲು' ಒಳಗೊಂಡಿದೆ. ಸದ್ಯ ಈ ಸಿನಿಮಾದ ರಿಲೀಸ್ ಡೇಟ್ ಅನೌನ್ಸ್ ಆಗಿದ್ದು, 2025ರ ಮಾರ್ಚ್ 28ಕ್ಕೆ ವಿಶ್ವದಾದ್ಯಂತ ದರ್ಶನ ಕೊಡಲಿದೆ. ಈ ಸುದ್ದಿ ಕೇಳಿ ಪವನ್ ಕಲ್ಯಾಣ್ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. 'ಹರಿಹರ ವೀರಮಲ್ಲು' ಭಾಗ-1 ಸಿನಿಮಾವನ್ನು ಕ್ರಿಶ್ ಜಗರ್ಲಮುಡಿ ನಿರ್ದೇಶನ ಮಾಡಿದ್ದಾರೆ. ಇನ್ನೂ 'ಬಾಹುಬಲಿ' ಹಾಗೂ 'ಆರ್‌ಆರ್‌ಆರ್' ಸಿನಿಮಾಗಳಿಗೆ ಸಂಗೀತ ನೀಡಿದ ಎಂ.ಎಂ ಕೀರವಾಣಿ ಅವರ ಸಂಗೀತ ನಿರ್ದೇಶನ ಈ ಸಿನಿಮಾಗಿದೆ.



ಪವನ್ ಕಲ್ಯಾಣ್ ಜೊತೆ ಕಾದಾಡೋಕೆ ಮೊಘಲರ ದೊರೆಯಾಗಿ ಬಾಲಿವುಡ್‌ನ ಬಾಬಿ ಡಿಯೋಲ್ ಕಾಣಿಸಿಕೊಂಡಿದ್ದಾರೆ. 'ಹರಿಹರ ವೀರಮಲ್ಲು' ಐತಿಹಾಸಿಕ ಕಥೆಯ ಜೊತೆಗೆ ಒಂದಷ್ಟು ಕಾಲ್ಪನಿಕ ಅಂಶಗಳು ಒಳಗೊಂಡಿದ್ದು, ಫ್ಯಾನ್ಸ್‌ಗೆ ಹೊಸ ರೀತಿಯ ಅನುಭವ ನೀಡಲಿವೆ. ಈಗಾಗಲೇ ಬಿಟ್ಟಿರುವ ಸಿನಿಮಾದ ತುಣುಕುಗಳಿಂದಲೇ ಗಮನ ಸೆಳೆದಿದ್ದು, ಇನ್ನೇನು ಮುಂದಿನ ವರ್ಷ ಮಾರ್ಚ್‌ನಲ್ಲಿ ಚಿತ್ರಮಂದಿರಲ್ಲಿ ಅಬ್ಬರಿಸಲಿದೆ.

## 3 ಮಾದರಿಯಲ್ಲೂ ಬುಮ್ರಾ ಬೆಸ್ಟ್ ಬೌಲರ್ ಆಸೀಸ್ ಮಾಜಿ ನಾಯಕ

ಬುಮ್ರಾ ಒಬ್ಬ ಶ್ರೇಷ್ಠ ಬೌಲರ್. ಹೊಸ ಚೆಂಡಿನಲಿರಲಿ, ಸ್ವಲ್ಪ ಅಥವಾ ಹಳೆಯ ಚೆಂಡಿನಲ್ಲಿರಲಿ, ಬ್ಯಾಟ್ಸ್‌ಮನ್‌ಗೆ ಎಲ್ಲಾ ರೀತಿಯಲ್ಲೂ ತೊಂದರೆ ಕೊಡುವ ಪ್ರತಿಭೆ ಬುಮ್ರಾ ಅವರಲ್ಲಿದೆ. ಬುಮ್ರಾ ಎಲ್ಲಾ ಮೂರು ಮಾದರಿಗಳಲ್ಲಿ ಅತ್ಯುತ್ತಮ ವೇಗದ ಬೌಲರ್. ಅವರ ವಿರುದ್ಧ ಆಡುವುದು ಯಾವಾಗಲೂ ಸವಾಲಿನ ಸಂಗತಿ ಎಂದು ಸ್ಟೀವ್ ಸ್ಮಿತ್ ಹೇಳಿದ್ದಾರೆ.

ಪ್ರಸ್ತುತ ಬಾಂಗ್ಲಾದೇಶ ವಿರುದ್ಧ ಟೆಸ್ಟ್ ಸರಣಿಯನ್ನು ಆಡುತ್ತಿರುವ ಟೀಂ ಇಂಡಿಯಾ ಈ ವರ್ಷದ ಕೊನೆಯಲ್ಲಿ ಆಸ್ಟ್ರೇಲಿಯಾ ವಿರುದ್ಧ ಐದು ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡಲಿದೆ. ಡಬ್ಲ್ಯುಟಿಸಿ ಫೈನಲ್ ದೃಷ್ಟಿಯಿಂದ ಈ ಸರಣಿ ಉಭಯ ತಂಡಗಳಿಗೂ ಅತ್ಯಂತ ಮಹತ್ವದಾಗಿದೆ.

ನವೆಂಬರ್ 22 ರಿಂದ ಪರ್ತ್‌ನಲ್ಲಿ ನಡೆಯಲಿರುವ ಮೊದಲ ಟೆಸ್ಟ್ ಪಂದ್ಯದೊಂದಿಗೆ ಸರಣಿ ಪ್ರಾರಂಭವಾಗಲಿದೆ. ಆದರೆ ಸರಣಿ ಆರಂಭಕ್ಕೂ ಮುನ್ನವೇ ಆಸೀಸ್ ಆಟಗಾರರ ಮೈಂಡ್ ಗೇಮ್ ಶುರುವಾಗಿದ್ದು, ಕೆಲವು ಆಟಗಾರರು ಟೀಂ ಇಂಡಿಯಾವನ್ನು ಸೋಲಿಸಿಯೇ ತೀರುತ್ತೇವೆ ಎಂಬ ಹೇಳಿಕೆ ನೀಡುತ್ತಿದ್ದರೆ, ಇನ್ನು ಕೆಲವು ಆಟಗಾರರು ಟೀಂ ಇಂಡಿಯಾ ಆಟಗಾರರ ಬಗ್ಗೆ ಹೊಗಳಿಕೆಯ ಮಾತುಗಳನ್ನಾಡುತ್ತಿದ್ದಾರೆ. ಅವರ ಸಾಲಿಗೆ ಇದೀಗ ಆಸೀಸ್ ತಂಡದ ಮಾಜಿ ನಾಯಕ ಸ್ಟೀವ್ ಸ್ಮಿತ್ ಸೇರಿದ್ದಾರೆ.

ಆಸೀಸ್ ಬ್ಯಾಟಿಂಗ್ ವಿಭಾಗದ ಪ್ರಮುಖ ಬೆನ್ನೆಲುಬಾಗಿರುವ ಸ್ಟೀವ್ ಸ್ಮಿತ್, ಟೀಂ ಇಂಡಿಯಾ ವೇಗಿ ಜಸ್ಪ್ರಿತ್ ಬುಮ್ರಾರನ್ನು ಹೊಗಳಿದ್ದು, ಪ್ರಸ್ತುತ ಕ್ರಿಕೆಟ್‌ನಲ್ಲಿ ಭಾರತದ ಜಸ್ಪ್ರಿತ್ ಬುಮ್ರಾ ಎಲ್ಲಾ ಸ್ವರೂಪಗಳಲ್ಲಿ ಅತ್ಯುತ್ತಮ ವೇಗದ ಬೌಲರ್ ಎಂದು ಬಣ್ಣಿಸಿದ್ದಾರೆ. ವಾಸ್ತವವಾಗಿ ಆಸ್ಟ್ರೇಲಿಯಾ ವಿರುದ್ಧ ಭಾರತ ಕಳೆದ ಎರಡು ಟೆಸ್ಟ್ ಸರಣಿಗಳನ್ನು ಗೆದ್ದುಕೊಂಡಿದೆ. ಈ ತಂಡದ ವಿರುದ್ಧ ಭಾರತ ಹ್ಯಾಟ್ರಿಕ್ ಗೆಲುವು ಸಾಧಿಸಬೇಕಾದರೆ, ಬುಮ್ರಾ ಕೊಡುಗೆ ಬಹಳ ಮುಖ್ಯ. ಆಸ್ಟ್ರೇಲಿಯಾದಲ್ಲಿ ಪ್ರದರ್ಶನ ನೀಡುವ ಜವಾಬ್ದಾರಿ ಬುಮ್ರಾ ಅವರ ಮೇಲಿದೆ. ಅದಕ್ಕೆ ಪೂರಕವಾಗಿ ಬಾಂಗ್ಲಾದೇಶ ವಿರುದ್ಧ ನಡೆಯುತ್ತಿರುವ ಟೆಸ್ಟ್ ಸರಣಿಯಲ್ಲೂ ಬುಮ್ರಾ ತಮ್ಮ ಕೈಚಳಕ ತೊರುತ್ತಿದ್ದಾರೆ. ಈ ನಡುವೆ ಕ್ರೀಡಾ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಸ್ಮಿತ್, ಬುಮ್ರಾ ಒಬ್ಬ ಶ್ರೇಷ್ಠ ಬೌಲರ್.

ಹೊಸ ಚೆಂಡಿನಲಿರಲಿ, ಸ್ವಲ್ಪ ಅಥವಾ ಹಳೆಯ ಚೆಂಡಿನಲ್ಲಿರಲಿ, ಬ್ಯಾಟ್ಸ್‌ಮನ್‌ಗೆ ಎಲ್ಲಾ ರೀತಿಯಲ್ಲೂ ತೊಂದರೆ ಕೊಡುವ ಪ್ರತಿಭೆ ಬುಮ್ರಾ ಅವರಲ್ಲಿದೆ. ಬುಮ್ರಾ ಎಲ್ಲಾ ಮೂರು ಮಾದರಿಗಳಲ್ಲಿ ಅತ್ಯುತ್ತಮ ವೇಗದ ಬೌಲರ್. ಅವರ ವಿರುದ್ಧ ಆಡುವುದು ಯಾವಾಗಲೂ ಸವಾಲಿನ ಸಂಗತಿ ಎಂದಿದ್ದಾರೆ. ಸ್ಟೀವ್ ಸ್ಮಿತ್ ಕಳೆದ ಕೆಲವು ಸರಣಿಗಳಲ್ಲಿ ತಂಡದ ಪರ ಆರಂಭಿಕರಾಗಿ ಕಣಕ್ಕಿಳಿಯುತ್ತಿದ್ದಾರೆ. ಹೀಗಾಗಿ ಭಾರತ ವಿರುದ್ಧದ ಟೆಸ್ಟ್ ಸರಣಿಯಲ್ಲೂ ಸ್ಮಿತ್ ಈ ಸ್ಥಾನದಲ್ಲಿ ಬ್ಯಾಟಿಂಗ್‌ಗೆ ಬರುವ ಸಾಧ್ಯತೆಗಳಿವೆ. ಡೇವಿಡ್ ವಾರ್ನರ್ ನಿವೃತ್ತಿಯ ನಂತರ, ಆಸ್ಟ್ರೇಲಿಯಾದಲ್ಲಿ ಆರಂಭಿಕ ಜೋಡಿಯ ಬಗ್ಗೆ ಚರ್ಚೆ ನಡೆಯುತ್ತಿದೆ. ಸ್ಮಿತ್ ಆಸ್ಟ್ರೇಲಿಯಾದ ಅನುಭವಿ ಬ್ಯಾಟ್ಸ್‌ಮನ್ ಆಗಿದ್ದು, ತಂಡದ ಪರ ಇದುವರೆಗೆ 109 ಟೆಸ್ಟ್‌ಗಳನ್ನು ಆಡಿದ್ದಾರೆ.



## ದುಲೀಪ್ ಟ್ರೋಫಿಯಲ್ಲಿ ಫೇಲ್; ದೇಶೀ ಟೂರ್ನಿಯತ್ತ ಶ್ರೇಯಸ್ ಅಯ್ಯರ್

ಟೀಂ ಇಂಡಿಯಾದಲ್ಲಿ ಶತಾಯಗತಾಯ ಸ್ಥಾನಗಿಟ್ಟಿಸಿಕೊಳ್ಳುವ ಸಂಕಲ್ಪ ತೊಟ್ಟಿರುವ ಶ್ರೇಯಸ್ ಅಯ್ಯರ್, ಇದೀಗ ಮತ್ತೊಂದು ದೇಶೀ ಟೂರ್ನಿಯನ್ನು ಆಡುವುದುಕ್ಕೆ ಸಜ್ಜಾಗಿದ್ದಾರೆ. ಇದೇ ಅಕ್ಟೋಬರ್ 1 ರಿಂದ ಇರಾನಿ ಕಪ್ ಆರಂಭವಾಗಲಿದ್ದು, ಈ ಪಂದ್ಯದಲ್ಲಿ ಅಯ್ಯರ್, ಮುಂಬೈ ತಂಡದ ಪರ ಕಣಕ್ಕಿಳಿಯುತ್ತಿದ್ದಾರೆ.

ಟೀಂ ಇಂಡಿಯಾದಲ್ಲಿ ಸ್ಥಾನ ಪಡೆಯುವ ಸಲುವಾಗಿ ಇತ್ತೀಚೆಗಷ್ಟೇ ಮುಕ್ತಾಯಗೊಂಡ ದೇಶೀ ಟೂರ್ನಿ ದುಲೀಪ್ ಟ್ರೋಫಿಯಲ್ಲಿ ಆಡಿದ್ದ ಶ್ರೇಯಸ್ ಅಯ್ಯರ್, ಇಡೀ ಟೂರ್ನಿಯಲ್ಲಿ ವಿಶೇಷವಾದದ್ದೇನು ಮಾಡಲಿಲ್ಲ. ಟೂರ್ನಿಯಲ್ಲಿ ಅರ್ಧಶತಕದ ಇನ್ನಿಂಗ್ಸ್ ಬಿಟ್ಟರೆ, ಅಯ್ಯರ್ ಬ್ಯಾಟ್‌ನಿಂದ ಯಾವುದೇ ಬಿಗ್ ಇನ್ನಿಂಗ್ಸ್ ಕಂಡುಬರಲಿಲ್ಲ. ಇತ್ತ ಅವರ ನಾಯಕತ್ವದ ತಂಡ ಕೂಡ ಚಾಂಪಿಯನ್ ಪಟ್ಟ ಅಲಂಕರಿಸಲಿಲ್ಲ.

ದುಲೀಪ್ ಟ್ರೋಫಿಯಲ್ಲಿ ಎಲ್ಲಾ ಮೂರು ಸುತ್ತುಗಳನ್ನು ಆಡಿದ್ದ ಶ್ರೇಯಸ್ ಅಯ್ಯರ್ ಈ ಮೂರು ಪಂದ್ಯಗಳ 6 ಇನ್ನಿಂಗ್ಸ್‌ಗಳಲ್ಲಿ 25.66 ರ ಕಳಪೆ ಸರಾಸರಿಯಲ್ಲಿ 154 ರನ್ ಗಳಿಸಿದರು. ಇದರಲ್ಲಿ 2 ಅರ್ಧ ಶತಕಗಳು ಸೇರಿದ್ದರೆ, ಎರಡು ಬಾರಿ ಅವರು ಖಾತೆ ತೆರೆಯದೆ ಔಟಾಗಿದ್ದರು. ಇದರ ಫಲವಾಗಿ ಶ್ರೇಯಸ್ ಅಯ್ಯರ್ ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯ 2ನೇ ಟೆಸ್ಟ್ ಪಂದ್ಯಕ್ಕೆ ತಂಡದಲ್ಲಿ ಸ್ಥಾನವನ್ನು ಪಡೆಯಲಿಲ್ಲ. ಇದೀಗ ಟೀಂ ಇಂಡಿಯಾದಿಂದ ದೀರ್ಘ ಕಾಲ ಹೊರಗುಳಿಯುವ ಆತಂಕದಲ್ಲಿರುವ ಅಯ್ಯರ್‌ಗೆ ಈ ವರ್ಷಾಂತ್ಯದಲ್ಲಿ ನಡೆಯಲ್ಲಿರುವ ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿಯಲ್ಲೂ ಅವಕಾಶ ಸಿಗುವುದು ಡೌಟ್ ಎನ್ನಲಾಗುತ್ತಿದೆ. ಹೀಗಾಗಿ ಟೀಂ ಇಂಡಿಯಾದಲ್ಲಿ ಶತಾಯಗತಾಯ ಸ್ಥಾನಗಿಟ್ಟಿಸಿಕೊಳ್ಳುವ ಸಂಕಲ್ಪ ತೊಟ್ಟಿರುವ ಶ್ರೇಯಸ್ ಅಯ್ಯರ್, ಇದೀಗ ಮತ್ತೊಂದು ದೇಶೀ ಟೂರ್ನಿಯನ್ನು ಆಡುವುದುಕ್ಕೆ ಸಜ್ಜಾಗಿದ್ದಾರೆ. ಇದೇ ಅಕ್ಟೋಬರ್ 1 ರಿಂದ ಇರಾನಿ ಕಪ್ ಆರಂಭವಾಗಲಿದ್ದು, ಈ ಪಂದ್ಯದಲ್ಲಿ ಅಯ್ಯರ್, ಮುಂಬೈ ತಂಡದ ಪರ ಕಣಕ್ಕಿಳಿಯುತ್ತಿದ್ದಾರೆ. ವಾಸ್ತವವಾಗಿ ಈ ಇರಾನಿ ಕಪ್ ಪಂದ್ಯವು ಹಾಲಿ ರಣಜಿ ಚಾಂಪಿಯನ್ ರೆಸ್ಟ್ ಆಫ್ ಇಂಡಿಯಾ ತಂಡದ ನಡುವೆ ನಡೆಯಲ್ಲಿದೆ. ಅದರಂತೆ ಈ ಬಾರಿಯ ರಣಜಿ ಚಾಂಪಿಯನ್ ಆಗಿರುವ ಮುಂಬೈ ತಂಡದ ಪರ ಅಯ್ಯರ್ ಆಡಲಿದ್ದಾರೆ. ಈ ವರ್ಷ ಮಾರ್ಚ್ 2024 ರಲ್ಲಿ ನಡೆದಿದ್ದ ರಣಜಿ ಟ್ರೋಫಿಯಲ್ಲಿ ಅಜಿಂಕ್ಯ ರಹಾನೆ ನಾಯಕತ್ವದಲ್ಲಿ ಮುಂಬೈ ತಂಡ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಕ್ರಿಕ್ ಬಝ್‌ನ ವರದಿ ಪ್ರಕಾರ ಇರಾನಿ ಕಪ್ ಪಂದ್ಯದಲ್ಲಿ ಅಜಿಂಕ್ಯ ರಹಾನೆ ಮುಂಬೈ ತಂಡದ ನಾಯಕತ್ವ ವಹಿಸಲಿದ್ದಾರೆ. ಇವರಲ್ಲದೇ ಶ್ರೇಯಸ್ ಅಯ್ಯರ್, ಶಾರ್ದೂಲ್ ಠಾಕೂರ್ ಕೂಡ ತಂಡದ ಭಾಗವಾಗಲು ಸಿದ್ಧರಾಗಿದ್ದಾರೆ.



## 2ನೇ ಟೆಸ್ಟ್ ಪಂದ್ಯಕ್ಕೆ ಶಕೀಬ್ ಅಲ್ ಹಸನ್ ಡೌಟ್ ಸೆಲೆಕ್ಟರ್ ಹೇಳಿದ್ದೇನು



ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಎರಡನೇ ಪಂದ್ಯ ಸೆಪ್ಟೆಂಬರ್ 27 ರಿಂದ ನಡೆಯಲಿದೆ. ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನಲ್ಲಿ ಎರಡೂ ತಂಡಗಳು ಮುಖಾಮುಖಿಯಾಗಲಿವೆ. ಸರಣಿಯ ಮೊದಲ ಪಂದ್ಯ ಗೆದ್ದಿರುವ ಟೀಂ ಇಂಡಿಯಾ, ಕ್ಲೀನ್ ಸ್ವೀಪ್ ಮೇಲೆ ಕಣ್ಣಿಟ್ಟಿದೆ. ಇತ್ತ ಮೊದಲ ಪಂದ್ಯ ಸೋತಿರುವ ಬಾಂಗ್ಲಾದೇಶ ತಂಡವು ಸರಣಿಯನ್ನು ಡ್ರಾದಲ್ಲಿ ಕೊನೆಗೊಳಿಸುವ ಇರಾದೆಯಲ್ಲಿದೆ. ಆದರೆ ಮಹತ್ವದ ಪಂದ್ಯಕ್ಕೂ ಮುನ್ನ ಬಾಂಗ್ಲಾದೇಶ ತಂಡದ ಟೆನ್ಷನ್ ಹೆಚ್ಚಿದ್ದು, ತಂಡದ ಅನುಭವಿ ಆಲ್‌ರೌಂಡರ್ ಶಕೀಬ್ ಅಲ್ ಹಸನ್ ಕಾನ್ಪುರ ಟೆಸ್ಟ್‌ನಿಂದ ಹೊರಗುಳಿಯುವ ಸಾಧ್ಯತೆಗಳಿವೆ ಎಂದು ವರದಿಯಾಗಿದೆ.

ಶಕೀಬ್ ಅಲ್ ಹಸನ್‌ಗೆ ಇಂಜುರಿ: ಶಕೀಬ್ ಅಲ್ ಹಸನ್ ಗಾಯದ ಸಮಸ್ಯೆಯ ನಡುವೆಯೂ ಚೆನ್ನೈ ಟೆಸ್ಟ್ ಆಡಿದ್ದರು. ವಾಸ್ತವವಾಗಿ ಕಳೆದ ಏಕದಿನ ವಿಶ್ವಕಪ್ ವೇಳೆ ಶಕೀಬ್ ಎಡಗೈ ಬೆರಳಿಗೆ ಗಾಯವಾಗಿತ್ತು. ಸರಣಿಯ ಮೊದಲ ಪಂದ್ಯದಲ್ಲೂ ಅವರು ಅದೇ ಬೆರಳಿನಲ್ಲಿ ಸಮಸ್ಯೆ ಅನುಭವಿಸಿದರು. ಇದಲ್ಲದೇ ಭುಜದ ಗಾಯದ ಸಮಸ್ಯೆಗೂ ಸಿಲುಕಿದ್ದರು. ಇಂತಹ ಪರಿಸ್ಥಿತಿಯಲ್ಲಿ ಶಕೀಬ್ ಅಲ್ ಹಸನ್ ಈಗ ಎರಡನೇ ಟೆಸ್ಟ್ ಪಂದ್ಯಕ್ಕೂ ಮುನ್ನ ವೈದ್ಯರ ಮೇಲ್ವಿಚಾರಣೆಯಲ್ಲಿದ್ದಾರೆ. ಏತನ್ಮಧ್ಯೆ, ಬಾಂಗ್ಲಾದೇಶದ ಆಯ್ಕೆಗಾರ ಹನ್ನನ್ ಸರ್ಕಾರ್, ಶಕೀಬ್ ಅಲ್ ಹಸನ್ ಗಾಯದ ಬಗ್ಗೆ ದೊಡ್ಡ ಅಪ್‌ಡೇಟ್ ನೀಡಿದ್ದಾರೆ.

**ಸೆಲೆಕ್ಟರ್ ಹೇಳಿದ್ದೇನು:** ಸುದ್ದಿಗಾರರೊಂದಿಗೆ ಮಾತನಾಡಿದ ಬಾಂಗ್ಲಾದೇಶದ ಆಯ್ಕೆಗಾರ ಹನ್ನನ್ ಸರ್ಕಾರ್, 'ಶಕೀಬ್ ನಮ್ಮ ಅತ್ಯುತ್ತಮ ಆಟಗಾರ. ಅವರು ಆಡುವ ಹನ್ನೊಂದರ ಬಳಗದಲ್ಲಿದ್ದಾಗ, ತಂಡದ ಸಂಯೋಜನೆಗಳನ್ನು ಮಾಡುವುದು ನಮಗೆ ಸುಲಭವಾಗುತ್ತದೆ. ಶಕೀಬ್ ಅವರು ಮೊದಲು ಬ್ಯಾಟಿಂಗ್ ಮಾಡಿದ ರೀತಿಗೆ ಹೋಲಿಸಿದರೆ ತಮ್ಮ ಬ್ಯಾಟಿಂಗ್ ಶೈಲಿಯಲ್ಲಿ ಹೆಚ್ಚಿನ ವಿಶ್ವಾಸವನ್ನು ತೋರಿಸಿದರು.

ಅವರು ನಿರಾಳವಾಗಿ ಆಡಿದರು ಮತ್ತು ಒತ್ತಡವನ್ನು ನಿಭಾಯಿಸಿದರು. ಹೌದು, ಅವರು ದೊಡ್ಡ ಸ್ಕೋರ್ ಮಾಡಲಿಲ್ಲ, ಆದರೆ ಅವರು ಯಾವಾಗಲೂ ತಂಡದ ಸಮತೋಲನಕ್ಕೆ ಮುಖ್ಯವಾಗಿದ್ದಾರೆ.



## ವಿಶ್ವ ಮಗಳ ದಿನದಂದು ಅಶ್ವಿನ್ ನೀಡಿದ ವಿಶೇಷ ಉಡುಗೊರೆ ನಯವಾಗಿ ತಿರಸ್ಕರಿಸಿದ ಮಕ್ಕಳು

ಬಾಂಗ್ಲಾದೇಶ ವಿರುದ್ಧದ ಮೊದಲ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾ ಗೆಲುವಿನಲ್ಲಿ ಸ್ಟಾರ್ ಸ್ಪಿನ್ನರ್ ರವಿಚಂದ್ರನ್ ಅಶ್ವಿನ್ ಪ್ರಮುಖ ಪಾತ್ರ ವಹಿಸಿದ್ದಾರೆ. ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಶತಕ ಬಾರಿಸುವ ಮೂಲಕ ಭಾರತವನ್ನು ಸಂಕಷ್ಟದಿಂದ ಪಾರು ಮಾಡಿದ್ದ ಅಶ್ವಿನ್, ಆನಂತರ ನಾಲ್ಕನೇ ಇನ್ನಿಂಗ್ಸ್‌ನಲ್ಲಿ ಬರೋಬ್ಬರಿ 6 ವಿಕೆಟ್ ಪಡೆಯುವಲ್ಲಿ ಯಶಸ್ವಿಯಾದರು. ಹೀಗಾಗಿ ಪಂದ್ಯದುದ್ದಕ್ಕೂ ಅದ್ಭುತ ಪ್ರದರ್ಶನ ನೀಡಿದ ಅಶ್ವಿನ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿಯೂ ಲಭಿಸಿತು. ಚೆನ್ನೈನ ಚೆಪಾಕ್ ಮೈದಾನ ಅಶ್ವಿನ್ ಅವರ ತವರು ಮೈದಾನವಾಗಿದೆ. ಹೀಗಾಗಿ ಈ ಪಂದ್ಯವನ್ನು ವೀಕ್ಷಿಸಲು ಅಶ್ವಿನ್ ಅವರ ಪತ್ನಿ ಮತ್ತು ಪುತ್ರಿಯರು ಸಹ ಕ್ರೀಡಾಂಗಣಕ್ಕೆ ಬಂದಿದ್ದರು. ಪಂದ್ಯ ಮುಗಿದ ಬಳಿಕ ಮೈದಾನದಲ್ಲಿ ಅಶ್ವಿನ್‌ರನ್ನು ಭೇಟಿಯಾದ ಅವರ ಮಡದಿ ಹಾಗೂ ಮಕ್ಕಳು, ಅಶ್ವಿನ್ ಜೊತೆ ನಡೆಸಿದ ಮಾತುಕತೆಯ ವಿಡಿಯೋವನ್ನು ಇದೀಗ ಬಿಸಿಸಿಐ ಹಂಚಿಕೊಂಡಿದೆ. ಏನು ಉಡುಗೊರೆ ನೀಡುತ್ತೀರಿ ಬಿಸಿಸಿಐ ಹಂಚಿಕೊಂಡಿರುವ ವಿಡಿಯೋದಲ್ಲಿ ಮೊದಲಿಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದ ಅಶ್ವಿನ್‌ಗೆ ಅವರ ಪತ್ನಿ ಪ್ರೀತಿ ನಾರಾಯಣನ್ ಮತ್ತು ಇಬ್ಬರು ಪುತ್ರಿಯರು ಅಭಿನಂದನೆ ಸಲ್ಲಿಸಿದ್ದಾರೆ. ಈ ವೇಳೆ ಮಾತನಾಡಿದ ಪ್ರೀತಿ, ಹೆಣ್ಣು ಮಕ್ಕಳ ದಿನದಂದು ನಿಮ್ಮ ಮಕ್ಕಳಿಗೆ ಏನು ಉಡುಗೊರೆ ನೀಡುತ್ತೀರಿ ಎಂದು ಅಶ್ವಿನ್ ಬಳಿ ಕೇಳಿದ್ದಾರೆ. ಇದಕ್ಕೆ ಉತ್ತರಿಸಿದ ಅಶ್ವಿನ್, ಬಾಂಗ್ಲಾದೇಶ ವಿರುದ್ಧ 6 ವಿಕೆಟ್ ತೆಗೆದ ಚೆಂಡನ್ನು ಅವರಿಗೆ ಉಡುಗೊರೆಯಾಗಿ ನೀಡುತ್ತೇನೆ ಎಂದರು. ಇದಕ್ಕೆ ಅವರ ಮಕ್ಕಳು ಅದು ನನಗೆ ಬೇಡ ಎಂದರು. ಹಾಗಾದ್ರೆ ನಿಮಗೆ ಏನು ಬೇಕು ಎಂದು ಅಶ್ವಿನ್ ಕೇಳಿದರು. ಇದಕ್ಕೆ ಅವರ ಮಕ್ಕಳು ಏನನ್ನು ಹೇಳದೆ ಸುಮ್ಮನಾದರು. ಈ ನೆಲದಲ್ಲಿ ಶಕ್ತಿ ಇದೆ ನಿಮ್ಮ ತವರು ಮೈದಾನದಲ್ಲಿ ಈ ರೀತಿಯ ಪ್ರದರ್ಶನ ನೀಡಿರುವುದು ನಿಮಗೆ ಹೇಗೆ ಅನಿಸುತ್ತಿದೆ ಎಂದು ಪ್ರೀತಿ ಕೇಳಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966